ಸಂಪುಟ : 13 ಸಂಚಿಕೆ : 216 ಪುಟಗಳು : 08 ಶನಿವಾರ 11 ಅಕ್ಟೋಬರ್ 2025 ₹2
RNINO:KARKAN/2011/48371 BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಬೆಳಗು

" ನಿಮ್ಮ ಹಾದಿಯಲ್ಲಿ ಮುಳ್ಳು ಚೆಲ್ಲಿದವರ ಹಾದಿಯಲ್ಲಿ ಹೂ ಚೆಲ್ಲಿ

– ಸ್ವಾಮಿ ವಿವೇಕಾನಂದ .

ಸಂಪಾದಕರು: ರಮೇಶ ರೆಡ್ಡಿ

8 ಹೆಣ್ಣು ಶಿಶುವಿನ ಶವ ಪತ್ತೆ | 2. ಕೆಯುಡಬ್ಲ್ಯೂಜೆ ಚುನಾವಣೆ | 4 ಜಿಲ್ಲೆಯಾದ್ಯಂತ ಬೆಳೆಹಾನಿ ವೀಕ್ಷಣೆ

ವೆನೆಜುವೆಲಾದ ವಿಪಕ್ಷ ನಾಯಕಿಗೆ ಶಾಂತಿ ನೊಬೆಲ್

ಮಲ್ಲಮ್ಮ ನುಡಿ ವಾರ್ತೆ

ಓಸ್ಲೋ:ಅ.10:2025ನೇ ಸಾಲಿನ ಪ್ರತಿಷ್ಠಿತ ನೊಬೆಲ್ ಶಾಂತಿ ಪ್ರಶಸ್ತಿ ಈ ಬಾರಿ ಅಮೆರಿಕ ಅಧ್ಯಕ್ಷ ಡೊನಾಲ್ಡ್‌ಟ್ರಂಪ್ ಅವರ ಬದಲು ವೆನೆಜುವೆಲಾದ ವಿಪಕ್ಷ ನಾಯಕಿ ಮರಿಯಾ ಮಚಾದೊ ಅವರಿಗೆ ಲಭಿಸಿದೆ.

ನೋಬೆಲ್ ಶಾಂತಿ ಪ್ರಶಸ್ತಿಗೆ ಭಾಜನವಾಗಿರುವ ಮರಿಯಾ ಅವರು ಒಬ್ಬ ನಿರ್ಭೀತ ಹುಟ್ಟು ಹೋರಾಟಗಾರ್ತಿ. ರಾಕ್–ಸ್ಟಾರ್ ಆಕರ್ಷಣೆಯನ್ನು ಹೊಂದಿರುವ ಮರಿಯಾ ಅವರು ಈಗ ವೆನೆಜುವೆಲಾ ಸಂಸತ್ತಿನಲ್ಲಿ ವಿರೋಧ ಪಕ್ಷದ ನಾಯಕಿಯಾಗಿದ್ದಾರೆ.

ವೆನೆಜುವೆಲಾದ ಅಧ್ಯಕ್ಷ ನಿಕೋಲಸ್ ಮಡುರೋ ಅವರ ಸರ್ವಾಧಿಕಾರದ ವಿರುದ್ಧ ಹೋರಾಡಿದ ಮರಿಯಾ ಅವರು, 2022ರಲ್ಲಿ ಸುಮಾಟೆ ಎಂಬ ಸರ್ಕಾರೇತರ ಸಂಸ್ಥೆಯನ್ನು ಸ್ಥಾಪಿಸಿದರು. ವೆನೆಜುವೆಲಾದಲ್ಲಿ ಚುನಾವಣಾ ಪಾರದರ್ಶಕತೆ ತರುವುದಕ್ಕಾಗಿ ಈ ಸಂಸ್ಥೆ ಹೋರಾಟಗಳನ್ನು, ಜನಾಂದೋಲಗಳನ್ನು ನಡೆಸಿತು.

ವೆನೆಜು ವೆಲಾದ ಪ್ರಜಾಪ್ರಭುತ್ವ ಪರ ಚಳವಳಿಯ ಕೇಂದ್ರವ್ಯಕ್ತಿಯಾದ ಮರಿಯಾ ಕೊರಿನಾ ಮಚಾಡೊ ಪ್ಯಾರಿಸ್ಕಾಲ್ಯಾಟಿನ್ ಅಮೆರಿಕಾದಲ್ಲಿ ನಾಗರಿಕ ಹಕ್ಕಿನ ಹೋರಾಟದ ಪ್ರಮುಖ ಶಕ್ತಿಯಾಗಿದ್ದಾರೆ.

ದಶಕಗಳಿಂದ ಸರ್ವಾಧಿಕಾರಿ ನಿಕೋಲಸ್ ಮಡುರೊ ಅವರ ದಬ್ಬಾಳಿಕೆಯ ಆಡಳಿತವನ್ನು ಧಿಕ್ಕರಿಸಿ, ಬೆದರಿಕೆಗಳು, ಬಂಧನಗಳು ಮತ್ತು ಜಾಜಕೀಯ ಕಿರುಕುಳವನ್ನು ಅನುಭವಿಸಿದ್ದಾರೆ. ನಿರಂತರ ಬೆದರಿಕೆ ಹಾಗೂ

ಅಪಾಯವನ್ನು ಮೆಟ್ಟಿನಿಂತ ಮರಿಯಾ ಅವರು ವೆನೆಜುವೆಲಾದಲ್ಲಿ ಶಾಂತಿ ನೆಲೆಸುವಲ್ಲಿ ಪ್ರಮುಖ ಕೊಡುಗೆ ನೀಡಿದ್ದಾರೆ.

ಶಾಂತಿಯುತ ಪ್ರತಿರೋಧ ಮತ್ತು ಮುಕ್ತ ಚುನಾವಣೆಗಳ ಒತ್ತಾಯದ ಮೂಲಕ ಲಕ್ಷಾಂತರ ಜನರಿಗೆ ಸ್ಫೂರ್ತಿ ನೀಡಿದ್ದಾರೆ.

ವೆನೆಜುವೆಲಾದ ರಾಜಕಾರಣಿ ಮತ್ತು ಕೈಗಾರಿಕಾ ಎಂಜಿನಿಯರ್ ಆಗಿರುವ ಮರಿಯಾ ಅವರು 2011 ರಿಂದ 2014 ರವರೆಗೆ ರಾಷ್ಟ್ರೀಯ ವಿಧಾನಸಭೆಯ ಚುನಾಯಿತ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು.2024ರ ಚುನಾವಣೆಯಲ್ಲಿ ಮಡುರೋ ಅವರನ್ನು ಪ್ರಶ್ನಿಸುವುದನ್ನು ನಿಷೇಧಿಸಲಾಯಿತು. ನಂತರ ವೆನೆಜುವೆಲಾದ ನಾಯಕನಿಗೆ ಪ್ರತಿರೋಧವನ್ನು

2ನೇ ಪುಟನೋಡಿ

ನೊಬೆಲ್ ಸಮಿತಿ ವಿರುದ್ಧ ಶ್ವೇತಭವನ ಕೆಂಡಾಮಂಡಲ

ವಾಷಿಂಗ್ಟನ್: ಪ್ರತಿಷ್ಠಿತ ನೊಬೆಲ್ ಶಾಂತಿ ಪ್ರಶಸ್ತಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್‌ಟ್ರಂಪ್ ಅವರ ಕೈತಪ್ಪಿದ್ದಕ್ಕೆ ಶ್ವೇತಭವನ ಶುಕ್ರವಾರ ನಾರ್ವೇಜಿಯನ್ ನೊಬೆಲ್ ಸಮಿತಿಯ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದೆ.

"ನೊಬೆಲ್ ಸಮಿತಿಯು ಶಾಂತಿಗಿಂತ ರಾಜಕೀಯವನ್ನು ಹೆಚ್ಚಾಗಿ ಇಷ್ಟಪಡುತ್ತದೆ ಎಂಬುದನ್ನು ಇದು ಸಾಬೀತುಪಡಿಸಿದೆ" ಎಂದು ಶ್ವೇತಭವನದ ಸಂವಹನ ನಿರ್ದೇಶಕ ಸ್ಟೀವನ್ ಚೆಯುಂಗ್ ಅವರು ಫಿ ನಲ್ಲಿ ಪೋಸ್ಟ್ ಮಾಡಿದ್ದಾರೆ.ಅಧ್ಯಕ್ಷ ಟ್ರಂಪ್ ಶಾಂತಿ ಒಪ್ಪಂದ ಮಾಡಿಕೊಳ್ಳುವುದನ್ನು, ಯುದ್ಧಗಳನ್ನು ಕೊನೆಗೊಳಿಸುವುದನ್ನು ಮತ್ತು ಜೀವಗಳನ್ನು ಉಳಿಸುವುದನ್ನು ಮುಂದುವರಿಸುತ್ತಾರೆ. ಅವರು ಮಾನವೀಯ ಹೃದಯ ಹೊಂದಿದ್ದಾರೆ ಮತ್ತು ಅವರು ಇಚ್ಛಾಶಕ್ತಿಯ ಸಂಪೂರ್ಣ ಬಲವಿರುವ ವ್ಯಕ್ತಿ. ಅವರಂತೆ ಯಾರೂ ಇರುವುದಿಲ್ಲ" ಎಂದು ಹಾಡಿ ಹೊಗಳಿದೆ.ಟ್ರಂಪ್ ಅವರು ಕಳೆದ ಜನವರಿಯಲ್ಲಿ ತಮ್ಮ ಎರಡನೇ ಅವಧಿಗೆ ಶ್ವೇತಭವನಕ್ಕೆ ಮರಳಿದಾಗಿನಿಂದ, ತಾವು ಹಲವಾರು ಸಂಘರ್ಷಗಳನ್ನು ಪರಿಹರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದು, ತಾವು ನೊಬೆಲ್ ಶಾಂತಿ ಪ್ರಶಸ್ತಿಗೆ ಅರ್ಹರು ಎಂದು ಪದೇ ಪದೇ ಹೇಳುತ್ತಿದ್ದರು.ನೊಬೆಲ್ ಶಾಂತಿ ಪ್ರಶಸ್ತಿ ಘೋಷಣೆಯ ಮುನ್ನಾದಿನದಂದು ಟ್ರಂಪ್ ತಮ್ಮ ಹೇಳಿಕೆಯನ್ನು ಪುನರುಚ್ಚರಿಸಿದರು. ಈ ವಾರ ಗಾಜಾದಲ್ಲಿ ಮೊದಲ ಹಂತದ ಕದನ ವಿರಾಮಕ್ಕೆ ಅವರು ಮಧ್ಯಸ್ಥಿಕೆ ವಹಿಸಿದ್ದು, ತಾವು ಕೊನೆಗೊಳಿಸಿದ ಎಂಟನೇ ಯುದ್ಧ ಎಂದು ಹೇಳಿದ್ದರು.

ಸಭೆಗಳ ಸಬಲೀಕರಣದಿಂದ ಪ್ರಜಾಪ್ರಭುತ್ವ ಸದೃಢ: ಹೊರಟ್ಟಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು ಅ 10 :ಪ್ರಜಾಪ್ರಭುತ್ವದ ಜೀವಾಳವಾಗಿರುವ ಶಾಸನ ಸಭೆಗಳ ವ್ಯವಸ್ಥಿತ ಸಬಲೀಕರಣದಿಂದ ಪ್ರಜಾಪ್ರಭುತ್ವ ಸದೃಢಗೊಂಡು ನಾಗರೀಕರ ಅಭ್ಯುದಯದ ಆಶಯಗಳ ಈಡೇರಿಕೆ ಸಾಧ್ಯ ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ ವ್ಯಕ್ತಪಡಿಸಿದರು.

ಕೆರೆಬಿಯನ್ ಪೂರ್ವ ದ್ವೀಪ ರಾಷ್ಟ್ರವಾಗಿರುವ ಬ್ರಿಟಿಷ್ ಕಾಮನ್‌ವೆಲ್ತ್‌ನ ಗಣರಾಜ್ಯವಾಗಿರುವ ಬಾರ್ಬ್ಯೂಸ್ ದೇಶದ ರಾಜಧಾನಿ ಬಿಜ್ಟ್‌ಟೌನ್ ನಗರದಲ್ಲಿ ನಡೆಯುತ್ತಿರುವ 68ನೇ ಕಾಮನ್‌ವೆಲ್ತ್ ನ ಸಂಸದೀಯ ಸಮಾವೇಶದ ವಿಚಾರಗೋಷ್ಠಿಯಲ್ಲಿ "ಪ್ರಜಾಪ್ರಭುತ್ವದ ಯಶಸ್ಸಿಗೆ ಶಾಸನ ಸಭೆಗಳ ಸಬಲೀಕರಣದ ಅಗತ್ಯತೆ" ಕುರಿತು ತಮ್ಮ ವಿಚಾರ ಮಂಡಿಸಿದ ಬಸವರಾಜ ಹೊರಟ್ಟಿ, ಪ್ರಜಾಪ್ರಭುತ್ವದ ಯಶಸ್ಸಿಗೆ, ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಕ್ರಿಯಾಶೀಲತೆ ಹಾಗೂ ಪಕ್ಷಬೇಧವಿಲ್ಲದ ಅಭಿವೃದ್ಧಿ ಪರ ಚಿಂತನೆ ಅಗತ್ಯವಾಗಿದ್ದು ಅದರಿಂದ ರಾಷ್ಟ್ರದ ಭವಿಷ್ಯ ಉಜ್ವಲವಾಗಬಲ್ಲದು ಎಂದರು. ಪ್ರಜಾಪ್ರಭುತ್ವದ ಮೂಲತತ್ವಗಳನ್ನು ಅನುಷಾ??ನಗೊಳಿಸುವ ಸಂಸತ್ತು, ರಾಜ್ಯ ವಿಧಾನ ಸಭೆ, ವಿಧಾನ ಪರಿಷತ್ತುಗಳೇ ಮೂಲ ಕೇಂದ್ರಗಳಾಗಿದ್ದು, ಅಲ್ಲಿ ನಡೆಯುವ ಕಾರ್ಯ ಚಟುವಟಿಕೆಗಳು, ಸಮಾಜದ ಮೂಲಭೂತ ಅವಶ್ಯಕತೆಗಳ ಮೇಲೆ

2ನೇ ಪುಟನೋಡಿ

ಸದನ ಸಮಿತಿ ಸಭೆಗೆ ತಪ್ಪು ಮಾಹಿತಿ ಕೊಟ್ಟಿದ್ದಕ್ಕೆ ಜಿಲ್ಲಾ

ಮಕ್ಕಳ ರಕ್ಷಣಾ ಅಧಿಕಾರಿಗೆ ನೋಟೀಸ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅ. 10 : ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸಭೆಗೆ ತಪ್ಪು ಮಾಹಿತಿ ನೀಡಿದ್ದಕ್ಕೆ ರಾಯಚೂರು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗೆ ಕಾರಣ ಕೇಳಿ ನೋಟೀಸ್ ಜಾರಿಗೆ ವಿಧಾನಸಭಾ ಸದಸ್ಯರು ಆಗಿರುವ,

ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಎನ್ ಎಚ್ ಕೋನರಡ್ಡಿ ಅವರು ಸೂಚನೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಇನ್ನಿತರ ಇಲಾಖೆಗಳ ಎಲ್ಲಾ ಯೋಜನೆಗಳ ಹಾಗೂ ಕಾರ್ಯಕ್ರಮಗಳ ಬಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅ.10ರಂದು ನಡೆದ ಸಭೆಯಲ್ಲಿ ಮೊದಲಿಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯಕ್ರಮಗಳ ಪರಿಶೀಲನೆ ನಡೆಯಿತು.

ಮಕ್ಕಳ ಕಲ್ಯಾಣ ಸಮಿತಿಯು 84 ಪ್ರಕರಣಗಳಲ್ಲಿ 66 ಪ್ರಕರಣಗಳನ್ನು ವಿಲೆಗೊಳಿಸಿ 18 ಪ್ರಕರಣಗಳು ಬಾಕಿ ಇರುತ್ತವೆ ಎಂದು ಸಮಿತಿಗೆ ನೀಡಿದ ಬುಕಲೇಟನಲ್ಲಿ ದಾಖಲಿಸಿದ್ದೀರಿ. ಆದರೆ, ಪಿಪಿಟಿನಲ್ಲಿ ಬೇರೆ ಅಂಕಿ ಅಂಶಗಳನ್ನು ತೋರಿಸ್ತೀರಿ ಎಂದು ಅಧ್ಯಕ್ಷರು ಪ್ರಶ್ನಿಸಿದರು. ವಾರದ ತರಬೇತಿ ಮುಗಿಸಿ ಸಭೆಗೆ ಆಗಮಿಸಿದ್ದರಿಂದ ಪಿಪಿಟಿಯಷ್ಟೆ ಸರಿಪಡಿಸಿದ್ದೇವೆ. ಬುಕಲೆಟನಲ್ಲಿ ತಿದ್ದುಪಡಿ ಮಾಡಿರುವುದಿಲ್ಲ, ತಪ್ಪಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಪ್ರತಿಕ್ರಿಯಿಸಿದರು.ಸಭೆಯಲ್ಲಿ ಚರ್ಚಿಸುವ ಪ್ರತಿಯೊಂದು ವಿಷಯವೂ ಕಡತಕ್ಕೆ

2ನೇ ಪುಟನೋಡಿ

ಇಬ್ಬರು ಮಕ್ಕಳನ್ನು ಕೊಂದು ತಾಯಿ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.10: ಇಬ್ಬರು ಮಕ್ಕಳನ್ನು ಕೊಂದು ತಾಯಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಬಾಗಲಗುಂಟೆ ಬಳಿಯ ಭುವನೇಶ್ವರಿ ನಗರದಲ್ಲಿ ನಡೆದಿದೆ.



ಭುವನ್ (1), ಬೃಂದಾ (4), ತಾಯಿ ವಿಜಯಲಕ್ಷ್ಮಿ ಮೃತದೇಹ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ. ಗುರುವಾರ ರಾತ್ರಿ ವಿಜಯಲಕ್ಷ್ಮಿ ತಂಗಿ ಮನೆಗೆ ಬಂದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ.ಮೂಲತಃ ರಾಯಚೂರು ಮಸ್ಕಿ ಮೂಲದ ರಮೇಶ್, ವಿಜಯಲಕ್ಷ್ಮಿ ಮದುವೆಯಾಗಿ ಐದು ವರ್ಷವಾಗಿತ್ತು. ಕೌಟುಂಬಿಕ ಕಲಹದಿಂದ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಪತಿ ರಮೇಶ್ ಮಾಲ್ ಒಂದರಲ್ಲಿ ಕೆಲಸ ಮಾಡುತ್ತಿದ್ದರು. ಸಾವಿನ ಬಗ್ಗೆ ನಿಖರ ಕಾರಣ ಇನ್ನು ತಿಳಿದು ಬಂದಿಲ್ಲ. ಮರಣೋತ್ತರ ಪರೀಕ್ಷೆಗಾಗಿ ಮೃತದೇಹಗಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಬಾಗಲಗುಂಟೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

ವಿಜಯಲಕ್ಷ್ಮಿ ಆತ್ಮಹತ್ಯೆಗೆ ಪತಿಯೇ ಕಾರಣ ಎಂದು ಸಂಬಂಧಿಕರು ದೂರಿದ್ದಾರೆ. ರಮೇಶ್ ಮತ್ತೊಂದು

2ನೇ ಪುಟನೋಡಿ

ಸಮಾಜದ ಸ್ವಾಸ್ಥ್ಯ ಕಾಪಾಡಲು ಬದ್ಧರಾಗೋಣ:ಸಲಾದಪೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅ.10:ಸಮಾಜದ ಸ್ವಾಸ್ಥ್ಯ ನಿರ್ಮಾಣದಲ್ಲಿ ಧಾರ್ಮಿಕ ಕ್ಷೇತ್ರಗಳ ಪ್ರತಿನಿಧಿಗಳ ಹಾಗೂ ಸ್ವಾಮೀಜಿಗಳ ಪಾತ್ರ ಪ್ರಮುಖವಾಗಿದೆ ಎಂದು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಶರಣಪ್ಪ ಸಲಾದಪುರ ಹೇಳಿದರು.ನಗರದಲ್ಲಿ ಗುರುವಾರ ನಾನಾ ಮಠಗಳಿಗೆ ಭೇಟಿ ನೀಡಿ ಬಳಿಕ ಮಾತನಾಡಿದರು.

ಮಠಮಾನ್ಯಗಳಿಗೆ ಭೇಟಿ ನೀಡುವ ಭಕ್ತರಿಗೆ ಶ್ರೀಗಳು ಹೆಚ್ಚಿನ ಮುತುವರ್ಜಿ ವಹಿಸಿ ಆಣೆಪ್ರಮಾಣವನ್ನು ಮಾಡಿಸುವ ಮೂಲಕ ಭಕ್ತರನ್ನು ಮದ್ಯಪಾನ ಸೇರಿ ನಾನಾ ವ್ಯಸನಗಳಿಂದ ಮುಕ್ತರನ್ನಾಗಿಸಬೇಕು. ಇದಲ್ಲದೆ ಜನರು ಸಹಸ್ವಯಂ ಜಾಗೃತರಾಗುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಬದ್ಧರಾಗೋಣ ಎಂದು ಮನವಿ ಮಾಡಿದರು.

ಹಲವು ಮಠಗಳಿಗೆ ಭೇಟಿ: ಕುಂಬರಗಿರಿ ಮಠದ ಶ್ರೀ ಷಟಸ್ಥಲ ಬ್ರಹ್ಮಿ ಸೂಗುರೇಶ್ವರ ಶಿವಾಚಾರ್ಯರರು, ಹೋತಪೇಟದ ಕೈಲಾಸ ಮಠದ ಶ್ರೀ ಶಿವಲಿಂಗೇಶ್ವರ ಶರಣರು ಸೇರಿದಂತೆ ಹಲವು ಮಠಾಧೀಶರನ್ನು ಭೇಟಿ ಮಾಡಿ ಮಂಡಳಿ ಉದ್ದೇಶ, ಗುರಿಗಳ ಕುರಿತು ಚರ್ಚೆ ನಡೆಸಿದರು. ಸನ್ಮಾನ: ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರಾಗಿ ಶರಣಪ್ಪ ಸಲಾದಪುರ ಪ್ರಪ್ರಥಮ ಬಾರಿಗೆ ತವರೂ ಕ್ಷೇತ್ರ ಶಹಾಪುರಕ್ಕೆ ಭೇಟಿ ನೀಡಿದ ಹಿನ್ನೆಲೆಯಲ್ಲಿ ಮಠಾಧೀಶರು, ಮುಖಂಡರು ಹಾಗೂ ಅಭಿಮಾನಿಗಳು ಸನ್ಮಾನಿಸಿದರು.

ನರೇಗಾದಡಿ ಹಣ ದುರುಪಯೋಗ: ಲೋಕಾಯುಕ್ತ ದಾಳಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.10–ಬಾಗಲಕೋಟೆ ತಾಲೂಕಿನ ಬೆನಕಟ್ಟಿ ಹಾಗೂ ಇಲಕಲ್ಲ ತಾಲೂಕಿನ ಕಂದಗಲ್ಲ ಗ್ರಾಮ ಪಂಚಾಯತಿಯಲ್ಲಿ ನರೇಗಾ ಯೋಜನೆಯಡಿ ಹಣ ದುರುಪಯೋಗಪಡಿಸಿ ಕೊಂಡಿರುವ ಬಗ್ಗೆ ಬಂದ ದೂರಿನ ಹಿನ್ನೆಲೆಯಲ್ಲಿ ಓರ್ವ ಲೋಕಾಯುಕ್ತ ಡಿಎಸ್‌ಪಿ ಸೇರಿ 4 ಜನ ಪೊಲೀಸ್ ನಿರೀಕ್ಷಕರ ತಂಡ 5 ಕಡೆಗಳಲ್ಲಿ ದಾಳಿ ನಡೆಸಿ ಅವ್ಯವಹಾರದ ಪರಿಶೀಲನೆ ನಡೆಸಿ ದಾಖಲೆ ವಶಪಡಿಸಿಕೊಂಡಿದ್ದಾರೆ.

ಬಾಗಲಕೋಟೆ ತಾಲೂಕಿನ ಬೆನಕಟ್ಟಿ ಗ್ರಾಮ ಪಂಚಾಯತಿಯಲ್ಲಿ ನರೇಗಾ ಯೋಜನೆಯಡಿ ಕಳೆದ 2021–22 ರಿಂದ 2024–25ನೇ ಸಾಲಿನ ಅವಧಿಯಲ್ಲಿ ಗ್ರಾ.ಪಂ ವ್ಯಾಪ್ತಿಯಲ್ಲಿ ಬರದ ಬೆನಕಟ್ಟಿ ಅರಣ್ಯ ಪ್ರದೇಶದ ಸರ್ವೆ ನಂ.1098ರ ಹತ್ತಿರ ಮತ್ತು ಸರ್ಕಾರಿ ದಾಖಲೆ ಇಲ್ಲದೇ ಇರುವ ಗ್ರಾಮದ ಕೆರೆ–1 ಮತ್ತು ಕರೆ–2 ನಿರ್ಮಾಣ, ಅಭಿವೃದ್ಧಿ ಮತ್ತು ಹೂಳೆತ್ತುವ ಕಾಮಗಾರಿ ಹೆಸರಿನಲ್ಲಿ ಒಟ್ಟು 8 ಕಾಮಗಾರಿ ಕೈಗೊಂಡಿರುವುದಾಗಿ ಕಾಗದ ಪತ್ರ ಸೃಷ್ಟಿಸಿ 2.19 ಕೋಟಿ ರೂ. ಗಳ ಹಣವನ್ನು ದುರುಪಯೋಗ ಪಡಿಸಿಕೊಂಡು ಸರ್ಕಾರಕ್ಕೆ ನಷ್ಟವನ್ನುಂಟು ಮಾಡಿರುವುದಾಗಿ ಬೀಳಗಿ ತಾಲೂಕಿನ ಗರಡದಿನ್ನಿ ಪುನರವಸತಿ ಕೇಂದ್ರದ ಮಹೇಶ ಕಾಜಗಾರ ಎಂಬುವವರು ದೂರು ನೀಡಿದ್ದರು.

ಇಲಕಲ್ಲ ತಾಲೂಕಿನ ಕಂದಗಲ್ಲ ಗ್ರಾಮ ಪಂಚಾಯತಿಯಲ್ಲಿ ಕಳೆದ 2022–23 ರಿಂದ 2024–25ನೇ ಸಾಲಿನ ಅವಧಿಯಲ್ಲಿ ನರೇಗಾ ಯೋಜನೆಯಡಿ ಯಾವುದೇ ಕೆಲಸ ಮಾಡದೇ ತಾವೇ

ಮಾಡಿರುವುದಾಗಿ ಹೇಳಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ 57 ಲಕ್ಷ ರೂ.ಗಳ ಹಣ ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ಕಂದಗಲ್ಲ ಗ್ರಾಮದ ವೀರೇಶ ತಿಮ್ಮಣ್ಣ ಗೌಂಡಿ ಲೋಕಾಯುಕ್ತ ಕಚೇರಿಗೆ ದೂರು ನೀಡಿದ್ದರು. ಈ ಎರಡು ಪ್ರಕರಣಗಳಲ್ಲಿ ನ್ಯಾಯಾಲಯದ ವಾರೆಂಟ್ ಪಡೆದುಕೊಂಡು 5 ಕಡೆಗಳಲ್ಲಿ ದಾಳಿ ನಡೆದಿದ್ದು, ಬೆನಕಟ್ಟಿ ಗ್ರಾಪಂ ಮಾಜಿ ಅಧ್ಯಕ್ಷರುಗಳಾದ ವೇಮಣ್ಣ ಯಡಹಳ್ಳಿ ಹಾಗೂ ಬಾಲವ್ವ ಬಸಪ್ಪ ಮಾದರ ಅವರ ಮನೆ ಮತ್ತು ಬೆನಕಟ್ಟಿ ಗ್ರಾ.ಪಂ ಕಾರ್ಯಾಲಯ, ಕಂದಗಲ್ಲ ಗ್ರಾ.ಪಂ ಕಾರ್ಯದರ್ಶಿ ಗ್ರೇಡ್–1 ವೀರನಗೌಡ ಮರಟಗೇರಿ, ಪ್ರಭಾರಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಇವರ ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲೂಕ ನಾಗಲಾಪೂರ ಗ್ರಾಮದಲ್ಲಿರುವ ಮನೆ ಹಾಗೂ ಕಂದಗಲ್ಲ ಗ್ರಾಮ ಪಂಚಾಯತ ಕಾರ್ಯಾಲಯದ ಮೇಲೆ ದಾಖಲೆ ನಡೆಸಲಾಗಿದೆ. ದಾಳಿ ವೇಳೆಯಲ್ಲಿ ಅವ್ಯವಹಾರದ ಬಗ್ಗೆ ದಾಖಲೆಗಳನ್ನು

ವಶಪಡಿಸಿಕೊಳ್ಳಲಾಗಿದೆ ಎಂದು ಬಾಗಲಕೋಟೆ ಲೋಕಾಯುಕ್ತ ಇಲಾಖೆಯ ಪೊಲೀಸ್ ಅಧೀಕ್ಷಕ ಮಲ್ಲೇಶ ಟಿ ತಿಳಿಸಿದ್ದಾರೆ.

ಗಗನಕ್ಕೇರಿದ ಬಂಗಾರದ ಬೆಲೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.10: ದೀಪಾವಳಿ ಹಬ್ಬಕ್ಕೆ ಇನ್ನೇನು ಕೆಲವೇ ದಿನಗಳು ಬಾಕಿಯಿದ್ದು, ಲಕ್ಷ್ಮೀಪೂಜೆಗೆ ಸಿದ್ಧತೆಗಳು ಆರಂಭವಾಗಿವೆ. ಜೊತೆಗೆ ಮದುವೆ ಸೀಜನ್ ಸಹ ಸ್ಟಾರ್ಟ್ ಆಗಿದೆ. ಆದ್ರೇ ಈ ಸಮಯದಲ್ಲೇ ಬಂಗಾರ, ಬೆಳ್ಳಿ ಬಲು ಭಾರವಾಗಿದ್ದು, ಮಧ್ಯಮ ಮತ್ತು ಬಡ ವರ್ಗದವರಿಗೆ ಕೈಗೆ–ಟುಕದಂತಾಗಿದೆ.

ದಿನದಿಂದ ದಿನಕ್ಕೆ ಚಿನ್ನದ ಬೆಲೆ ಗಗನಕ್ಕೇರುತ್ತಿದ್ದು, ಬಂಗಾರದ ಬೆಲೆಯಲ್ಲಿ ಆಲ್ ಟೈಮ್ ರೆಕಾರ್ಡ್ ನಿರ್ಮಾಣವಾಗ್ತಿದೆ. ಕಳೆದ ಒಂದು ವರ್ಷದಲ್ಲಿ 65% ರಷ್ಟು ದರ ಏರಿಕೆ ಆಗಿದ್ದರೂ ಸಹ ಚಿನ್ನದ ಮೇಲೆ ಕ್ರೇಜ್ ಮಾತ್ರ ಕಡಿಮೆ ಆಗಿಲ್ಲ. ಇನ್ನು ಬೆಳ್ಳಿ ಒಂದು ವರ್ಷದಲ್ಲಿ 75%

ಒಂದನೇ ಪುಟದಿಂದ

ವೆನೆಜುವೆಲಾದ ವಿಪಕ್ಷ ನಾಯಕಿಗೆ ಶಾಂತಿ ನೊಬೆಲ್

ಹೆಚ್ಚಿಸಲು ಪ್ರಯತ್ನಿಸಿದ ನಂತರ ಮರಿಯಾ ಅವರೆ ಬಂಧಿಸಲಾಯಿತು ಮತ್ತು ನಂತರ ಬಿಡುಗಡೆ ಮಾಡಲಾಯಿತು.

1967ರ ಅಕ್ಟೋಬರ್ 7ರಂದು ಜನಿಸಿದ ಮರಿಯಾ ಕೊರಿನಾ ಮಚಾದೊ ಅವರು ಇಂಡಸ್ಟ್ರಿಯಲ್ ಇಂಜಿನಿಯರಿಂಗ್(ಕ್ಯಾಟೊಲಿಕಾ ಆಂಡ್ರೆಸ್ ಬೆಲ್ಲೋ ವಿವಿಯಿಂದ) ಪದವಿ ಪಡೆದಿದ್ದಾರೆ.ವೃತ್ತಿಯಲ್ಲಿ ಇಂಡಸ್ಟ್ರಿಯಲ್ ಇಂಜಿನಿಯರ್, ಯುಸಿಎಬಿ ಸಂಸ್ಥೆಯಲ್ಲಿ ಪ್ರಾಧ್ಯಾಪಕಿ, ರಾಜಕೀಯ ವ್ಯಕ್ತಿ ಹಾಗೂ ಮಾನವ ಹಕ್ಕುಗಳ ಹೋರಾಟಗಾರ್ತಿಯಾಗಿದ್ದಾರೆ.

ಪ್ರಜಾಪ್ರಭುತ್ವ ಸದೃಢ: ಹೊರಟ್ಟಿ

ಕೇಂದ್ರಿಕೃತವಾಗಿ ದೇಶದಲ್ಲಿರುವ ಬಡತನ, ಜನರ ಸಂಕಷ್ಟ, ಬವಣೆಗಳ ನಿವಾರಣೆ ನಿಟ್ಟಿನಲ್ಲಿ ಚಿಂತನೆ ನಡೆಸುವ "ಚಿಂತಕರ ಚಾವಡಿ" ಗಳಾಗಿ ಪರಿವರ್ತನೆಯಾಗಿ ಸರ್ಕಾರದ ಆಡಳಿತ ಯಂತ್ರಕ್ಕೆ ಮಾರ್ಗದರ್ಶಿಯಾದಾಗ ಮಾತ್ರ ಪ್ರಜಾಪ್ರಭುತ್ವದ ನೈಜ ಆಶಯಗಳನ್ನು ಈಡೇರಿಸಲು ಸಾಧ್ಯವಾಗುತ್ತದೆ ಎಂದರು.ಇಂದಿನ ಜಾಗತಿಕ ಸಂದರ್ಭದಲ್ಲಿ ನಮ್ಮ ಪ್ರಜಾಪ್ರಭುತ್ವದ ಸಂಸ್ಥೆಗಳು ಸದೃಢಗೊಂಡಿವೆ ಎಂದು ಕೆಲವರು ಅಭಿಪ್ರಾಯಪಡುತ್ತಿದ್ದರೂ ಇಂದಿಗೂ ಸಹ ಆ ಸಂಸ್ಥೆಗಳು ಹಲವಾರು ಸವಾಲುಗಳನ್ನು ಎದುರಿಸುತ್ತಿವೆ ಎಂದು ಹಲವು ಉದಾಹರಣೆಗಳ ಮೂಲಕ ಪ್ರಸ್ತಾಪಿಸಿದ ಬಸವರಾಜ ಹೊರಟ್ಟಿ ಸಾಮಾನ್ಯ ಜನರ ಬದುಕು, ಬವಣೆಗಳ ಬಗೆ ತಿಳಿದುಕೊಳ್ಳಲು ಜನಪ್ರತಿನಿಧಿಗಳು ಸಾರ್ವಜನಿಕರೊಂದಿಗೆ ನೇರ ಸಂಪರ್ಕ ಹೊಂದುವ ಮೂಲಕ ನಿರಂತರ ಬಲವರ್ಧನೆ ಅಗತ್ಯ ಇದರಿಂದ ನಿಜರೂಪದಲ್ಲಿ ಸಾರ್ವಜನಿಕರ ಬದುಕು ಹಸನಗೊಳಿಸಲು ಸಾಧ್ಯ ಎಂದರು. ಪ್ರಜಾಪ್ರಭುತ್ವ ಬಲವರ್ಧನೆಯಲ್ಲಿ ಶಾಸನಗಳ ಸಭೆಗಳ ಜವಾಬ್ದಾರಿ ಜೊತೆಗೆ ನಾಗರೀಕ ಸಮಾಜ ಹಾಗೂ ನಾಗರೀಕರ ಪಾತ್ರದ ಬಗೆಗೆ ವಿಶ್ಲೇಷಿಸಿದ ಬಸವರಾಜ ಹೊರಟ್ಟಿ, ಜವಾಬ್ದಾರಿಯುತ ಹಾಗೂ ಆರೋಗ್ಯ ಪೂರ್ಣ ಪ್ರಜಾಪ್ರಭುತ್ವ ವ್ಯವಸ್ಥೆ ಕಲ್ಪಿಸುವಲ್ಲಿ ಸಾರ್ವಜನಿಕರ ಕ್ರೀಯಾಶೀಲ ಪಾಲ್ಗೊಳ್ಳುವಿಕೆಯ ಅಗತ್ಯತೆಯನ್ನು ಪ್ರತಿಪಾದಿಸಿದರು. ಪ್ರತಿಯೊಬ್ಬ ಪ್ರಜೆಯೂ ದೇಶದ ಬಗೆಗೆ ಉತ್ತರದಾಯತ್ವ ಹಾಗೂ ಪಾರದರ್ಶಕತೆಯ ಹೊಣೆಗಾರಿಕೆಯನ್ನು ಅರಿತಾಗ ಮಾತ್ರ ಪ್ರಜಾಪ್ರಭುತ್ವದ ನೈಜ ಬೇರುಗಳು ಬಲಗೊಳ್ಳಲು ಸಹಕಾರಿಯಾಗುತ್ತದೆ ಈ ನಿಟ್ಟಿನಲ್ಲಿ ದೇಶದ ಪ್ರತಿಯೊಬ್ಬ ನಾಗರೀಕರು ತಮ್ಮ ಹಕ್ಕುಗಳ ಪ್ರತಿಪಾದನೆಯ ಜೊತೆಗೆ ಕರ್ತವ್ಯಗಳನ್ನು ಸಮರ್ಥವಾಗಿ ನಿರ್ವಹಿಸುವ ಮೂಲಕ ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಸದೃಢಗೊಳಿಸುವ ಪಣ ತೊಡಬೇಕಾದ ಅಗತ್ಯತೆ ಹಿಂದೆಂದಿಗಿಂತಲೂ ಇಂದು ಅತಿ ಅವಶ್ಯಕವಾಗಿದೆ ಎಂದು ಅಭಿಪ್ರಾಯ ಪಟ್ಟರು.ಒಂದೇ ಕ್ಷೇತ್ರದಿಂದ ಸತತವಾಗಿ ಎಂಟು ಬಾರಿಗೆ ಆಯ್ಕೆಯಾಗಿ ಹಲವು ಜಾಗತಿಕ ದಾಖಲೆಗಳನ್ನು ನಿರ್ಮಿಸಿದ ಹೆಮ್ಮೆ ತಮ್ಮದಾಗಿದೆ ಎಂದು ತಮ್ಮ ನಾಲ್ಕೂವರೆ ದಶಕಗಳ ಸಂಸದೀಯ ಅನುಭವಗಳನ್ನು ಹಂಚಿಕೊಂಡ ಬಸವರಾಜ ಹೊರಟ್ಟಿ, ಜಾತಿ, ಧರ್ಮ ಲಿಂಗಗಳ ಬೇಧವಿಲ್ಲದೆ ಜನರ ಮತಗಳಿಂದ ಜನಪ್ರತಿನಿಧಿಯಾಗುವ ಅವಕಾಶ ಪ್ರಜಾಪ್ರಭುತ್ವ ಕಲ್ಪಿಸಿಕೊಟ್ಟಿದ್ದು, ಪ್ರತಿಯೊಬ್ಬ ಜನಪ್ರತಿನಿಧಿಯು ವಿಶ್ವಾಸರ್ಹತೆಯಿಂದ ಔದಾರ್ಯವನ್ನು ಮೆರೆದು ದೇಶದ ಅಭ್ಯುದಯಕ್ಕೆ ಕಟಿಬದ್ದರಾಗಿ ಸಂಸದೀಯ ಮೌಲ್ಯಗಳ ರಕ್ಷಣೆಗೆ ಮುಂದಾಗಬೇಕಿದೆ. ಇಂದಿನ ಆಧುನಿಕ ದಿನಮಾನಗಳಲ್ಲಿ ಅಭಿವೃದ್ದಿಯೇ ಪ್ರತಿಯೊಬ್ಬರ ಮೂಲ ಮಂತ್ರವಾಗಬೇಕಿದೆ ಎಂದರು.

ಇಬ್ಬರು ಮಕ್ಕಳನ್ನು ಕೊಂದು ತಾಯಿ ಆತ್ಮಹತ್ಯೆ

ಮದುವೆಯಾಗಿದ್ದು ಡಿವೋರ್ಸ್ ಕೊಡುವಂತೆ ಪತ್ನಿಗೆ ಬೆದರಿಕೆ ಹಾಕುತ್ತಿದ್ದ. ಹೀಗಾಗಿ ಪದೇ ಪದೇ ಕುಟುಂಬದಲ್ಲಿ ಜಗಳ ನಡೆಯುತ್ತಿತ್ತು. ಈ ವಿಚಾರ ಕುಟುಂಬಸ್ಥರ ಬಳಿ ವಿಜಯಲಕ್ಷ್ಮಿ ಹೇಳಿದ್ದಳು. ಈತನ ಹಿಂಸೆಯಿಂದ ಬೇಸತ್ತು ವಿಜಯಲಕ್ಷ್ಮಿ ತನ್ನ ಮಕ್ಕಳನ್ನ ಕೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆಂದು ಆರೋಪಿಸಿದ್ದಾರೆ.

ಮಕ್ಕಳ ರಕ್ಷಣಾ ಅಧಿಕಾರಿಗೆ ನೋಟೀಸ್

ಹೋಗುವ ಮಹತ್ವದ ವಿಧಾನ ಮಂಡಲದ ಸದಸ್ಯರ ಸಮಿತಿ ಸಭೆಗೆ ಹೀಗೆ ತಪ್ಪು ಮಾಹಿತಿ ನೀಡಿದರೆ ಹೇಗೆ? ಅಧಿಕಾರಿಯಾಗಿ ಸರಿಯಾಗಿ ಮಾಹಿತಿ ನೀಡಬೇಕು ಎನ್ನುವ ಜವಾಬ್ದಾರಿ ಬೇಡವಾ? ಎಂದು ಶಾಸಕರು ಮತ್ತು ಸಮಿತಿಯ ಸದಸ್ಯರಾದ ಶರಣಗೌಡ ಕಂದಕೂರ ಹಾಗೂ ಕರೆಮ್ಮ ಜಿ ನಾಯಕ ಅವರು ಅಧಿಕಾರಿಗೆ ತರಾಟೆ ತೆಗೆದುಕೊಂಡರು.ನಿಯಮಿತ ಭೇಟಿ ಕೊಡಿ: ಮಂತ್ರಾಲಯದಿಂದ ಬರುವಾಗ ವಾಹನವೊಂದರಲ್ಲಿ ಮಕ್ಕಳನ್ನು ಕೆಲಸಕ್ಕೆ ಕರೆದೊಯ್ಯುವುದನ್ನು ಖುದ್ದು ನೋಡಿದೆ. ನೀವು, ಕ್ಷೇತ್ರ ಭೇಟಿ ಕೊಡುತ್ತೀರಾ? ಅಂತಹ ಮಕ್ಕಳನ್ನು ಪತ್ತೆ ಹಚ್ಚಿದ್ದೀರಾ? ಎಂದು ಸಮಿತಿಯ ಅಧ್ಯಕ್ಷರು ಜಿಲ್ಲಾ ಕಾರ್ಮಿಕ ಅಧಿಕಾರಿಗೆ ಕೇಳಿದರು. ಗ್ಯಾರೇಜ್, ಹೊಟೆಲ್ ಇನ್ನೀತರ ಕಡೆಗೆ ಪರಿಶೀಲನೆ ನಡೆಸಿ 2023ನೇ ಸಾಲಿನಿಂದ ಇಲ್ಲಿವರೆಗೆ 53 ಕೇಸ್ ದಾಖಲಿಸಿ 7 ಲಕ್ಷ ದಂಡವಿದಿಸಿದ್ದೇವೆ ಎಂದು ಕಾರ್ಮಿಕ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು.

ಈ ಭಾಗದ ಜನರಿಗೆ ತಿಳಿವಳಿಕೆ ಕಡಿಮೆ ಇದ್ದು, ಜನಜಾಗೃತಿ ಮೂಡಿಸಬೇಕು. ಮಕ್ಕಳನ್ನು ಕೆಲಸಕ್ಕೆ ಕಳುಹಿಸದೇ ಶಾಲೆಗೆ ಸೇರಿಸುವಂತ ಜನಜಾಗೃತಿ ಕಾರ್ಯಕ್ರಮಕ್ಕೆ ಹೆಚ್ಚಿನ ಒತ್ತು ಕೊಡಬೇಕು. ಜಿಲ್ಲಾದ್ಯಂತ ನಿಯಮಿತ ಕ್ಷೇತ್ರ ಭೇಟಿ ನೀಡಿ ಪರಿಶೀಲನೆ ನಡೆಸಿ ಎಂದು ಸಮಿತಿಯ ಅಧ್ಯಕ್ಷರು ಕಾರ್ಮಿಕ ಅಧಿಕಾರಿಗೆ ಸೂಚನೆ ನೀಡಿದರು.ಖಾಲಿ ಹುದ್ದೆಗಳ ಭರ್ತಿ ಮಾಡಿ: ದೇವದುರ್ಗ ತಾಲೂಕಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳು ಖಾಲಿ ಇರದಂತೆ ಕ್ರಮವಹಿಸಬೇಕು ಎಂದು ಸಮಿತಿಯ ಸದಸ್ಯರು ಆಗಿರುವ ದೇವದುರ್ಗ ಶಾಸಕರು ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಯಚೂರು ಜಿಲ್ಲೆಯಲ್ಲಿ ಅಂಗನವಾಡಿ ಮೇಲ್ವಿಚಾರಕರ ಮತ್ತು ಸಹಾಯಕರ ಎಲ್ಲ ಖಾಲಿ ಹುದ್ದೆಗಳನ್ನು ಕೂಡಲೇ ಭರ್ತಿಗೆ ಕ್ರಮವಹಿಸಬೇಕು ಎಂದು ಸಮಿತಿಯ ಸದಸ್ಯರಾದ ಹೆಚ್.ಎ.ಇಕ್ಬಾಲ್ ಹುಸೇನ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.ಅಂಗನವಾಡಿ ಕಟ್ಟಡಕ್ಕೆ ಜಾಗ ಇಲ್ಲ: ಸರ್ಕಾರ ಕೊಡುವ ಹಣಕ್ಕೆ ರಾಯಚೂರು ಸಿಟಿ ಪ್ರದೇಶದಲ್ಲಿ ಎಲ್ಲೂ ಜಾಗ ಸಿಗುತ್ತಿಲ್ಲ. ರಾಯಚೂರು ಸಿಟಿಯಲ್ಲಿ 170 ಅಂಗನವಾಡಿಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ ಎಂದು ರಾಯಚೂರು ನಗರ ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ ಅವರು ಸಭೆಗೆ ತಿಳಿಸಿದರು.

ಗಗನಕ್ಕೇರಿದ ಬಂಗಾರದ ಬೆಲೆ

10 ಗ್ರಾಂ ಚಿನ್ನದ ಬೆಲೆ 1,35,000 ರೂ. ಹಾಗೂ ಬೆಳ್ಳಿ ಕೆ.ಜಿಗೆ 1,75,000 ರೂ.ವರೆಗೆ ಹೆಚ್ಚಳವಾಗೋ ಸಾಧ್ಯತೆಯಿದೆ. ಇನ್ನೂ ಒಂದೆರಡು ತಿಂಗಳಲ್ಲಿ ಕೇವಲ 10ರಿಂದ 15% ಮಾತ್ರ ಇಳಿಕೆಯಾಗೋ ನಿರೀಕ್ಷೆಯಿದೆ. ಹೆಚ್ಚಿನ ಇಳಿಕೆಯನ್ನು ನಿರೀಕ್ಷಿಸಲಾಗ್ತಿಲ್ಲ. ಹೀಗಾಗಿ ಶಾಸ್ತ್ರಕ್ಕಾಗಿ ಚಿನ್ನ ಖರೀದಿಸಿ, ಯಾವುದೇ ಕಾರಣಕ್ಕೂ ಚಿನ್ನದ ಮೇಲೆ ಹೂಡಿಕೆ ಮಾಡಬೇಡಿ ಎಂದು ಹಣಕಾಸು ತಜ್ಞರು ಹೇಳುತ್ತಿದ್ದಾರೆ.ಒಟ್ಟಿನಲ್ಲಿ ಮಧ್ಯಮ ಮತ್ತು ಬಡ ವರ್ಗದವರಲ್ಲಿಯೇ ಈ ಚಿನ್ನದ ಮೇಲಿನ ಕ್ರೇಜ್ ಹೆಚ್ಚಾಗಿದೆ. ಇನ್ನು ಸದ್ಯಕ್ಕೆ ಚಿನ್ನ ಹಾಗೂ ಬೆಳ್ಳಿಯ ನಾಗಲೋಟಕ್ಕೆ ಬ್ರೇಕ್ ಬೀಳುವ ಲಕ್ಷಣಗಳಿಲ್ಲ.

ಬಡವರಿಗೆ, ಕೂಲಿ ಕಾರ್ಮಿಕರಿಗೆ ಆಸರೆಯಾದ ಇಂದಿರಾ ಕ್ಯಾಂಟೀನ್

ಬಡವರಿಗೆ ಕೂಲಿ ಕಾರ್ಮಿಕರಿಗೆ, ಕಾಲೇಜು ವಿದ್ಯಾರ್ಥಿಗಳಿಗೆ ಆಸರೆಯಾಗಿ, ಹಸಿವು ನೀಗಿಸುತ್ತಿದೆ ಇಂದಿರಾ ಕ್ಯಾಂಟೀನ್. ಕರ್ನಾಟಕ ಸರ್ಕಾರವು ನಗರ ಪ್ರದೇಶದ ಬಡವರಿಗೆ ಕೂಲಿ ಕಾರ್ಮಿಕರಿಗೆ ಕಡಿಮೆ ಹಾಗೂ ಕೈಗೆಟುಕುವ ದರದಲ್ಲಿ ಆಹಾರ ಒದಗಿಸುವ ನಿಟ್ಟಿನಲ್ಲಿ ಇಂದಿರಾ ಕ್ಯಾಂಟೀನ್ ಆರಂಭಮಾಡಲಾಯಿತು.

ಹಸಿವು ಮುಕ್ತ ಕರ್ನಾಟಕ ಮಾಡುವ ಗುರಿ ಹೊಂದಿರುವ ಭಾಗವಾಗಿ ಆಗಸ್ಟ್ 15, 2017 ರಂದು ಬೆಂಗಳೂರಿನಲ್ಲಿ ಅಧಿಕೃತವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿ ಚಾಲನೆ ನೀಡಿದರು. ಕರ್ನಾಟಕದ ಜಿಲ್ಲೆಗಳು ಮತ್ತು ತಾಲೂಕು ಸ್ಥಳಗಳ ನಾಗರಿಕ ' ವಾರ್ಡ್ ಗಳಲ್ಲಿ ಆಹಾರ ಒದಗಿಸಲಾಗುವುದು. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವಾಲಯ ಆಹಾರ ಸಬ್ಸಿಡಿ ಕಾರ್ಯಕ್ರಮ ಈ ಕ್ಯಾಂಟೀನ್‌ಗಳಿಗೆ ಆಹಾರ ಧಾನ್ಯ ಒದಗಿಸಲಾಗುವುದು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರ ಕಳೆದುಕೊಂಡ ಮೇಲೆ ಈ ಕ್ಯಾಂಟೀನ್‌ಗಳು ನಿಷ್ಕ್ರಿಯಗೊಳ್ಳಲು ಆರಂಭಿಸಿದವು, ನಂತರ 2023 ರಲ್ಲಿ ಮತ್ತೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಮೇಲೆ ಮತ್ತೆ ಪುನಶ್ಚೇತನಗೊಂಡವು. ಬೆಳಗಿನ ಉಪಹಾರ 5 ರೂಪಾಯಿ, ಮಧ್ಯಾಹ್ನ ಮತ್ತು ರಾತ್ರಿ ಊಟಕ್ಕೆ 10 ರೂಪಾಯಿ ದರ ನಿಗದಿ ಮಾಡಲಾಗಿದೆ. ನಗರದ ಬಡವರಿಗೆ, ಗ್ರಾಮೀಣ ಪ್ರದೇಶದಿಂದ ಬರುವ ಜನರಿಗೆ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಇಂದಿರಾ ಕ್ಯಾಂಟೀನ್ ವರದಾನವಾಗಿದೆ.

ಹೊರಗಡೆ ಹೋಟೇಲ್‌ಗಳಲ್ಲಿ ಉಪಹಾರಕ್ಕೆ 50 ರೂ, ಊಟಕ್ಕೆ 100 ಖರ್ಚು ಮಾಡಬೇಕಾಗುತ್ತದೆ. ಇಷ್ಟೊಂದು ದುಬಾರಿದುನಿಯಾದಲ್ಲಿ ಕೂಡ ಕಡಿಮೆ ದರದಲ್ಲಿ ಆಹಾರ ನೀಡುತ್ತಿರುವುದು ಶ್ಲಾಘನೀಯವಾಗಿದೆ. ಆಯಾ ಪ್ರದೇಶದ ಆಹಾರ ಪದ್ಧತಿ ಅನುಗುಣವಾಗಿ ಆಹಾರ ನೀಡಲಾಗುತ್ತಿವುದು ಕೂಡ ಒಂದು ವಿಶೇಷವಾಗಿದೆ. ಉತ್ತರ ಕರ್ನಾಟಕದ ಕಡೆಗೆ ಚಪಾತಿ ಹಾಗೂ ದಕ್ಷಿಣ ಕರ್ನಾಟಕದ ಕಡೆಗೆ ಮುದ್ದೆ ನೀಡಲಾಗುವುದು. ಸಾಮಾನ್ಯ ಜನರು ಹಾಗೂ ಬೆಂಗಳೂರು, ಧಾರವಾಡ, ವಿಜಯಪುರದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಇಂದಿರಾ ಕ್ಯಾಂಟೀನ್ ವರದಾನವಾಗಿದೆ ಎಂದು ಹೇಳಬಹುದು ಹಾಗೂ ಇದರಿಂದಾಗಿ ಇವರಿಗೆ ಉಳಿತಾಯ ಕೂಡ ಆಗುತ್ತದೆ.

ರಾಜ್ಯದ ಪ್ರತಿಯೊಂದು ನಗರ ಪ್ರದೇಶಗಳಲ್ಲಿ ಇಂದಿರಾ ಕ್ಯಾಂಟೀನ್ ಆಗಬೇಕು ಎಂಬುವುದು ಸಾರ್ವಜನಿಕರ ಬೇಡಿಕೆ ಕೂಡ ಆಗಿದೆ.'ಅನ್ನ ದೇವರ ಮುಂದೆ ಇನ್ಯಾವ ದೇವರ ಇಲ್ಲ' ಅನ್ನುವ ಸರ್ವಜ್ಞ ಅವರ ಮಾತಿನ ಹಾಗೆ ಕರ್ನಾಟಕ ಸರ್ಕಾರವು ಪ್ರತಿಯೊಬ್ಬರಿಗೂ ಆಹಾರ ಒದಗಿಸಿ ಹಸಿವು ಮುಕ್ತ ಕರ್ನಾಟಕದ ಕಡೆಗೆ ದಿಟ್ಟ ಹೆಜ್ಜೆ ಹಾಕುತ್ತಿರುವುದು ನಿಜಕ್ಕೂ ಬಣ್ಣನೀಯ. ಮುಂದಿನ ದಿನಗಳಲ್ಲಿ ರಾಜ್ಯ ಸರ್ಕಾರ ಇಂತಹ ಅನೇಕ ಯೋಜನೆಗಳನ್ನು ಹಾಕಿಕೊಂಡು ಜನರ ನೆಮ್ಮದಿ ಹಾಗೂ ಸುಖಕರ ಜೀವನಕ್ಕೆ ನಾಂದಿ ಹಾಡಲಿ.

–ಜಗನ್ನಾಥ ಜಮಾದಾರ
ಅಪ್ರೆಂಟಿಶಿಪ್ ತರಬೇತಿದಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೀದರ

ಧರ್ಮಸ್ಥಳದ ಕಾರ್ಯ ದೇವರು ಮೆಚ್ಚುವ ಕಾರ್ಯ: ಗುರುಬಸವ ಪಟ್ಟದ್ದೇವರು



ದೇಹವೇ ದೇಗುಲ ಎಂದು ಬಸವಾದಿ ಶರಣರು ತಿಳಿಸಿದ್ದಾರೆ. ನಾವು ನಮ್ಮ ದೇಹ ಉತ್ತಮ ವಾಗಿರಿಸಲು ವ್ಯಸನ ಮುಕ್ತ ಜೀವನ ನಡೆಸಬೇಕು. ದೇಹ ವೆಂಬ ದೇಗುದಲ್ಲಿ ದೇವರನ್ನು ಕಾಣಬೇಕಾದರೆ ವ್ಯಸನದ ದಾಸರಾಗದೇ ಉತ್ತಮ ಜೀವನ ಸಾಗಿಸಿರಿ.

ಶ್ರೀ ಗುರುಬಸವ ಪಟ್ಟದ್ದೇವರು,
ಪೀಠಾಧಿಪತಿಗಳು,
ಹಿರೇಮಠ ಸಂಸ್ಥಾನ ಭಾಲ್ಕಿ.

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.10: ಧರ್ಮಸ್ಥಳದ ಧರ್ಮಾಧಿಕಾರಿ ಡಾ। ವೀರೇಂದ್ರ ಹೆಗ್ಗಡೆಯವಾರ ಕಾರ್ಯ ದೇವರು ಮೆಚ್ಚುವ ಕಾರ್ಯವಾಗಿದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ಕುಂಬಾರ ಗುಂಡಯ್ಯಾ ಕಲ್ಯಾಣ ಮಂಪಟದಲ್ಲಿ ಶುಕ್ರವಾರ ನಡೆದ 1995 ಮಧ್ಯವರ್ಜನ ಶಿಬಿರ ಸಮಾರೋಪದ ಸಾನಿಧ್ಯವಹಿಸಿ ಅವರು ಮಾತನಾಡಿದರು. ವ್ಯಸನ ಮುಕ್ತ ಜೀವನ ನಡೆಸಲು ಸಹಕರಿಸುವಂತಹ ಧರ್ಮಸ್ಥಳದ ಧರ್ಮಾಧಿಕಾರಿ ಡಾ। ವೀರೇಂದ್ರ ಹೆಗ್ಗಡೆಯವರ ಕಾರ್ಯ ದೇವರು ಮೆಚ್ಚುವಂತಹ ಕಾರ್ಯವಾಗಿದೆ. ಅಶುದ್ಧಿಗಳಿಗೆ ಶುದ್ಧಗೊಳಿಸುವ ಕಾರ್ಯ ಧರ್ಮಸ್ಥಳ ಧರ್ಮಾಧಿಕಾರಿಗಳದ್ದಾಗಿದೆ ಎಂದರು. ಸಂಘದಿಂದ ಸಂಸ್ಕಾರ ಉಂಟಾಗುತ್ತದೆ. ಹೀಗಾಗಿ ಮಧ್ಯವರ್ಜನ ಶಿಬಿರದಲ್ಲಿ ಪಾಲ್ಗೊಂಡ ಎಲ್ಲಾ ಶಿಬಿರಾರ್ಥಿಗಳು ಮುಂದಿನ ಜೀವನ ಉತ್ತಮರ ಸಂಘದೊಂದಿಗೆ ಕಳೆಯಬೇಕು. ಕುಟುಂಬದ ಸಮೃದ್ಧಿ ಮತ್ತು ಕಸ್ಪಗಳೆರಡಕ್ಕೂ ನೀವೇ ಕಾರಣರು, ನೀವು ಉತ್ತಮರ ಸಂಘದೊಂದಿಗೆ ವ್ಯಸನ ಮುಕ್ತ ಜೀವನ ನಡೆಸಿದರೆ, ನಿಮ್ಮ ಕುಟುಂಬ ಸುಖ ಶಾಂತಿ ಸಮೃದ್ಧಿಯಿಂದ ಮುನ್ನೆಡೆಯುವುದು ಎಂದು ಹೇಳಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಟ್ರಸ್ಟ್ ಜಿಲ್ಲಾ ನಿರ್ದೇಶಕ ಮುರಳಿಧರ ಎಚ್.ಎಲ್ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮತ್ತು ಅದರ ಅಂಗ ಸಂಸ್ಥೇಗಳಾದ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್, ಶ್ರೀ ಧರ್ಮಸ್ಥಳ ಕಂಜುನಾಥೇಶ್ವರ ವ್ಯವಸನಮುಕ್ತಿ ಮತ್ತು ಸಂಶೋಧನಾ ಕೇಂದ್ರ ಲೈಲಾ, ಕರ್ನಾಟಕ ರಾಜ್ಯ ಮಧ್ಯಪಾನ ಸಂಯಮ ಮಂಡಳಿ ಸೇರಿದಂತೆ ವಿವಿಧ ಸಂಘಗಳು ಕೈ ಜೋಡಿಸಿ, ಮಧ್ಯವರ್ಜನ ಶಿಬಿರ ಆಯೋಜಿಸಿದ್ದು ಸುಮಾರು 8 ದಿನಗಳಕಾಲ ನಡೆಸಿರುವ ಈ ಮಧ್ಯವರ್ಜನ ಶಿಬಿರ ತುಂಬಾ ಯಶಸ್ವಿಯಾಗಿದೆ. ಇಲ್ಲಿ ಸೇರಿರುವ ಸುಮಾರು 65 ಶಿಬಿರಾರ್ಥಿಗಳು ವ್ಯಸನಮುಕ್ತರಾಗಿ ತಮ್ಮ ಮುಂದಿನ ಜೀವನ ಉತ್ತಮರೀತಿಯಿಂದ ರೂಪಿಸಿಕೊಳ್ಳಬೇಕು. ನಮ್ಮವರು ನಮ್ಮನ್ನೂ ಪ್ರೀತಿಸದಿದ್ದಾಗ ನಮಗೆ ಚಟಗಳು ಅಂಟಿಕೊಳ್ಳುತ್ತವೆ. ಹೀಗಾಗಿ ಗಂಡ, ಹೆಂಡತಿಯರು, ತಂದೆ, ತಾಯಿ ಮಕ್ಕಳು ಒಬ್ಬರನ್ನೊಬ್ಬರು ಪ್ರೀತಿ ವಿಶ್ವಾಸದಿಂದ ಕಾಲ ಕಳೆಯಬೇಕು. ಶಿಬಿರಾರ್ಥಿಗಳು ತಮ್ಮ ಮುಂದಿನ ಜೀವನದಲ್ಲಿ ದೇವರಿಗೆ ಪ್ರತೀಪಾತ್ರರಾಗುವಂತೆ ಬಾಳಬೇಕು ಎಂದು ಹೇಳಿದರು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಸಂತೋಷ ಟಿ.ಎನ್ ಪ್ರಾಸ್ತಾವಿಕ ಮಾತನಾಡಿದರು. ಮುಖಂಡರಾದ ಅಮರ ಹಲಮಂಡಗೆ, ಜಯರಾಜ ದಾಬಶೆಟ್ಟಿ, ಶಿವುಲೋಖಂಡೆ, ಸಂತೋಷ ಬಿಜಿಪಾಟೀಲ ಶಿಬಿರಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು. ಮಧ್ಯವರ್ಜನ ಶಿಬಿರ ವ್ಯವಸ್ಥಾಪನ ಸಮಿತಿ ಅಧ್ಯಕ್ಷ ಸುಭಾಷ ಹುಲಸೂರೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇದೇವೇಳೆ ಶಿಬಿರಾರ್ಥಿಗಳಿಗೆ ನವದಂಪತಿಗಳಾಗಿ ಮಾಡಿ, ಪುನರ್ವಿವಾಹ ಮಾಡಲಾಯಿತು. ಶೀಗಳಿಂದ ತೀರ್ಥಾಪಣ ಮಾಡಿ ಆಶಿರ್ವದಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಮುಖರಾದ ಬಸವರಾಜ ವಂಕೆ, ಸೋಮನಾಥಪ್ಪ ಅಸ್ಟೂರೆ, ಸುರೇಶ ಕನಶೆಟ್ಟಿ, ವಿಜಯಕುಮಾರ ರಾಜಭವನ, ಶಿವರಾಜ ಮಲ್ಲೇಶಿ, ತಿಪ್ಪಣ್ಣ ಶಿವಪೂರೆ, ಶಿವಾನಂದ ಲಕಾಟಿ, ರಾಜೇಶ, ರೇಷ್ಮಾ ತಮಾಸಂಗೆ, ಲಾಯಾಪ್ಪ ಸಂಘ, ಫಕೀರಪ್ಪ ಬೆಲ್ಲಾಮುದ್ದಿ, ಶ್ರೀಕಾಂತ ಶೇಗುಣಸಿ, ವೀರೇಶ ಉಪಸ್ಥಿತರಿದ್ದರು.

ಸಮಾಜ ಸೇವಕ ಶ್ರೀಕಾಂತ್ ರೆಡ್ಡಿ ಅವರ ನೇತೃತ್ವದಲ್ಲಿ ಎಂ ಎಸ್ ಪಾಟೀಲ್ ನರಿಬೋಳ ಅವರ ಜನ್ಮ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿಯ ಅಧ್ಯಕ್ಷರು ಹಾಗೂ ರೈತ ಮುಖಂಡರಾದ ಎಂ ಎಸ್ ಪಾಟೀಲ್ ನರಿಬೋಳ ಅವರ ಜನ್ಮದಿನಾಚರಣೆಯನ್ನು ಸಮಾಜ ಸೇವಕರಾದ ಶ್ರೀಕಾಂತ್ ರೆಡ್ಡಿ ಅವರ ನೇತೃತ್ವದಲ್ಲಿ ಹಾಗೂ ಹಿಂದೂ ಪರ ಸಂಘಟನೆಗಳು ಕನ್ನಡ ಪರ ಸಂಘಟನೆಗಳ ನೇತೃತ್ವದಲ್ಲಿ ನಗರದ ಸೈಯದ್ ಚಿಂಚೋಳಿ ಕ್ರಾಸ್ ಬಳಿ ಇರುವ ಮಹಾದೇವಿ ತಾಯಿ ಮಹಿಳಾ ವಿದ್ಯಾವರ್ಧಕ ಸಂಘದ ವೃದ್ಧಾಶ್ರಮದಲ್ಲಿ ವೃದ್ಧರ ಸಮ್ಮುಖದಲ್ಲಿ ಕೇಕ್ ಕತ್ತರಿಸಿ ನಂತರ ಅನ್ನಸಂತರ್ಪಣೆ ಕಾರ್ಯಕ್ರಮ ಮಾಡುವುದರ ಮೂಲಕ ಎಂ ಎಸ್ ಪಾಟೀಲ್ ನರಿಬೋಳ್ ಅವರ ಜನ್ಮ ದಿನಾಚರಣೆ ಅತಿ ಸರಳತೆಯಿಂದ ಆಚರಣೆ ಮಾಡಲಾಯಿತು.

ಬಳಿಕ ಮಾತನಾಡಿದ ಸಂಘಟನೆಯ ಮುಖಂಡರು ಎಂ ಎಸ್ ಪಾಟೀಲ್ ನರಿಬೋಳ್ ಅವರ ಕೊಡುಗೆ ಸಮಾಜಕ್ಕೆ ಅಪಾರವಾಗಿದೆ ಸರಳ ಸಜ್ಜನಿಕೆಯ ವ್ಯಕ್ತಿತ್ವ ಹೊಂದಿದವರು ಎಂ ಎಸ್ ಪಾಟೀಲ್ ನರಿಬೋಳ್ ಅವರು ಹಾಗಾಗಿ ಆ ಭಗವಂತನ ಆಶಿರ್ವಾದ ಸದಾ ಅವರ ಮೇಲೆ ಹೀಗೆ ಇರಲಿ ಅವರಿಗೆ ಆಯುಷ್ ಆರೋಗ್ಯ ಸಮೃದ್ಧಿ ಕೊಟ್ಟು ಕಾಪಾಡಲಿ ಎಂದು ಆ ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಮತ್ತೋಮ್ಮೆ ಎಂ ಎಸ್ ಪಾಟೀಲ್ ನರಿಬೋಳ್ ಅವರಿಗೆ ಜನ್ಮ ದಿನಾಚರಣೆಯ ಶುಭಾಶಯಗಳು ತಿಳಿಸಿದರು.

ಈ ಸಂದರ್ಭದಲ್ಲಿ ಜಾಗೃತಿ ಸೇನೆ ಜಿಲ್ಲಾಧ್ಯಕ್ಷ ಲಕ್ಷ್ಮಿಕಾಂತ ಸ್ವಾದಿ, ರೈತ ಮುಖಂಡರಾದ ನಾಗೇಂದ್ರ ತಾಂಬೆ, ವೀರ ಶಿವಾಜಿ ಸೇನೆಯ ಜಿಲ್ಲಾಧ್ಯಕ್ಷ ಶ್ರೀಕಾಂತ್ ಜಾದವ್, ರಾಮ ಸೇನೆ ವಿಭಾಗೀಯ ಅಧ್ಯಕ್ಷ ಗುಂಡು ಪಾಟೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕ್ರೀಡೆಯಲ್ಲಿ ಪಾಲ್ಗೊಳ್ಳುವಿಕೆ ಮುಖ್ಯ :ಪ್ರೊ ಅಲಿ ರಜಾ ಮೂಸ್ವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಕ್ರೀಡೆಯಿಂದ ಮಾನಸಿಕ ಮತ್ತು ದೈಹಿಕ ಬೆಳವಣಿಗೆಯಾಗುತ್ತದೆ. ಒತ್ತಡದ ಬದುಕಿನ ಮಧ್ಯೆ ಮನಸ್ಸನ್ನು ಉಲ್ಲಾಸಿತಗೊಳಿಸಲು ಯಾವುದೇ ಕ್ರೀಡೆ ಪರಿಣಾಮಕಾರಿ ಎಂದು ಖಾಜಾ ಬಂದಾನವಾಜ ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊ ಅಲಿ ರಜಾ ಮೂಸ್ವಿ ನುಡಿದರು.

ಖಾಜಾ ಬಂದಾನವಾಜ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಏರ್ಪಡಿಸಿದ್ದ ಕ್ರೀಡೆ ಮತ್ತು ಸಾಂಸ್ಕೃತಿಕ ಹಬ್ಬ 2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಗಳು ಮನಸ್ಸನ್ನು ತಾಜಾಗೊಳಿಸುತ್ತವೆ. ಕ್ರೀಡೆ–ಯು ಒಟ್ಟಾರೆ ಆರೋಗ್ಯವನ್ನು ಸುಧಾರಿಸುತ್ತದೆ. ಕ್ರೀಡಾಂಗಣ ಪ್ರವೇಶಿಸಿದಾಗ ಜಗತ್ತನ್ನು ಮರೆತುಬಿಡುತ್ತೀರಿ ಮತ್ತು ನಿಮ್ಮ ಒತ್ತಡ ಕಡಿಮೆಯಾಗುತ್ತದೆ. ವಿದ್ಯಾರ್ಥಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕರೆ ನೀಡಿದರು. ಆಯೋಜನೆ ಗಾಗಿ ಶ್ರಮಿಸಿದ ಎಲ್ಲರಿಗೆ ಅಭಿನಂದಿಸಿದರು. ಇದು ಟೀಮವರ್ಕ್. ಭಾಗವಹಿಸಿದ ಎಲ್ಲರಿಗೂ ನಾನು ಶುಭ ಹಾರೈಸಿದರು.

ಕೆಬಿಎನ್ ವಿವಿಯ ಕುಲಸಚಿವ ಮಿರ ವಿಲಾಯತ ಅಲಿ ಇವರು ಮಾತನಾಡುತ್ತ, ಆಟಗಳಲ್ಲಿ ಗೆಲ್ಲುವುದು ಅಥವಾ ಸೋಲುವುದು ಮಹತ್ವ ಅಲ್ಲ. ನ್ಯಾಯೋಚಿತ ಆಟ ಅರ್ಥಪೂರ್ಣ. ನಿಜವಾದ ಗೆಲುವು ಎಂದರೆ ಭಾಗವಹಿಸುವಿಕೆ. ವಿದ್ಯಾರ್ಥಿಗಳ ಪರಿಪೂರ್ಣ ಬೆಳವಣಿಗೆಗೆ ಇಂತಹ ಅವಕಾಶಗಳು ಅವಶ್ಯಕವಾಗಿವೆ.

ಕಾರ್ಯಕ್ರಮದಲ್ಲಿ ಕ್ರೀಡಾ ಜ್ಯೋತಿ ಸಂಚಾರದ ಬಳಿಕ ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧಿಸಲಾಯಿತು.

7 ದಿನಗಳ ಕಾಲ ವಿದ್ಯಾರ್ಥಿಗಳಿಗೆ ಕ್ಯಾರಮ, ಚೆಸ, ಬ್ಯಾಡ್ಮಿಂಟನ, ವಾಲಿಬಾಲ, ಥ್ರೋ ಬಾಲ, ಶಾಟ ಪುಟ, ರಂಗೋಲಿ, ಮೆಹಂದಿ, ಪೇಂಟಿಂಗ, ಪೋಸ್ಟರ, ಗಾಯನ, ನೃತ್ಯ ಸೇರಿದಂತೆ ವಿವಿಧ ಕ್ರೀಡೆ ಮತ್ತು ಸಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಸೂಫಿಯನ ಪ್ರಾರ್ಥಿಸಿದರೆ, ವಿದ್ಯಾರ್ಥಿ ಕಲ್ಯಾಣ ಡೀನ ಡಾ ಅನೂಪ ಸ್ವಾಗತಿಸಿದರು. ಸಹಾಯಕ ಪ್ರಧ್ಯಪಾಕ ಡಾ. ಮಾರೂಫ ವಂದಿಸಿದರೆ, ಗಣಿತ ವಿಭಾಗದ ಮುಖ್ಯಸ್ಥೆ ಡಾ. ಸನಾ ಇಜಾಜ್ ನಿರೂಪಿಸಿದರು.

ಕೆಬಿಎನ್ ವಿವಿಯ ಮೈದಾನದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಖಾಜಾ ಬಂದಾನವಾಜ ವಿವಿಯ ಅಕ್ಯಡೆಮಿಕ ಡೀನ ಡಾ ಜಮಾ ಮೂಸ್ವಿ, ಮೆಡಿಕಲ ಡೀನ ಡಾ. ಗುರು ಪ್ರಸಾದ, ಇಂಜಿನಿಯರಿಂಗ ಡೀನ ಪ್ರೊ ಸುಭಾಸ ಕಮಲ, ಕಲಾ, ಭಾಷಾ, ಮಾನವೀಕತೆ, ಸಮಾಜ ವಿಜ್ಞಾನ ಮತ್ತು ಕಾನೂನು ಡೀನ ಡಾ. ನಿಶಾತ ಆರೀಫ್ ಹುಸೇನಿ, ಶಿಕ್ಷಣ ಡೀನ ಮೊಹ್ಮದ ಇಕ್ಬಲ, ವಾಣಿಜ್ಯ ಡೀನ ಪ್ರೊ ಶ್ರೀನಿವಾಸ ಹಾಗೂ ಎಲ್ಲ ಮುಖ್ಯ ಸ್ಥರು, ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯ:

ಸಮೀಕ್ಷೆಗೆ ಸಂಬಂಧಿಸಿದಂತೆ ಮಾಹಿತಿ ಪಡೆಯಲು ಸಹಾಯವಾಣಿ ಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.10– 2025ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಹಮ್ಮಿಕೊಂಡಿರುವ ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು 2025ರ ಅಕ್ಟೋಬರ್ 18ರವರೆಗೆ ವಿಸ್ತರಿಸಲಾಗಿದ್ದು, ಸಾರ್ವಜನಿಕರು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಪಡೆಯಲು ಜಿಲ್ಲಾ ಮಟ್ಟದ ಸಹಾಯವಾಣಿ ಕೇಂದ್ರ ಹಾಗೂ ತಾಲೂಕು ಮಟ್ಟದಲ್ಲಿ ಆಯಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ಕೇಂದ್ರ ಸ್ಥಾಪಿಸಿದ್ದು, ಈ ಕೆಳಕಂಡ ಸಹಾಯವಾಣಿ ಕೇಂದ್ರ ಅಧಿಕಾರಿಗಳ ದೂರವಾಣಿ/ಮೊಬೈಲ್ ಸಂಖ್ಯೆ ಮೂಲಕ ಪ್ರತಿದಿನ ಬೆಳಿಗ್ಗೆ 8 ರಿಂದ ರಾತ್ರಿ 8 ಗಂಟೆಯವರೆಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

ಕಲಬುರಗಿ ಜಿಲ್ಲೆಯ ಸಾರ್ವಜನಿಕರು ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯಕ್ಕಾಗಿ ಗಣತಿದಾರರು ತಮ್ಮ ಮನೆಗೆ ಬಂದಾಗ ಅವರಿಗೆ ಸಂಪೂರ್ಣವಾಗಿ ಸಹಕಾರ ನೀಡಿ ಈ ಗಣತಿ ಕಾರ್ಯಕ್ಕೆ ಸಹಕರಿಸಬೇಕೆಂದು ಕಲಬುರಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಹಾಗೂ ಜಿಲ್ಲಾ ಸಮನ್ವಯ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಕಲಬುರಗಿ ಜಿಲ್ಲಾ ಮಟ್ಟದ ಸಹಾಯವಾಣಿ ಕೇಂದ್ರ: ಕಲಬುರಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿಯ ಸಹಾಯವಾಣಿ ಸಂ–ಖ್ಯೆ 9148489157 ಇರುತ್ತದೆ. ಕಲಬುರಗಿ ಮಹಾನಗರ ಪಾಲಿಕೆಯ ಸಹಾಯವಾಣಿ ಸಂಖ್ಯೆ 8310553566, 9164951852, 8296454897 ಹಾಗೂ ದೂರವಾಣಿ ಸಂಖ್ಯೆ 08472–241364ಗೆ ಸಂಪರ್ಕಿಸಬೇಕು. ಅಫಜಲಪೂರ: ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ ಸಹಾಯವಾಣಿ ಸಂಖ್ಯೆ 9902234422, 8123143853, 9945222150. ಆಳಂದ: ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ ಸಹಾಯವಾಣಿ ಸಂಖ್ಯೆ 9902814080, 8951818757, 8317482505. ಚಿಂಚೋಳಿ: ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ 8971434083, 7259561647, 9008032272. ಚಿತ್ತಾಪೂರ: ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ 9900606212, 9663116323, 9731794650. ಕಲಬುರಗಿ: ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ 8073724385, 8497008535, 7892289496. ಜೇವರ್ಗಿ: ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ 9740478340, 9036501063, 8660798426. ಸೇಡಂ: ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ 8073985708, 9900103194, 9036132371.

ಗಣತಿದಾರರು ಒಂದು ವೇಳೆ ನಾಗರೀಕರ ಮನೆಗಳಿಗೆ ಗಣತಿ ಮಾಡಲು ಸಂಪರ್ಕಿಸದೇ ಇದ್ದಲ್ಲಿ, ಕಲಬುರಗಿ ನಗರ ವ್ಯಾಪ್ತಿಯ ನಾಗರೀಕರು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು,/ಅಧಿಕಾರಿಗಳು/ವಲಯ ಆಯುಕ್ತರು ಮತ್ತು ತಾಲ್ಲೂಕು ಹಂತದ ವ್ಯಾಪ್ತಿಯ ನಾಗರೀಕರು ಸಂಬಂಧಿಸಿದ ತಾಲ್ಲೂಕಿನ ತಹಶೀಲ್ದಾರ್/ಕಾರ್ಯನಿರ್ವಾಹಕ ಅಧಿಕಾರಿಗಳು/ಕ್ಷೇತ್ರ ಶಿಕ್ಷಣಾಧಿಕಾರಿಗಳು/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳನ್ನು ಸಂಪರ್ಕಿಸಿ ಗಣತಿಯ ಮಾಹಿತಿಯನ್ನು ನೀಡಬಹುದಾಗಿದೆ. ಸಾರ್ವಜನಿಕರು ಗಣತಿದಾರರಿಗೆ ಮಾಹಿತಿ ನೀಡಲು ಇಚ್ಚಿಸದೇ ಇದ್ದಲ್ಲಿ ತಮ್ಮ ಮನೆಯ ಮಾಹಿತಿಯನ್ನು ಸ್ವಯಂ ಭರ್ತಿ ಮಾಡಿಕೊಳ್ಳಲು ಸಹ ಅವಕಾಶ ಕಲ್ಪಿಸಲಾಗಿದ್ದು,ಎಣಣಥಿ://ಞಛಿಛಥಿ–ಜಟಜಿಜಜಟಛಿಟಜಡಿಚಿಣಿಟಠಟಿ. ಞಚಿಡಿಟಿಚಿಣಚಿಞಚಿ.ಠಠತ.ಒಟಿ ಗೆ ಸಂಪರ್ಕಿಸಿ ಮಾಹಿತಿಯನ್ನು ಅಪ್‌ಡೇಟ್ ಮಾಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಭಾರತ ಮುಕ್ತಿ ಮೋರ್ಚಾ, ಯುನಿಟಿ ಆಫ್ ಮೂಲನಿವಾಸಿ ಬಹುಜನ ಸಂಘಟನೆ ಹಾಗೂ ಸ್ಲಂ ಜನರ ಸಂಘಟನೆಯಿಂದ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಭಾರತ ಮುಕ್ತಿ ಮೋರ್ಚಾ ಮತ್ತು ಯುನಿಟಿ ಆಫ್ ಮೂಲನಿವಾಸಿ ಬಹುಜನ ಸಂಘಟನೆ ಹಾಗೂ ಸ್ಲಂ ಜನರ ಸಂಘಟನೆಯ ನೂರಾರು ಕಾರ್ಯಕರ್ತರು ತಿಮ್ಮಾಪುರ ಸರ್ಕಲ್ ವೃತ್ತದಿಂದ ಪ್ರತಿಭಟನೆ ಮಾಡುತ್ತಾ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಆಗಮಿಸಿ ನ್ಯಾ.ಬಿ.ಆರ್. ಗವಾಯಿ ಮೇಲೆ ಶೂ ಎಸೆದ ರಾಕೇಶ ಕಿಶೋರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಹಾಗೂ ಸಮಾಜದ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಹಕ್ಕೋತ್ತಾಯಗಳು

ಸುಪ್ರೀಂ ಕೋರ್ಟನ ಮುಖ್ಯ ನ್ಯಾಯಾಧೀಶ ಬಿ.ಆರ್ ಗವಾಯಿಯವರ ಮೇಲೆ ಶೂ ಎಸೆಯಲು ಪ್ರಯತ್ನಿಸಿದ ರಾಕೇಶ ಕೀಶೋರರವರ ಮೇಲೆ ಗುಂಡಾ ಕಾಯ್ದೆ ಪ್ರಕರಣ ದಾಖಲಿಸಿ ಗಡಿಪಾರು ಮಾಡಿ ಸೂಕ್ತ ಕ್ರಮ ಜರುಗಿಸಬೇಕು, ತಾಲೂಕ ಚಿಂಚೋಳಿ ಮತ್ತು ಕಾಳಗಿ ತಾಲೂಕಿನಲ್ಲಿ ಕೇಂದ್ರ ಸ್ಥಾನದಲ್ಲಿರದ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಪಂಚಾಯತ್ ರಾಜ್ ಸಾಹಯಕ ಅಭಿಯಂತರರು ಚಿಂಚೋಳಿ ಸಾಹಯಕ ನಿರ್ದೇಶಕರು ತೋಟಗಾರಿಕೆ ಇಲಾಖೆ ಕೆಈಬಿ ಸಾಹಯಕ ಅಭಿಯಂತರರು ಇವರಿಗೆ ಸೂಕ್ತ ಮಾರ್ಗದರ್ಶನ ನೀಡಿ ಸಾರ್ವಜನಿಕರಿಗೆ ತೊಂದರೆ–ಯಾಗದಂತೆ ಮತ್ತು ಇಲಾಖೆಗಳ ಬಗ್ಗೆ ಜನರಿಗೆ ಮಾಹಿತಿ ನೀಡುವಂತೆ ಸೂಚಿಸಬೇಕು, ತಾಲೂಕ ಚಿಂಚೋಳಿ ಮತ್ತು ಕಾಳಗಿ ತಾಲೂಕಿನಲ್ಲಿ ಬಿ.ಸಿ.ಎಮ್ ವಸತಿ ನಿಲಯಗಳಿಗೆ ಮತ್ತು ಸಮಾಜ ಕಲ್ಯಾಣ ವಸತಿ ನಿಲಯಗಳಿಗೆ ಮತ್ತು ಮೈನಾರಿಟಿ ವಸತಿ ನಿಲಯಗಳಿಗೆ ಆಹಾರ ಧಾನ್ಯ ಸರಬರಾಜು ಮಾಡುವ ಗುತ್ತಿಗೆದಾರರು ಪ್ರತಿಯೊಂದು ವಸತಿ ನಿಲಯಗಳಿಗೆ ಆಹಾರ ಧಾನ್ಯ ಸರಬರಾಜು ಮಾಡದೇ ವಸತಿನಿಲಯಗಳ ಮೆಲ್ವಿಚಾರಕರಿಗೆ ಹಣ ನೀಡಿ ವಿದ್ಯಾರ್ಥಿಗಳ ಹೊಟ್ಟೆ ಮೇಲೆ ಹೊಡೆಯುತ್ತಿರುವ ಗುತ್ತಿಗೆದಾರರ ಪರವಾನಿಗೆ ಕಪ್ಪು ಪಟ್ಟಿಗೆ ಸೇರಿಸಿ ಸೂಕ್ತ ಕ್ರಮ ಜರುಗಿಸಬೇಕು, ರಾಜಪುರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಸಾಲೊಳ್ಳಿ ಗ್ರಾಮದ ಮೈಬು ಸುಬಾನಿ ದರ್ಗಾದಿಂದ ಬಿಲಾಲ್ ಮಸೀದಿವರೆಗೆ ಸಿಸಿ ರಸ್ತೆ ನಿರ್ಮಿಸಿಕೊಡಬೇಕು.

ಐನಾಪುರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸಾರ್ವಜನಿಕ ಗ್ರಂಥಾಲಯವು ಈಗಿರುವ ಪೋಸ್ಟ್ ಕಚೇರಿಯಿಂದ ಪಂಚಾಯತ್ ಮಹಡಿಯ ಮೇಲೆ ಸ್ಥಳಾಂತರ ಮಾಡಬೇಕು, ಕೊಡ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿ ಯಲ್ಲಿ ಬರುವ ಸುಂಠಾಣ್ ಗ್ರಾಮದಲ್ಲಿ ಸಾರ್ವಜನಿಕ ಮಹಿಳಾ ಶೌಚಾಲಯ ನಿರ್ಮಿಸಿ ಕೂಡಬೇಕು, ಕೊಡ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಸುಂಠಾಣ್ ಗ್ರಾಮದಲ್ಲಿ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಜನಜೀವನ ಕಳಪೆ ಕಾಮಗಾರಿಯಿಂದ ಮನೆ ಮನೆಗೆ ನೀರು ಬರದೆ ಜನರು ತೊಂದರಪಡುತ್ತಿದ್ದು ಕೂಡಲೆ ತನಿಖೆ ಕ್ರಮ ಕೈಗೊಳ್ಳಬೇಕು, ಚಂದನಕೇರಾ ಗ್ರಾಮ ಪಂಚಾಯಿತಿಯ ಚಂದನಕೇರಾ ಗ್ರಾಮದ 2 ನೇ ವಾರ್ಡ್ ನಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗ್ಗಿಹರಿಸಬೇಕು, ಚಿಂಚೋಳಿ ತಾಲೂಕಿನ ಬಸಂತಪೂರ ಗ್ರಾಮ ಪಂಚಾಯಿತಿ ನಿಡಗುಂದಾ ಗ್ರಾಮ ಪಂಚಾಯಿತಿ ಗಡಿಕೇಶ್ವಾರ ಗ್ರಾಮ ಪಂಚಾಯಿತಿ ವೆಂಕಟಪೂರ ಗ್ರಾಮ ಪಂಚಾಯಿತಿ ಮತ್ತು ಸಿರೊಳ್ಳಿ ಗ್ರಾಮ ಪಂಚಾಯಿತಿ ಗಳಲ್ಲಿ 2022–2023 ರಿಂದ 2024–2025 ರಿ ವರೆಗೆ 15 ನೇ ಹಣಕಾಸು ಮತ್ತು ಅಂಗವಿಕಲರ ಅನುದಾನದಲ್ಲಾದ ಅವ್ಯವಹಾರದ ಬಗ್ಗೆ ತನಿಖೆ ಮಾಡಿ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಜರುಗಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಮಾರುತಿ ಗಂಜಗೇರಿ, ಅಲ್ಲಮಪ್ರಭು ನಿಂಬರ್ಗಾ, ಮೋಹನ್ ಐನಾಪುರ, ಗೋಪಾಲ ಗಾರಂಪಳ್ಳಿ, ಜೈಭೀಮ ಹೋಳಕರ್, ಸುಂಠಾಣ, ಹರೀಶ ದೇಗಲ್ಮಡಿ, ಮಲ್ಲಿಕಾರ್ಜುನ ಗಂವ್ಹಾರ, ಹರ್ಷವರ್ಧನ, ಅವಿರೋಧ ಚಂದನಕೇರಾ, ರೇಣುಕಾ, ಲಲಿತಾ, ಶೋಭಾ, ಗುಂಡಮ್ಮ, ರಾಧಿಕಾ, ಸರಸ್ವತಿ, ಜಗಮ್ಮ, ಪಾರ್ವತಿ, ಸೋಹೆಲ್ ಸೇರಿದಂತೆ ಇನ್ನಿತರರಿದ್ದರು.

ಐಬಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 10–ನಗರದ ಸರ್ಕಾರಿ ಐಟಿಐಗಳ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಆಪ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. 10ನೇ ತರಗತಿಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿಯನ್ನು ನೇರವಾಗಿ ಸಂಸ್ಥೆಗೆ ಅಕ್ಟೋಬರ್ 17ರೊಳಗಾಗಿ ಸಲ್ಲಿಸಬಹುದಾಗಿದೆ. ಪ್ರವೇಶಾತಿ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಾಧ್ಯಾಪಕರಿಂದ ಸಹಿ ಪಡೆದಿರುವ 10ನೇ ತರಗತಿಯಲ್ಲಿ ಉತ್ತೀರ್ಣರಾದ ಅಂಕಪಟ್ಟಿ, ಇತ್ತೀಚಿನ 2 ಭಾವಚಿತ್ರ, ಜಾತಿ ಆದಾಯ ಪ್ರಮಾಣ ಪತ್ರದ ಪ್ರತಿಗಳನ್ನು ಕಡ್ಡಾಯ ಸಲ್ಲಿಸಬೇಕು. 371(ಜೆ) ಪ್ರಮಾಣ ಪತ್ರ, ಗ್ರಾಮೀಣ ಮತ್ತು ವ್ಯಾಸಂಗ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಭೇಟಿ ನೀಡಬಹುದಾಗಿದೆ ಎಂದು ರಾಯಚೂರು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮದ್ಯ, ಮಾದಕ ವ್ಯಸನಗಳ ವಿರುದ್ಧ ಜಾಗೃತಿ ಮೂಡಿಸಲು ಮಠಗಳು ಮುಂದಾಗಲು ಶರಣಪ್ಪ ಸಲಾದಪುರ ಕರೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ, ಅಕ್ಟೋಬರ್ 10–ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬಳಿಕ ತಮ್ಮ ಸ್ವಕ್ಷೇತ್ರಕ್ಕೆ ಭೇಟಿ ನೀಡಿದ ಶರಣಪ್ಪ ಸಲಾದಪುರ ವಿವಿಧ ಮಠಗಳಿಗೆ ಭೇಟಿ ನೀಡಿ, ಮದ್ಯಪಾನ ಹಾಗೂ ಮಾದಕವಸ್ತುಗಳ ವಿರುದ್ಧ ಮಠಕ್ಕೆ ಭೇಟಿ ನೀಡುವ ಭಕ್ತರಲ್ಲಿ ಜಾಗೃತಿ

ಗಂಗನಾಳ ಗ್ರಾಮದಲ್ಲಿನ ಶುದ್ಧ ನೀರಿನ ಘಟಕ ಶೀಘ್ರ ದುರಸ್ತಿ ಮಾಡಲು ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಶಹಪುರ:ಅ.10: ತಾಲೂಕಿನ ಗಂಗನಾಳ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಹಾಳು ಬಿದ್ದು ಹಲವು ವರ್ಷಗಳು ಕಳೆದರು ಅಧಿಕಾರಿಗಳು ನಿದ್ದೆಗೆ ಜಾರಿದ್ದಾರೆ ಇದರ ಬಗ್ಗೆ ಹಲವು ಬಾರಿ ಗ್ರಾಮ ಪಂಚಾಯಿತಿ ಅಧಿಕಾರಿಗಳ ಆಗಮನಕ್ಕೆ ತಂದರು ಕೂಡ ಕಾಟಚರಕ್ಕೆ ಭೇಟಿ ನೀಡಿ ಹಾಗೆ ಹೋಗುತ್ತಾರೆ ಅದರ ಬಗ್ಗೆ ಕೇಳಿದರೆ ಹಾರಿಕೆ ಉತ್ತರ ಹೇಳುತ್ತಾರೆ ಗ್ರಾಮದಲ್ಲಿ 500 ಹೆಚ್ಚು ಕುಟುಂಬಗಳಿದ್ದು ಜನರಿಗೆ ಶುದ್ಧ ಕುಡಿಯುವ ನೀರಿನ ಭಾಗ್ಯ ಇಲ್ಲ ಇದರಿಂದ ಜನರು ಬೇಸತ್ತಿದ್ದಾರೆ ಟಾಕಿ ಇಂದ ಬರ್ತಕಂತ ನಲ್ಲಿ ನೀರು ಬೋರ್ವೆಲ್ ನೀರನ್ನು ಕುಡಿದು ಸಾಂಕ್ರಮಿಕ ರೋಗವನ್ನು ಹರಡುತ್ತಿವೆ ಮತ್ತು ಗ್ರಾಮ ಪಂಚಾಯತಿಯವರು ಸರಿಯಾಗಿ ಟಾಕಿಯನ್ನು ತೊಳೆಯುವುದಿಲ್ಲ ವಾರದ ಇಂದುಗಡೆ ಸಣ್ಣ ಹುಳುಗಳು ಬರುವುದನ್ನು ಕಂಡು ಬಂದಿತ್ತು ಇದರ ಬಗ್ಗೆ ಕೂಡ ಅಧಿಕಾರಿಗಳಿಗೆ ತಿಳಿಸಿದರು ಎಚ್ಚೆತ್ತುಕೊಳ್ಳದನೆ ಕುಳಿತಿದ್ದಾರೆ ಇದರಿಂದ ಗ್ರಾಮದ ಜನರು ಇಡೀ ಶಾಪ ಹಾಕುತ್ತಿದ್ದಾರೆ

ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಎಚ್ಚೆತ್ತುಕೊಂಡು ಜನರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಘಟನಾ ಕಾರ್ಯದರ್ಶಿಯಾದ ಎಚ್ಚರಿಕೆಯನ್ನು ನೀಡಲಾಗಿದೆ

ನರೇಗಾ ಯೋಜನೆಯಡಿಯಲ್ಲಿ ಜಾಬ್‌ಕಾರ್ಡ್‌ಗೆ ಇ-ಕೆವೈಸಿ ಮಾಡಿಸಿ:ಸಿಇಒ



ಯಾದಗಿರಿ:ಅ.10: ಮಹಾತ್ಮಗಾಂಧಿಗ್ರಾಮೀಣಉದ್ಯೋಗಖಾತ್ರಿ ಯೋಜನೆಯಡಿನೋಂದಾಯಿತ ಕುಟುಂಬಗಳ ಜಾಬ್‌ಕಾರ್ಡ್ ಮಾನ್ಯತಾಅವಧಿಯನ್ನು ಇ-ಕೆವೈಸಿ ಮೂಲಕಪೂರ್ಣಗೊಳಿಸಲಾಗುತ್ತಿದ್ದು, ಎಲ್ಲಾ ನರೇಗಾ ಕೂಲಿಕಾರ್ಮಿಕರು ಈ ಅಭಿಯಾನದಲ್ಲಿಭಾಗವಹಿಸಿ ಕಡ್ಡಾಯವಾಗಿತಮ್ಮಜಾಬ್‌ಕಾರ್ಡ್‌ಗೆಇ-ಕೆವೈಸಿ ಮಾಡಿಕೊಳ್ಳಬೇಕು ಎಂದುಯಾದಗಿರಿಜಿಲ್ಲಾಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿಗಳಾದಶ್ರೀ ಲವೀಶ್ಒರಡಿಯಾರವರುಮನವಿ ಮಾಡಿದ್ದಾರೆ.

ಕೇಂದ್ರಗ್ರಾಮೀಣಾಭಿವೃದ್ಧಿಮಂತ್ರಾಲಯದಆದೇಶ ಹಾಗೂ ಗ್ರಾಮೀಣಾಭಿವೃದ್ಧಿಮತ್ತು ಪಂಚಾಯತ್‌ರಾಜ್‌ಇಲಾಖೆಯಅಧಿಕಾರಿಗಳ ಸೂಚನೆಯಂತೆಜಿಲ್ಲೆಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿನೋಂದಾಯಿತ ಸಕ್ರಿಯಕೂಲಿಕಾರರಜಾಬ್‌ಕಾರ್ಡ್‌ಅನ್ನು ಇ-ಕೆವೈಸಿ ಮೂಲಕ ಮೌಲ್ಯೀಕರಿಸುತ್ತಿದ್ದು, ನರೇಗಾಯೋಜನೆಯಡಿಜಿಲ್ಲೆಯಎಲ್ಲಾಗ್ರಾಮ ಪಂಚಾಯಿತಿಗಳಸಕ್ರಿಯಕುಟುಂಬಗಳ ಜಾಬ್‌ಕಾರ್ಡ್ ಮಾನ್ಯತಾಅಭಿಯಾನದ ಮಾದರಿಯಲ್ಲಿಅತೀತುರ್ತಾಗಿ ಇ-ಕೆವೈಸಿಮೂಲಕಪೂರ್ಣಗೊಳಿಸಲು ಸಿಬ್ಬಂದಿಗಳಿಗೆಅಗತ್ಯತರಬೇತಿಯನ್ನು ನೀಡಲಾಗಿದೆಎಂದರು.

ತರಬೇತಿಪಡೆದಎಲ್ಲಾಸಿಬ್ಬಂದಿಗಳು ಜಾಬ್ ಕಾರ್ಡ್‌ಗಳಿಗೆಇ-ಕೆವೈಸಿ ಮಾಡುವಪ್ರಕ್ರಿಯೆಯಲ್ಲಿತೊಡಗಿದ್ದು, ಇ-ಕೆವೈಸಿ ಪ್ರಕ್ರಿಯೆಯಲ್ಲಿಕೂಲಿಕಾರ್ಮಿಕರುಕಡ್ಡಾಯವಾಗಿಪಾಲ್ಗೊಳ್ಳಬೇಕು ಮುಂದಿನ ದಿನಗಳಲ್ಲಿ ಇ-ಕೆವೈಸಿಮಾಡಿಕೊಳ್ಳದಜಾಬ್-ಕಾರ್ಡ್‌ಗಳು

ನಿಷ್ಕ್ರಿಯವಾಗುತ್ತವೆಎಂದುತಿಳಿಸಿದ್ದಾರೆ. ಮಹಾತ್ಮಗಾಂಧಿನರೇಗಾಯೋಜನೆಯಹೆಚ್ಚುಪಾರದರ್ಶಕಅನುಷ್ಠಾನಕ್ಕೆ ಮತ್ತೊಂದುಹೆಜ್ಜೆಇ-ಕೆವೈಸಿಆಗಿದ್ದು, ನರೇಗಾಕೂಲಿಕಾರರು, ಕಾಯಕ ಬಂಧುಗಳುತಮ್ಮಜಾಬ್‌ಕಾರ್ಡ್‌ಗಳಿಗೆ ಇ-ಕೆವೈಸಿಅಪ್ಡೇಟ್‌ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ. ನಮ್ಮಜಿಲ್ಲೆಯಲ್ಲಿನರೇಗಾಯೋಜನೆಯಡಿ ಶಹಾಪುರ51944, ಸುರಪುರ 56669, ಯಾದಗಿರಿ 40934, ಗುರುಮಿಟಕಲ್ 22022,ವಡಗೇರಾ 32215 ಹಾಗೂ ಹುಣಸಗಿ 48155 ಸೇರಿ ಒಟ್ಟು 2,51,939ಜನ ಸಕ್ರಿಯಕೂಲಿಕಾರ್ಮಿಕರಿದ್ದು,ಎಲ್ಲರೂ ಸಹತಪ್ಪದೇತಮ್ಮಜಾಬ್‌ಕಾರ್ಡ್‌ಗೆಇ-ಕೆವೈಸಿ ಅಪ್ಡೇಟ್ ಮಾಡಿಕೊಳ್ಳಲು ತಿಳಿಸಿದ್ದಾರೆ.

ಹೆಚ್ಚಿನಮಾಹಿತಿಗಾಗಿಆಯಾಗ್ರಾಮ ಪಂಚಾಯಿತಿಪಿಡಿಓ,ಕಾರ್ಯದರ್ಶಿ, ಡಿಇಒ,ಬಿಎಫ್ಟಿ,ಜಿಕೆಎಂ ಸೇರಿದಂತೆ ನರೇಗಾ ಸಿಬ್ಬಂದಿಯನ್ನು ಸಂಪರ್ಕಿಸಬಹುದುಎಂದು ಪ್ರಕಟಣೆಯಲ್ಲಿಅವರು ತಿಳಿಸಿದ್ದಾರೆ.

ಸಿದ್ಧರಾಮೇಶ್ವರ ಮೆಡಿಕಲ್ ಕಾಲೇಜಿಗೆ ಆಯುರ್ ವಿದ್ಯಾಭೂಷಣ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 10 : ನಗರದ ಶ್ರೀ ಸಿದ್ಧರಾಮೇಶ್ವರ ಆಯುರ್ವೇದಿಕ್ ವೈದ್ಯಕೀಯ

ಕಾಲೇಜು, ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರವನ್ನು ಕನ್ನಡ ಪ್ರಭ ಮತ್ತು ಏಷ್ಯಾ ನೆಟ್ ಸುವರ್ಣ ನ್ಯೂಸ್ ವತಿಯಿಂದ ಕೊಡಲಾಗುವ 2025ನೇ ಸಾಲಿನ ಆಯುರ್ ವಿದ್ಯಾಭೂಷಣ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಬೆಂಗಳೂರಿನ ರೇಸ್‌ಕೋರ್ಸ್ ರಸ್ತೆಯಲ್ಲಿ ಇರುವ ಭಾರತೀಯ ವಿದ್ಯಾಭವನದಲ್ಲಿ ಶನಿವಾರ (ಅ.11) ಬೆಳಿಗ್ಗೆ 9.30ಕ್ಕೆ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಆಯುರ್ವೇದ ಕ್ಷೇತ್ರದಲ್ಲಿನ ಸಾಧನೆಗಾಗಿ ಕಾಲೇಜಿಗೆ ಪ್ರಶಸ್ತಿ ಲಭಿಸಿರುವುದು ಸಂತಸ ಉಂಟು ಮಾಡಿದೆಎಂದು ಶ್ರೀಸಿದ್ಧರಾಮೇಶ್ವರ ಆಯುರ್ವೇದಿಕ್ ವೈದ್ಯಕೀಯ ಕಾಲೇಜು, ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ಅಧ್ಯಕ್ಷ ಮುರಳಿಧರ ಎಕಲಾರಕರ್ ತಿಳಿಸಿದ್ದಾರೆ.

ಸಲಹಾ ಸಮಿತಿ ಸದಸ್ಯರಾಗಿ ಮಾರುತಿ ಬೌದ್ಧೆ ನೇಮಕ

ಬೀದರ. ಅ. 10 : ಕರ್ನಾಟಕ ರಾಜ್ಯ ರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನೀಡುವ 2025 ನೇ ಸಾಲಿನ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಪುರಸ್ಕೃತರನ್ನು ಆಯ್ಕೆ ಮಾಡಲು ಸಲಹಾ ಸಮಿತಿ ರಚಿಸಿ ಸದಸ್ಯರಾಗಿ ಸಮಾಜ ಸೇವಕರು ಕರಾದಸಂಸ ರಾಜ್ಯ ಸಂಘಟನಾ ಸಂಚಾಲಕ ಮಾರುತಿ ಬೌದ್ಧೆ ರವರಿಗೆ ನೇಮಿಸಿದಕ್ಕೆ ಡಾ.ಕಾಶಿನಾಥ ಚೆಲ್ವಾ, ದಶರಥ ಗುರು,ವಿಠಲದಾಸ ಪ್ಪಾಗೆ, ಮಹೇಶ ಗೋರನಾಳಕರ್, ವಿನಯಕುಮಾರ ಮಾಳಗೆ, ವಿನೋದ ಬಂದಗೆ,ಮಹಾಲಿಂಗ ಬೆಲ್ದಾಳ,ಶಂಭುರಾವ ಸಾಗರ,ಕಂಟೇಪ್ಪಾ ಪೂಜಾರಿ, ರಾಜಕುಮಾರ ವಾಘ್ಮಾರೆ, ಉದಯ ನಾಯಕ, ರಾಹುಲ್ ಹಾಲೇಪರ್ಗಿಕರ್, ಅರುಣ ಪಟೇಲ್, ಶ್ರೀಮಂತ ಜೋಷಿ ಇನ್ನಿತರರು ರ್ಕಾರಕ್ಕೆ ಧನ್ಯವಾದ ರ್ಪಿಸಿ ರ್ವ ವ್ಯಕ್ತಪಡಿಸಿದ್ದಾರೆ.

ಬಿ.ಜೆ.ಪಿ.ಯಿಂದ ಜಿಲ್ಲೆಯಾದ್ಯಂತ ಬೆಳೆಹಾನಿ ವೀಕ್ಷಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ ಅ.10 : ಇಂದು ದಿನಾಂಕ 11-10-2025 ರಂದು ಬಿ.ಜೆ.ಪಿಯ ಜಿಲ್ಲಾ ತಂಡ, ಶಾಸಕರು, ಮಾಜಿ ಸಂಸದರು,

ಮಾಜಿ ಸಚೀವರು, ಮಾಜಿ ಶಾಸಕರು, ಸ್ಪರ್ಧಿತ ಅಭ್ಯರ್ಥಿಗಳು ಸೇರಿದಂತೆ ಪಕ್ಷದ ರಾಜ್ಯ ಹಾಗೂ ಜಿಲ್ಲಾ ಮುಖಂಡರ ತಂಡವು ಕಳೆದ ಹಲವು ದಿನಗಳ ಹಿಂದೆ ಜಿಲ್ಲೆಯಲ್ಲಿ ಅತಿವೃಷ್ಟಯಿಂದ ಹಾಳಾದ ಬೆಳೆ ಹಾನಿ ಹಾಗು ಮನೆಗಳ ಹಾನಿಯ ವೀಕ್ಷಣೆ ಮಾಡಲಿದ್ದಾರೆ.

ಮುಂಜಾನೆ 08:30 ಕ್ಕೆ ಬೀದರಿನ ಪಕ್ಷದ ಕಾರ್ಯಾಲಯದಿಂದ ಹೊರೆಡುವ ತಂಡವು 09:00 ಗಂಟೆಗೆ ಬೀದರ ಕ್ಷೇತ್ರದ ಚಾಂಬೋಳ ಗ್ರಾಮ 10:30 ಗಂಟೆಗೆ ಔರಾದ ಕ್ಷೇತ್ರದ ರಕ್ಷಾಳ ಗ್ರಾಮ 12:00 ಗಂಟೆಗೆ ಭಾಲ್ಕಿ ಕ್ಷೇತ್ರದ ಸಾಯಿಗಾಂವ ಗ್ರಾಮ 12:30 ಗಂಟೆಗೆ ಬಸವಕಲ್ಯಾಣ ಕ್ಷೇತ್ರದ ಹುಲಸುರ ಗ್ರಾಮ 02:00 ಗಂಟೆಗೆ ಹುಮನಾಬಾದ ಕ್ಷೇತ್ರದ ಕನಕಟ್ಟ ಗ್ರಾಮ ಹಾಗೂ 03:00 ಗಂಟೆಗೆ ಬೀದರ ದಕ್ಷಿಣ ಕ್ಷೇತ್ರದ ಮಂಗಲಗಿ ಗ್ರಾಮಕ್ಕೆ ಭೇಟಿನಿ ಡಿಪ್ರವಾಹ ಪಿಡಿತ ಬೆಳೆ ಹಾನಿ ಹಾಗೂ ಮನೆಹಾನಿ ಬಗ್ಗೇ ರೈತರೊಂದಿಗೆ ಚರ್ಚೆಮಾಡಿ ಪರಿಹಾರಕ್ಕಾಗಿ ಮುಂದಿನ ದಿನದಲ್ಲಿ ಸರ್ಕಾರದವಿರುದ್ಧಹೊರಾಟಮಾಡಲುನಿರ್ಧರಿಸಲಾಗಿದೆ ಎಂದು ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ತಿಳಿಸಿದ್ದಾರೆ.

"ಐ ಆಮ್ ಪ್ರಗ್ನೆಂಟ್" ವೆಬ್ ಸೀರೀಸ್‌ನಲ್ಲಿ ಧರ್ಮಣ್ಣ ಕಡೂರಿನ ಅದ್ಭುತ ನಟನೆಗೆ ಅಭಿಮಾನಿಗಳ ಮೆಚ್ಚುಗೆ!

ಮಲ್ಲಮ್ಮ ನುಡಿ ವಾರ್ತೆ

ವರದಿ : ವೀರೇಶ್ ಟಕ್ಕಳಕಿ ಕೆಂಭಾವಿ

ಬೆಂಗಳೂರು:ಅ.10:ಪ್ರಸಿದ್ಧಕಾಮಿಡಿನಟ ಧರ್ಮಣ್ಣಕಡೂರ್ಅಭಿನಯಿಸಿರುವ "ಐ ಆಮ್ ಪ್ರಗ್ನೆಂಟ್" ವೆಬ್ ಸೀರೀಸ್ ಇದೀಗ ಪ್ರೇಕ್ಷಕರ ಮನ ಸೆಳೆಯುತ್ತಿದೆ. ಇತ್ತೀಚೆಗೆ ಬಿಡುಗಡೆಯಾದ ಎರಡನೇ ಎಪಿಸೋಡ್ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಜನಪ್ರಿಯತೆ ಪಡೆದುಕೊಂಡಿದೆ.

ಈ ಎಪಿಸೋಡಿನಲ್ಲಿ ಧರ್ಮಣ್ಣ ಕಡೂರ್ ಅವರ ವಿಭಿನ್ನ ಶೈಲಿಯ ಅಭಿನಯ, ಹಾಸ್ಯ ಮತ್ತು ಭಾವನೆಗಳ ಸಂಯೋಜನೆ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿದೆ. ಕಾಮಿಡಿಯ ಮಧ್ಯೆ ಸಾಮಾಜಿಕ ಸಂದೇಶವನ್ನು ಸ್ಪರ್ಶಿಸುವ ಈ ಪಾತ್ರವು ಧರ್ಮಣ್ಣ ಕಡೂರಿನ ನಟನ ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

ಎರಡನೇ ಎಪಿಸೋಡ್ ಬಿಡುಗಡೆಯಾದ ನಂತರ ಅಭಿಮಾನಿಗಳು ಕಾಮೆಂಟ್‌ಗಳ ಸುರಿಮಳೆಸುರಿಸುತ್ತಿದ್ದು, "ಧರ್ಮಣ್ಣ ಕಡೂರ್ ಅವರ ನಟನೆ ವೆಬ್ ಸೀರೀಸ್‌ಗೆ ಜೀವ ತುಂಬಿದೆ" ಎಂದು ಪ್ರಶಂಸಿಸಿದ್ದಾರೆ.

ಸಾಮಾಜಿಕ ವಿಷಯವನ್ನು ಹೊಸ ದೃಷ್ಟಿಕೋನದಿಂದ ಹಾಸ್ಯಮಯವಾಗಿ

ಮಂಡಿಸುವ ಈ "ಐ ಆಮ್ ಪ್ರಗ್ನೆಂಟ್" ವೆಬ್ ಸೀರೀಸ್ ಧರ್ಮಣ್ಣ ಕಡೂರಿಗೆ ಮತ್ತೊಂದು ವಿಶಿಷ್ಟ ಹೆಸರನ್ನು ತಂದುಕೊಡಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

ಈ ವೆಬ್ ಸೀರೀಸ್‌ನ ಎರಡನೇ ಎಪಿಸೋಡ್ ಪ್ರೇಕ್ಷಕರ ಮುಂದೆ ಬಂದಿದೆ ಕನ್ನಡ ಡಿಜಿಟಲ್ ಪ್ಲಾಟ್‌ಫಾರ್ಮ್‌ನಲ್ಲಿ ಹೊಸ ಸಂಚಲನ ಸೃಷ್ಟಿಸಲಿದೆ.!

ಶೂ ಎಸೆದ ನಾಲಾಯಕರಿಗೆ ಕಠಿಣ ಶಿಕ್ಷೆ ಆಗಲಿ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಸುಪ್ರಿಂ ಕೋರ್ಟ ಮುಖ್ಯ ನ್ಯಾಯಮೂರ್ತಿಗಳಾದ ಬಿ ಆರ್ ಗವಾಯಿಯವರಿಗೆ ಸನಾತನ ಧರ್ಮ ಮತ್ತು ಕೋಮುವಾದಿ ಹಾಗೂ ಜಾತಿವಾದಿ ವಕೀಲ ಕಿಶೋರ್ ರಾಕೇಶ್ ಎಂಬ ವ್ಯಕ್ತಿ ಕೋರ್ಟ್ ಹಾಲಿನಲ್ಲಿ ಶೂ ಎಸೆದಿದ್ದನ್ನು ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಜಿಲ್ಲಾ ಸಂಘಟನಾ ಸಂಚಾಲಕರಾದ ಪರಶುರಾಮ ಮಹಲ್ ರೋಜಾ ಅವರು ತೀವ್ರವಾಗಿ ಖಂಡಿಸಿದ್ದಾರೆ ಮತ್ತು ಇದು ಪ್ರಜಾಪ್ರಭುತ್ವ ಸಂವಿಧಾನ ಹಾಗೂ ಭಾರತದ ನ್ಯಾಯಾಂಗ ವ್ಯವಸ್ಥೆಯ ಮೇಲೆ ನಡೆದ ಅತ್ಯಂತ ವಿನಾಯವಾದ ದಾಳಿ ಎಂದು ಭಾವಿಸುತ್ತದೆ ನ್ಯಾಯಮೂರ್ತಿ ಗವಾಯಿಯವರು ಸಂವಿಧಾನದ ನ್ಯಾಯಾಂಗದಲ್ಲಿ ಎತ್ತಿ ಹಿಡಿಯುವ ಅತ್ಯಂತ ಮಹತ್ವದ ಸ್ಥಾನದಲ್ಲಿ ಕುಳಿತಿದ್ದಾರೆ ಪ್ರತಿಯೊಬ್ಬ ಭಾರತೀಯನು ಆತ್ಮ ಗೌರವ ಮತ್ತು ಘನತೆಯನ್ನು ನ್ಯಾಯದ ದೃಷ್ಟಿಯಿಂದ ಪರಿಶೀಲಿಸಿ ಸಾಂವಿಧಾನಿಕ ಮೌಲ್ಯಗಳಿಗೆ ಚ್ಯುತಿ ಬರದಂತೆ ಕೆಲಸ ನಿರ್ವಹಿಸುತ್ತಿದ್ದಾರೆ ಅಲ್ಲದೆ ಅತ್ಯಂತ ಗೌರಾನ್ವಿತ ನ್ಯಾಯಾಧೀಶರಂದು ಹೆಸರು ಮಾಡಿದ್ದಾರೆ ಈ ಘಟನೆಗೆ ಕಾರಣರಾದ ನ್ಯಾಯವಾದಿಯನ್ನು ಬಾರ್ ಕೌನ್ಸಿಲ್ ನವರು ಸದರಿ ವಕೀಲನ ಸದಸ್ಯತ್ವವನ್ನು ರದ್ದುಪಡಿಸಬೇಕು ಇವನಿಗೆ ನಮ್ಮ ದೇಶ ದಿಂದಗಡಿಪಾರು ಮಾಡಬೇಕೆಂದು ಕರ್ನಾಟಕದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಜಿಲ್ಲಾ ಸಮಿತಿ ಒತ್ತಾಯಿಸುತ್ತದೆಎಂದು ತಿಳಿಸಿದ್ದಾರೆ.

ಸುರಪುರ"ದಲ್ಲಿ ನೂತನ ಪತ್ರಿಕಾ ಭವನ ನಿರ್ಮಾಣಕ್ಕೆ ಶಾಸಕರಿಂದ ಭೂಮಿ ಪೂಜೆ

ಮಲ್ಲಮ್ಮ ನುಡಿ ವಾರ್ತೆ

ಸುರಪುರ:ಅ.10:ಇಂದು ಸುರಪುರ ಪಟ್ಟಣದ ದೇವರಾಜ ಅರಸು ಭವನದ ಎದುರುಗಡೆ ಇರುವ ಜಾಗದಲ್ಲಿ ನೂತನ ಪತ್ರಿಕಾ ಭವನ ನಿರ್ಮಾಣ ಕಾರ್ಯಕ್ಕೆ ಭೂಮಿ ಪೂಜೆ ನೆರವೇರಿಸಲಾಯಿತು.

ಈ ಭೂಮಿ ಪೂಜೆಯನ್ನು ಸುರಪುರ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಶ್ರೀ ರಾಜಾ ವೇಣು ಗೋಪಾಲ ನಾಯಕ ಧಣಿಯವರು ನೆರವೇರಿಸಿದರು.

ನಗರದಲ್ಲಿನ ಪತ್ರಕರ್ತರಿಗೆ ಸೌಲಭ್ಯ ಒದಗಿಸುವ ಉದ್ದೇಶದಿಂದ ನಿರ್ಮಾಣಗೊಳ್ಳುತ್ತಿರುವ ಈ ಭವನದಿಂದ ಸ್ಥಳೀಯ ಪತ್ರಿಕೋದ್ಯಮಕ್ಕೆ ಹೊಸ ಉತ್ತೇಜನ ಸಿಗಲಿದೆ ಎಂದು ಶಾಸಕರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ತಾಲೂಕು ಮತ್ತು ಜಿಲ್ಲಾ ಪತ್ರಕರ್ತರ ಸಂಘದ ಪದಾಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದರು.

ಜಿಲ್ಲಾ ಮಟ್ಟದ 14/17 ವಯೋಮಿತಿಯ ಪ್ರಾಥಮಿಕ, ಪ್ರೌಢ ಶಾಲಾ ಮಕ್ಕಳ ಕ್ರೀಡಾಕೂಟ

ಯಾದಗಿರಿ:ಅ.10: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯಾದಗಿರಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನ ಯಾದಗಿರಿ ಜಿಲ್ಲಾ ಮಟ್ಟದ 14/17 ವಯೋಮಿತಿಯ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳ ಕ್ರೀಡಾಕೂಟವನ್ನು 2025ರ ಅಕ್ಟೋಬರ್ 13 ರಂದು ಬೆಳಿಗ್ಗೆ 10 ಗಂಟೆಗೆ ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಮಟ್ಟದ 14/17 ವಯೋಮಿತಿಯ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳ ಕ್ರೀಡಾಕೂಟ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಾದ ಶ್ರೀ ಎಸ್.ಮಧು ಬಂಗಾರಪ್ಪ, ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರು ಅವರ ಘನ ಉಪಸ್ಥಿತಿಯಲ್ಲಿ ನೆರವೇರಲಿದೆ.

ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು.

ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ, ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕು.ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ಬಾಬುರಾವ್ ಕಾಡ್ಲೂರ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ ಗೌರವಾನ್

ಬಲೂನ್ ಮಾರಲು ಮೈಸೂರಿಗೆ ಬಂದ ಕಲಬುರಗಿಯ 10 ವರ್ಷದ ಬಾಲಕಿಯ ಅತ್ಯಾಚಾರ, ಕೊಲೆ

ಕಾನೂನು ಸುವ್ಯವಸ್ಥೆ ಕುಸಿತದ ಕನ್ನಡಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ನಿನ್ನೆಮೈಸೂರಿನಲ್ಲಿ ದಸರಾ ಕಾರ್ಯಕ್ರಮದ ಸಂದರ್ಭದಲ್ಲಿಬಲೂನ್‌ಮಾರಾಟ ಮಾಡಲು ಕಲಬುರಗಿಯಿಂದ ಬಂದ ಹಕ್ಕಿಪಿಕ್ಕಿ ಜನಾಂಗದ 10 ವರ್ಷದ ಹೆಣ್ಣುಮಗಳ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿರುವುದು ನಿಜಕ್ಕೂ ಖಂಡನೀಯ ಎಂದು ಬಿಜೆಪಿ ಕರ್ನಾಟಕ ರಾಜ್ಯ ವಕ್ತಾರರಾದ ಡಾ. ಸುಧಾ ಆರ್ ಹಾಲಕಾಯಿ ಅವರು ಹೇಳಿದರು.

ಒಂದು ನಾಗರೀಕ ಸಮಾಜದ ಒಳಗೆನಡೆದ ಅತ್ಯಂತ ಭೀಭತ್ಸವಾದ ಕೃತ್ಯವಿದು. ದಸರಾ ಸಂಭ್ರಮದ ವೇಳೆಯಲ್ಲಿಮೈಸೂರಿನಜನನಿಬಿಡ ಪ್ರದೇಶದಲ್ಲಿ, ಅರಮನೆಯ ಮುಂಭಾಗದಲ್ಲಿಯೇ ಈ ಕೊಲೆ ನಡೆದಿರುವುದು ಕರ್ನಾಟಕರಾಜ್ಯದ ಆಡಳಿತ ಹಾಗೂ ಕಾನೂನು ಸುವ್ಯವಸ್ಥೆಯ ವೈಫಲ್ಯಕ್ಕೆ ಹಿಡಿದ ಕನ್ನಡಿಯಾಗಿದೆ.

ಕಳೆದ ಎರಡು ವರ್ಷಗಳಲ್ಲಿ ರಾಜ್ಯದ ಕಾನೂನು ಸುವ್ಯವಸ್ಥೆ ದಿನೇ ದಿನೇ ಕುಸಿತ ಕಂಡಿದೆ. ಸಾಂಸ್ಕೃತಿಕನಗರಿಮೈಸೂರಿನಲ್ಲಂತೂ ದಿನ ನಿತ್ಯ ಕೊಲೆ, ಸುಲಿಗೆ ನಡೆಯುತ್ತಿರುವುದು ಪತ್ರಿಕೆಗಳಲ್ಲಿ ವರದಿಯಾಗುತ್ತಲೇ ಇದೆ.

ಮತ್ತಷ್ಟು ಮುಂದೆ ಹೋಗಿ ಮೈಸೂರಿನಲ್ಲಿ ಮಾದಕ ದ್ರವ್ಯದ ಕಾರ್ಖಾನೆಗಳೇ ಪ್ರಾರಂಭಗೊಂಡಿರುವುದು ಮತ್ತಷ್ಟು ಕಳವಳಕಾರಿಯಾಗಿದೆ.

ಈ ಎಲ್ಲ ಘಟನೆಗಳು ಪೊಲೀಸ್ ವ್ಯವಸ್ಥೆಯೇಕುಸಿದುಹೋಗಿರುವುದಕ್ಕೆ ಸಾಕ್ಷಿಯಾಗಿವೆ. ಪೊಲೀಸ್ ವ್ಯವಸ್ಥೆ ಕುಸಿದು ಬೀಳಲು ಸರಕಾರದ ವರ್ಗಾವಣೆ ದಂಧೆಯೇ ಕಾರಣವಾಗಿದೆ. ಕಳೆದ ಎರಡು ವರ್ಷಗಳಲ್ಲಿ ನಡೆದ ವ್ಯಾಪಕ ವರ್ಗಾವಣೆ, ಅದೂ ಪೊಲೀಸ್ ಅಧಿಕಾರಿಗಳ ಮಟ್ಟದಲ್ಲಂತೂ ಪ್ರತಿನಿತ್ಯದ ಸುದ್ದಿಯಾಗಿಯೇ ಹೊರಹೊಮ್ಮಿದೆ. ಇಂತಹ ಒಂದು ಅಸಮರ್ಥ ಆಡಳಿತ ಕಾರಣದಿಂದ ಅಮಾಯಕ ಬಡ ಹೆಣ್ಣುಮಗಳ ಕೊಲೆ ನಡೆದು ಹೋಗಿದೆ. ಇದಕ್ಕೆ ಈ ರಾಜ್ಯ ಸರಕಾರವೇ ಹೊಣೆಗಾರ.

ಕೊಲೆಯಾದ 10 ವರ್ಷದ ಹುಡುಗಿ ರಾಧಿಕಾ ಕಲಬುರ್ಗಿ ಜಿಲ್ಲೆಯವಳು. ಬದುಕನ್ನು ಕಟ್ಟಿಕೊಳ್ಳಲು, ಜಾತ್ರೆ, ಉತ್ಸವಗಳ ಸಂದರ್ಭದಲ್ಲಿ ಬಲೂನ್ ಮಾರಲೆಂದು ಸಾಂಸ್ಕೃತಿಕ ನಗರಿ ಮೈಸೂರಿಗೆ ಬಂದ ಬಡ ಕುಟುಂಬದ ಹೆಣ್ಣುಮಗಳು ಅವಳು. ಬದುಕು ಕಟ್ಟಿಕೊಳ್ಳಲು ಕಲಬುರಗಿಯ ಜನ ಗುಳೇ ಹೋಗುತ್ತಿದ್ದಾರೆ.

ಉದ್ದುದ್ದ ಭಾಷಣ ಮಾಡುವ ಪ್ರಿಯಾಂಕ ಖರ್ಗೆ, ಅವರ ಸ್ವಂತ ಊರಿನಿಂದ ಜನರು ಬದುಕು ಕಟ್ಟಿಕೊಳ್ಳುವುದಕ್ಕಾಗಿ ಗುಳೇ ಹೋಗುತ್ತಿದ್ದರೆ, ಯಾವುದೇ ಕ್ರಮವನ್ನು ವಹಿಸದೆ ಜಗತ್ತಿನ ಬೇರೆಲ್ಲಾ ವಿಷಯಗಳ ಬಗ್ಗೆ ಮೂಗುತೂರಿಸಿ ಮಾತನಾಡುತ್ತಾರೆ. ಮಾನ್ಯಪ್ರಿಯಾಂಕ್ ಖರ್ಗೆಯವರೇ, ಒಂದು ಅಮಾಯಕ ಬಾಲಕಿಯ ಭೀಭತ್ಸಕೊಲೆನಡೆದುಹೋಗಿದ್ದರೂ ಒಂದು ಶಬ್ದವನ್ನೂ ಮಾತನಾಡದೆ ಮೂಕರಾಗಿದ್ದೀರಲ್ಲಾ, ಯಾಕೆ?

ತಮ್ಮ ಸರಕಾರದ ವೈಫಲ್ಯವೇ ಈ ಮಗುವಿನ ಕೊಲೆಯ ರೂಪದಲ್ಲಿ ಕಂಡುಬರುತ್ತಿದೆ. ಮೊದಲು ಕಲ್ಯಾಣ ಕರ್ನಾಟಕದಿಂದ ಜನರು ಬದುಕು ಕಟ್ಟಿಕೊಳ್ಳಲು ಗುಳೇ ಹೋಗುವಂತಹ ಪರಿಸ್ಥಿತಿನಿರ್ಮಾಣ ಮಾಡಿದ ಶ್ರೇಯಸ್ಸು ನಿಮಗೆ, ನಿಮ್ಮ ಕುಟುಂಬಕ್ಕೆ ಸಲ್ಲುತ್ತದೆ. ಇದಕ್ಕೆ ಹೊಣೆಗಾರರು ನೀವು.

ತಕ್ಷಣವೇ ಇಂತಹ ಬಡಜನರ ಧ್ವನಿಯಾಗಬೇಕು ನೀವು. ಅದೇ ನಿಜವಾದ ಸಂವಿಧಾನದ ಆಶಯ, ಅಂಬೇಡ್ಕರ್ ಅವರ ಆಶಯ ಕೂಡ ಆಗಿತ್ತು. ಪ್ರತಿನಿತ್ಯ ಅಂಬೇಡ್ಕರ್ ಬಗ್ಗೆ, ಸಂವಿಧಾನದ ಬಗ್ಗೆ ಉದ್ದುದ್ದ ಭಾಷಣ ಮಾಡುವ ತಾವು, ನಿಮ್ಮ ಊರಿನಿಂದ ಜನರು ಗುಳೇ ಹೋಗುವುದನ್ನು ತಡೆಯುವಂತಹ ಪ್ರಯತ್ನವನ್ನು ಮಾಡಿದರೆ ನಿಮ್ಮ ರಾಜಕೀಯ ಜೀವನ ಸಾರ್ಥಕ ಅನಿಸುತ್ತದೆ.

ಮೈಸೂರಿನಲ್ಲಿ ನಡೆದ ಈ ದುರ್ಘಟನೆಗೆ ರಾಜ್ಯದ ಕಾಂಗ್ರೆಸ್ ಸರಕಾರವೇ ಹೊಣೆಯಾಗಿದೆ. ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಉನ್ನತಮಟ್ಟದ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಅಕ್ಟೋಬರ್ 10– ಪೋಕ್ಸೊ,ಪೋಕ್ಸೊಜೊತೆಅತ್ಯಾಚಾರ, ಬಾಲ್ಯವಿವಾಹ,ಬಾಲಕಾರ್ಮಿಕ, ಮಹಿಳೆಯರು ಹಾಗೂ ಮಕ್ಕಳ ಕಾಣೆ ಪ್ರಕರಣಗಳು ಹೆಚ್ಚುತ್ತಿದ್ದು, ಈ ಬಗ್ಗೆ ವಿಶೇಷವಾಗಿ ಚರ್ಚಿಸಲು ವಿಶೇಷವಾಗಿ ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಬೆಂಗಳೂರಿನಲ್ಲಿ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ವಿಶೇಷ ಸಭೆ ನಡೆಸಲಾಗುವುದು. ಈ ಸಭೆಯಲ್ಲಿ ಬೇರೆ ಬೇರೆ ವಿಷಯಗಳ ಬಗ್ಗೆ ಸಮಗ್ರ ಚರ್ಚಿಸಿ ತೀರ್ಮಾನಿಸಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತೇವೆ ಎಂದು ವಿಧಾನಸಭೆ ಸದಸ್ಯರು ಆಗಿರುವ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಎನ್ ಎಚ್ ಕೋನರೆಡ್ಡಿ ಅವರು ತಿಳಿಸಿದರು.

ರಾಯಚೂರು ಜಿಲ್ಲಾ ಪ್ರವಾಸದಲ್ಲಿ ಅಕ್ಟೋಬರ್ 10ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಿತಿಯ ಇತರ ಸದಸ್ಯರೊಂದಿಗೆ ಸಭೆ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಯಚೂರು ಜಿಲ್ಲೆಯಲ್ಲಿ ಸಮಿತಿಯ ಸಭೆ ನಡೆಯಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾಗಿರುವ ದೇವದುರ್ಗ ಶಾಸಕರಾದ ಕರೆಮ್ಮ ಅವರು ಕೋರಿದ್ದರು. ಪೋಕ್ಸೊ,ಪೋಕ್ಸೊ ಜೊತೆ ಅತ್ಯಾಚಾರ,ಬಾಲ್ಯವಿವಾಹ, ಬಾಲಕಾರ್ಮಿಕದಂತಹ ಪ್ರಕರಣಗಳ ವಿಷಯವನ್ನು ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯು ಗಂಭೀರವಾಗಿ ಪರಿಗಣಿಸಿದೆ. ರಾಯಚೂರ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಹೆಚ್ಚುತ್ತಿವೆ ಎಂಬುದರ ಬಗ್ಗೆಗೊತ್ತಾಗಿ ಈ ಬಗ್ಗೆ ಮಾಹಿತಿ ಪಡೆದು ಅಧಿಕಾರಿಗಳಿಗೆ ಕೆಲವು ಸೂಚನೆಗಳನ್ನು ನೀಡಿ ಸರಿಪಡಿಸುವ ಪ್ರಯತ್ನದಿಂದ ಸಮಿತಿಯು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದೆ ಎಂದು ಅವರು ತಿಳಿಸಿದರು.

ಮಕ್ಕಳು ಮತ್ತು ವಿದ್ಯಾರ್ಥಿಯುವಜನರ ಬಗ್ಗೆ ಸರಿಯಾಗಿ ನೋಡಿಕೊಳ್ಳಬೇಕು. ರಾಜ್ಯದ ಯಾವುದೇ ಕಡೆಗಳಲ್ಲಿ ಪೋಕ್ಸೊ, ಬಾಲ್ಯವಿವಾಹ, ಬಾಲ ಕಾರ್ಮಿಕ ಪ್ರಕರಣಗಳು ದಾಖಲಾಗದಂತೆ ಮುನ್ನೆಚ್ಚರಿಕೆ ವಹಿಸಲು ಆಯಾ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲು ಮಾನ್ಯ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಸಮಿತಿಯ ಎಲ್ಲ ಸದಸ್ಯರಿಗೆ ಸಲಹೆ ಮಾಡಿದ್ದಾರೆ. ಹಾಗಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯು ಬೆಂಗಳೂರು ಕೇಂದ್ರ ಸ್ಥಾನದಲ್ಲಿ ಎರಡು, ಹೊರ ಜಿಲ್ಲೆಯಲ್ಲಿ ಒಂದು ಸಭೆಯನ್ನು ನಿಯಮಿತವಾಗಿ ನಡೆಸುತ್ತಿದೆ. ರಾಯಚೂರು ಸೇರಿದಂತೆ ರಾಜ್ಯಾದ್ಯಂತ ಪೋಕ್ಸೊ, ಅತ್ಯಾಚಾರ, ಬಾಲ್ಯವಿವಾಹ, ಮಹಿಳೆಯರ ಮತ್ತು ಮಕ್ಕಳ ಅಪಹರಣದ, ಬಾಲ ಕಾರ್ಮಿಕ ಪ್ರಕರಣಗಳ ಸಂಖ್ಯೆ ಇಳಿಕೆಗೆ ಸಮಿತಿಯು ಶಕ್ತಿ ಮೀರಿ ಪ್ರಯತ್ನಿಸುತ್ತಿದೆ ಎಂದು ಎನ್ ಎಚ್ ಕೋನರೆಡ್ಡಿ ಸುದ್ದಿಗಾರರಿಗೆ ತಿಳಿಸಿದರು.

ಈ ವೇಳೆ, ಶಾಸಕರು ಆಗಿರುವ ಸಮಿತಿಯ ಸದಸ್ಯರಾದ ಹೆಚ್.ಎ.ಇಕ್ಬಾಲ್ ಹುಸೇನ, ಶರಣಗೌಡ ಕಂದಕೂರ, ಕರೆಮ್ಮ ಜಿ ನಾಯಕ, ಶಾಂತಾರಾಮ್ ಬುಡ್ನಸಿದ್ದಿ, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ ಹಾಗೂ ಇನ್ನೀತರರು ಇದ್ದರು.

ಅಕ್ಟೋಬರ್ 13ರಂದು ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು

ಅಕ್ಟೋಬರ್ 10– ಇಲ್ಲಿನ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾನಸಿಕ ಆರೋಗ್ಯ ವಿಭಾಗ ರಾಯಚೂರು, ರಿಮ್ಸ್, ಮತ್ತು ನವೋದಯ ಮಹಾವಿದ್ಯಾಲಯ, ಭಾರತೀಯಮನೋವೈದ್ಯಕೀಯ ಸಂಘ, ಕರ್ನಾಟಕ ಶಾಖೆ ಇವರ ಸಂಯುಕ್ತಾಶ್ರಯದಲ್ಲಿ ಮಾನವೀಯ ತರ್ತು ಪರಿಸ್ಥಿತಿಗಳಲ್ಲಿ ಮಾನಸಿಕ ಆರೋಗ್ಯ ಸೇವೆಗಳು ಎಂಬ ಘೋಷವಾಕ್ಯದಡಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮವನ್ನು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಲಯದ ಕೃಷ್ಣಾ ಸಭಾಂಗಣದಲ್ಲಿ ಅಕ್ಟೋಬರ್ 13ರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಾರುತಿ.ಸಿ.ಬಾಗಡೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಜಿಲ್ಲಾಧಿಕಾರಿಗಳಾದ ನಿತೀಶ್. ಕೆ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹನುಮಂತ.ಎ.ಸಾತ್ವಿಕ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ಆಗಮಿಸಲಿದ್ದಾರೆ.

ಅತಿಥಿಗಳಾಗಿ ರಿಮ್ಸ್ ನಿರ್ದೇಶಕರಾದ ಡಾ.ರಮೇಶ ಬಿ.ಹೆಚ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಸುರೇಂದ್ರಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ, ನವೋದಯ ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಡಾ.ಬಿ.ದೇವಾನಂದ, ಜಿಲ್ಲಾ ಕಾರಾಗೃಹ ಅಧೀಕ್ಷಕರಾದ ಅನಿತಾ ಎಸ್.ಹಿರೇಮನಿ ಆಗಮಿಸಲಿದ್ದಾರೆ.

24ನೇ ಕಲ್ಯಾಣ ಪರ್ವ ಕಾರ್ಯಕ್ರಮವನ್ನು ಡಾ. ಶರಣ ಪ್ರಕಾಶ ಪಾಟೀಲರವರಿಂದ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಇಲ್ಲಿನ ಬಸವ ಧರ್ಮ ಪೀಠದ ಬಸವ ಮಹಾಮನೆಯಆವರಣದಲ್ಲಿ24ನೇ ಕಲ್ಯಾಣ ಪರ್ವ ಕಾರ್ಯಕ್ರಮವನ್ನು ಶುಕ್ರವಾರ ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣ ಪ್ರಕಾಶ ಪಾಟೀಲ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ದಿವ್ಯ ಸಾನಿಧ್ಯ ಕೂಡಲ ಸಂಗಮ ಬಸವ ಧರ್ಮ ಪೀಠದ ಪೀಠಾಧ್ಯಕ್ಷರಾದ ಡಾ. ಮಾತೆ ಗಂಗಾದೇವಿ ವಹಿಸಿದ್ದರು. ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ ಬಸವಲಿಂಗ ಪಟ್ಟದೇವರು. ಅಲ್ಲಮಪ್ರಭು ಪೀಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಸಿದ್ದರಾಮೇಶ್ವರ ಸ್ವಾಮಿಜಿ. ಪೂಜ್ಯಶ್ರೀ ಬಸವಕುಮಾರ ಸ್ವಾಮಿಜಿ. ಮಾಜಿ ಸಚಿವರಾದ ರಾಜಶೇಖರ ಪಾಟೀಲ. ಕಲ್ಯಾಣ ಪರ್ವ ಸ್ವಾಗತ ಸಮಿತಿ ಅಧ್ಯಕ್ಷರಾದ ಕಂಟೆಪಾ ಗಂದಿಗುಡಿ ಅಧ್ಯಕ್ಷತೆ ವಹಿಸಿದ್ದರು. ಕಲ್ಯಾಣ ಪರ್ವ ಸ್ವಾಗತ ಸಮಿತಿ ಗೌರವಾಧ್ಯಕ್ಷರಾದ ಬಸವರಾಜ ಬುಳ್ಳಾ, ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಅಧ್ಯಕ್ಷರಾದ ಬಸವರಾಜ ಕೊರ–ಕೆ. ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ್. ಮಾಜಿ ಶಾಸಕರಾದ ಮಲ್ಲಿಕಾರ್ಜುನ ಎಸ್ ಖೂಬಾ. ಸ್ವಾಗತ ಸಮಿತಿ ಪ್ರಧಾನ ಕಾರ್ಯದರ್ಶಿ ಶಿವರಾಜ ನರಶೆಟ್ಟಿ. ರಾಷ್ಟ್ರೀಯ ಬಸವ ದಳ ತಾಲೂಕಾಧ್ಯಕ್ಷರಾದ ರವೀಂದ್ರ ಕೊಳಕೂರ. ಹಾಗೂ ಸೋಮಶೇಖರ ಪಾಟೀಲ ಗಾದಗಿ. ಬಾಬು ಹೂನ್ನನಾಯಕ ನೀಲಕಂಠ ರಾಠೋಡ . ನವಲಿಂಗ ಪಾಟೀಲ. ಯುವ ಮುಖಂಡರಾದ ಆಕಾಶ ಖಂಡಾಳೆ. ಶರಣು ಅಲಗೂಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಎಪಿಎಂಸಿ ಕಾರ್ಯದರ್ಶಿ ಹಾಗೂ ಸಿಬ್ಬಂದಿ ವರ್ಗದವರ ವಿರುದ್ಧ ವರ್ತಕರ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಸಿಬ್ಬಂದಿ ವರ್ಗದವರು ವರ್ತಕರಿಗೆ ಮನಬಂದಂತೆ ವರ್ತಿಸುತ್ತಿದ್ದಾರೆ ಎಂದು ಎಪಿಎಂಸಿ ವರ್ತಕರ ಅಧ್ಯಕ್ಷ ವಿಜಯಕುಮಾರ್ ಸ್ವಾಮಿ ಕಲ್ಲೂರ್ ಆರೋಪಿಸಿದ್ದಾರೆ. ಶುಕ್ರವಾರ ಎಪಿಎಂಸಿ ಸಿಬ್ಬಂದಿ ಹಾಗೂ ಕಾರ್ಯದರ್ಶಿ ಅವರ ವಿರುದ್ಧ ಅಂಗಡಿಗಳು ಬಂದ್ ಮಾಡಿ ಪ್ರತಿಭಟನೆ ಮಾಡಿದ್ದಾರೆ. ಹುಮನಾಬಾದ ಮತ್ತು ಚಿಟಗುಪ್ಪ ಎಪಿಎಂಸಿಯಲ್ಲಿ ಕಳೆದ 16 ವರ್ಷಗಳಿಂದ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರು ತುಂಬಾದಬ್ಬಾಳಿಕೆ ಮಾಡುತ್ತಿದ್ದಾರೆ. ಅಂಗಡಿಯ ಲೈಸೆನ್ಸ್ ನವೀಕರಣಕಾಗಿ ಹಣದ ಬೇಡಿಕೆ ಇಡುತ್ತಿದ್ದಾರೆ ಹಣ ಕೊಡದೆ ಇರುವರಿಗೆ ಲೈಸೆನ್ಸ್ ರದ್ದುಪಡಿಸುತ್ತೇವೆ ಎಂದು ಬೆದರಿಕೆ ಹಾಕುತ್ತಿದ್ದಾರೆ. ಸೋಯಾಬಿನ್ ಸೇರಿದಂತೆ ಇತರೆ ಪರ್ಮಿಟ್ ಪಡೆದುಕೊಳ್ಳಬೇಕಾದರೆ ಮನಬಂದಂತೆ ಹಣ ಕೇಳುತ್ತಿದ್ದಾರೆ. ಹಣ ಕೊಡದೆ ಇದ್ದರೆ ಪರ್ಮಿಟ್ ನೀಡುತ್ತಿಲ್ಲ ಎಂದು ತಿಳಿಸಿದ್ದಾರೆ. ಎಪಿಎಂಸಿ ಸಿಬ್ಬಂದಿ ವರ್ಗದವರ ದಬ್ಬಾಳಿಕೆ ವಿರುದ್ಧ ವರ್ತಕರು ನಿಯೋಗವನ್ನು ಮಾಜಿ ಸಚಿವ ರಾಜಶೇಖರ ಪಾಟೀಲ್, ವಿಧಾನ ಪರಿಷತ್ ಸದಸ್ಯರಿಗೆ ಈ ಸಮಸ್ಯೆಯನ್ನು ಮನವರಿಕೆ ಮಾಡಿಕೊಳ್ಳುತ್ತೇವೆ ಎಂದು ಹೇಳಿದರು. ಶನಿವಾರವೂ ಕೂಡ ಅಂಗಡಿಗಳು ಬಂದ್ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಪ್ರತಿಭಟನಾ ಸ್ಥಳಕ್ಕೆ ಮೇಲಧಿಕಾರಿಗಳು ಭೇಟಿ ನೀಡಿ ಸಮಸ್ಯೆಗಳು ಅಲಿಸಿದರು. ಎಪಿಎಂಸಿ ಕಾರ್ಯದರ್ಶಿ,ಹಾಗೂ ಸಿಬ್ಬಂದಿಗಳಿಗೆ ಕೂಡಲೇ ವರ್ಗಾವಣೆ ಮಾಡಬೇಕು ಎಂದು ವರ್ತಕರು ಆಗ್ರಹಿಸಿದರು. ಮೇಲಧಿಕಾರಿಗಳು ವರ್ತಕರಿಗೆ ಮುಂಬರುವ ದಿನಗಳಲ್ಲಿ ಇತರಹ ಸಮಸ್ಯೆಗಳು ಆಗದಂತೆ ನೋಡಿಕೊಳ್ಳುತ್ತೇವೆ ಎಂದು ವರ್ತಕರಿಗೆ ಆಶ್ವಾಸನೆ ನೀಡಿದರು. ಈ ಸಂದರ್ಭದಲ್ಲಿ ಗುರುರಾಜ ಕುಲಕರ್ಣಿ, ನಸೀರ್ ಹೊಸಳ್ಳಿ, ಗುಲಾಮ್ ಹೊಸಳ್ಳಿ, ಶಿವಲಿಂಗ ಶೆಟ್ಟಿ, ರಘು ಚವ್ಹಾಣ, ಆಜ್ಮತ್ ಪಾಶಾ, ಅಭಿಷೇಕ ಗಾದಾ, ವೆಂಕಟ ಗಾದಾ, ವಿಷ್ಣುಕಾಂತ ಸಿರ್ಕೆ, ಅಶೋಕ ಕಟಗಿ, ದೇವಿಂದ್ರ ಕರಗಾರ, ಅಕ್ಬರ್ ಅಲಿ, ಫರಿದ್, ಸಾಗರ್ ಚವ್ಹಾಣ ಸೇರಿದಂತೆ ವರ್ತಕರು ಉಪಸ್ಥಿತರಿದ್ದರು.

ವ್ಯಕ್ತಿ ಕಾಣೆ: ಪತ್ತೆಗಾಗಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಅಕ್ಟೋಬರ್.10–ಭಾಲ್ಕಿ ತಾಲ್ಲೂಕಿನ ಚಳಕಾಪೂರ ಗ್ರಾಮದ ನಿವಾಸಿಯಾದ ವೈಜಿನಾಥ ತಂದೆ ಲಾಲಪ್ಪ ಮಾಸಲ್ದಾರ (66) ಇವರು ದಿನಾಂಕ: 16–08–2025 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆ–ಯಾಗಿತ್ತಾರೆ.

ಕಾಣೆಯಾದ ವ್ಯಕ್ತಿ 5 ಅಡಿ 6 ಇಂಚ್ ಎತ್ತರ ಇದ್ದು, ಸಾದಾ ಕಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು, ಉದ್ದ ಮುಖ ಹೊಂದಿದ್ದು, ಬಲಗಾಲ ಪಾದದ ಹತ್ತಿರ ಅಂದಾಜು 5–6 ಇಂಚು ಗುಳಿ ಇದ್ದು, ಮನೆಯಿಂದ ಹೊಗುವ ಮೈಮೇಲೆ ಬಿಳಿ ಬಣ್ಣದ ಖಮಿಸ್, ಬಿಳಿ ಬಣ್ಣದ ಧೊತರ ಧರಿಸಿರುವ ಇತನು ಕನ್ನಡ, ಹಿಂದಿ ಭಾಷೆಯಲ್ಲಿ ಮಾತನಾಡುತ್ತಾನೆ.

ಈ ಕಾಣೆ

ರಸ್ತೆ ಅಭಿವೃದ್ಧಿ ಕಾಮಗಾರಿ: ಬಸ್ ಸಂಚಾರ ಮಾರ್ಗ ಬದಲಾವಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.10–ನಗರದ ಗಡಿಗಿ ಚೆನ್ನಪ್ಪವೃತ್ತ(ರಾಯಲ್ ಸರ್ಕಲ್) ದಿಂದ ರೈಲ್ವೇ ಕೆಳ ಸೇತುವೆ ರಸ್ತೆ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದ್ದು, ನಗರ ಸಾರಿಗೆ ಬಸ್ ನಿಲ್ದಾಣ (ಹಳೇ ಬಸ್ ನಿಲ್ದಾಣ) ದ ಮುಂದೆ ವಾಹನಗಳ ಕಾರ್ಯಾಚರಣೆ ಸ್ಥಗಿತಗೊಳಿಸಲಾಗಿದೆ.

ಬೇರೆ ಮಾರ್ಗಗಳಿಂದ ಸಂಚರಿಸಬೇಕು ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಳ್ಳಾರಿ ವಿಭಾಗೀಯ ನಿಯಂತ್ರಣಾಧಿಕಾರಿ ಅವರು ತಿಳಿಸಿದ್ದಾರೆ. ಸಿರುಗುಪ್ಪ ಕಡೆಗೆ ಹಾಗೂ ಮುಂದಕ್ಕೆ ಸಂಚರಿಸುವ ಬಸ್ ಗಳು ಕೇಂದ್ರಿಯ ಬಸ್ ನಿಲ್ದಾಣದಿಂದ ಹೆಚ್.ಆರ್. ಗವಿಯಪ್ಪ ವೃತ್ತ, ರೈಲ್ವೇ ಬ್ರಿಡ್ಜ್ ಮೇಲ್ಸೇತುವೆ, ಏಳು ಮಕ್ಕಳ ತಾಯಿ ದೇವಸ್ಥಾನ, ಫ್ಲೈ ಓವರ್ ಮೂಲಕ ಸಂಚರಿಸಬೇಕು.

ತಾಳೂರು ಕಡೆಗೆ ಹೋಗುವ ಬಸ್ ಗಳು ನಗರದ ತಾಳೂರು ರಸ್ತೆ ಮೂಲಕ ಸಂಚರಿಸಬೇಕು.

ಮೋಕಾ ಹಾಗೂ ಮುಂದೆ ಹೋಗುವ ಬಸ್ ಗಳು ಕೇಂದ್ರಿಯ ಬಸ್ ನಿಲ್ದಾಣದಿಂದ ಗಡಿಗಿ ಚೆನ್ನಪ್ಪ ವೃತ್ತ (ರಾಯಲ್ ಸರ್ಕಲ್), ಮುನ್ಸಿಪಲ್ ಕಾಲೇಜು, ಇಂದಿರಾ ವೃತ್ತ, ಕೂಲ್ ಕಾರ್ನರ್, ಎಸ್. ಎನ್.ಪೇಟೆ, ಫ್ಲೈ ಓವರ್ ಮೂಲಕ ಸಂಚರಿಸಬೇಕು. ಹಾಗಾಗಿ ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾನಸಿಕ ಒತ್ತಡ ನಿವಾರಿಸಲು ಸಾಮಾಜಿಕ ಸಂವಹನ ಬೆಳಿಸಿಕೊಳ್ಳಿ: ನ್ಯಾ.ರಾಜೇಶ್ ಎನ್.ಹೊಸಮನೆ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.10–ಮಾನಸಿಕ ಆರೋಗ್ಯ ಕಾಪಾಡಲು ಪ್ರತಿನಿತ್ಯ ನಮ್ಮ ಕಹಿಗಳನ್ನು ನಮ್ಮ ಮೆದುಳು ಮರೆಸುತ್ತದೆ. ಮಾನಸಿಕ ಒತ್ತಡ ನಿವಾರಿಸಿಕೊಳ್ಳಲು ಸಾಮಾಜಿಕ ಸಂವಹನ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರು ಹಾಗೂ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಹೇಳಿದರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಶ್ರೀಮತಿ ಅಲ್ಲಂ ಸುಮಂಗಳಮ್ಮ ಸ್ಮಾರಕ ಮಹಿಳಾ ಮಹಾವಿದ್ಯಾಲಯ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ ಸಹಭಾಗಿತ್ವದಲ್ಲಿ ಶ್ರೀಮತಿ ಅಲ್ಲಂ ಸುಮಂಗಳಮ್ಮ ಸ್ಮಾರಕ ಮಹಿಳಾ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಅಧಿಕ ಕೆಲಸದೊತ್ತಡದಿಂದ ಮಾನಸಿಕ ಒತ್ತಡ ಹೆಚ್ಚುತ್ತಿದೆ. ಬಿಡುವಿನ ವೇಳೆಯಲ್ಲಿ ಮಾನಸಿಕ ಆರೋಗ್ಯ ಕಾಪಾಡಲು ಯೋಗ, ಧ್ಯಾನ, ಪ್ರಾಣಾಯಾಮದಂತಹ ಮುಂತಾದ ಚಟುವಟಿಕೆ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಾನಸಿಕ ಒತ್ತಡ ಎಂಬುವುದು ದೌರ್ಬಲ್ಯ ಅಲ್ಲ. ಊಹೆ, ಅಲೋಚನೆ ಮಾಡುವುದನ್ನು ಬಿಡಬೇಕು. ಇತರರೊಂದಿಗೆ ಮಾತುಕತೆ, ಸಂವಹನದ ವಿಚಾರಗಳ ಮೂಲಕ ಮಾನಸಿಕ ಒತ್ತಡಗಳನ್ನು ತಡೆಗಟ್ಟಬಹುದು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಮಾತನಾಡಿ, ಮಾನಸಿಕ ಆರೋಗ್ಯ ಕಾಪಾಡುವಲ್ಲಿ ಪ್ರತಿನಿತ್ಯ ಸಮಸ್ಯೆಗಳನ್ನು ಸ್ನೇಹಿತರು, ಕುಟುಂಬ ಸದಸ್ಯರೊಂದಿಗೆ ಮುಕ್ತವಾಗಿ ಚರ್ಚಿಸುವ ಮೂಲಕ ಒತ್ತಡಗಳಿಂದ ಹೊರಬರಬಹುದು ಎಂದು ಹೇಳಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್ ಬಸರೆಡ್ಡಿ ಮಾತನಾಡಿ, ಮಾನಸಿಕವಾಗಿ ಒತ್ತಡಕ್ಕೆ ಒಳಗಾದವರು ದೈಹಿಕ, ಮಾನಸಿಕ, ಆರ್ಥಿಕ, ಸಾಮಾಜಿಕ, ಆತ್ಮಹತ್ಯೆ ಆಲೋಚನೆಗಳಿಂದ ಮನಸ್ಸನ್ನು ನಿಯಂತ್ರಣದಲ್ಲಿ ಇಡಬೇಕು. ಮಾನಸಿಕ ಆರೋಗ್ಯವು ಕುಟುಂಬದ ಅನುವಂಶಿಕತೆಯಿಂದ ಸಹ ಬರುತ್ತದೆ. ಮಾನಸಿಕ ಆರೋಗ್ಯವನ್ನು ಜವಾಬ್ದಾರಿಯಿಂದ ಚಿಕಿತ್ಸೆ ನೀಡಿದರೆ ಅವರು ಗುಣಮುಖರಾಗುತ್ತಾರೆ ಎಂದು ತಿಳಿಸಿದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ್ದ ಜಿಲ್ಲಾ ಮಾನಸಿಕ ಮನೋರೋಗ ತಜ್ಞ ಡಾ.ನಂದ ಕಿಶೋರ್ ಅವರು ಮಾತನಾಡಿ, ಮಾನವನು ದೈಹಿಕ ಆರೋಗ್ಯಕ್ಕೆ ನೀಡಿದಷ್ಟು ಪ್ರಾತಿನಿಧ್ಯತೆ ಮಾನಸಿಕ ಆರೋಗ್ಯಕ್ಕೆ ನೀಡಬೇಕು. ಪಂಚೇಂದ್ರಿಯಗಳಿಂದ ಮೆದುಳು ಮತ್ತು ಮನಸ್ಸನ್ನು ನಿಯಂತ್ರಣದಲ್ಲಿ ಇರಿಸಬೇಕು ಎಂದು ತಿಳಿಸಿದರು.

ಉದ್ವೇಗ, ಆಲೋಚನೆ ಮಾನಸಿಕ ಸ್ವಸ್ಥತೆಗೆ ಕಾರಣವಾಗುತ್ತವೆ. ವ್ಯಕ್ತಿತ್ವ ಬದಲಾವಣೆ ಮತ್ತು ಬೆಳವಣಿಗೆಯಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು. ಕೆಲಸದ ಸ್ಥಳ ಮತ್ತು ಕೌಟುಂಬಿಕ ಒಡನಾಟದಲ್ಲಿ ಸ್ಮಾರ್ಟ್‌ಫೋನ್‌ಗಳು ಸದ್ದಿಲ್ಲದೆ ಮನುಷ್ಯರ ಮೇಲೆ ಒತ್ತಡ ಹೆಚ್ಚಿಸುತ್ತಿವೆ. ವಾರಕ್ಕೊಂದು ದಿನ ಮೊಬೈಲ್ ಬಳಕೆ ನಿಲ್ಲಿಸಿದಲ್ಲಿ ಮಾನಸಿಕ ಆರೋಗ್ಯ ಸುಧಾರಣೆ-ಯಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ವೀರೇಂದ್ರ ಕುಮಾರ್ ಮಾತನಾಡಿ, 25-30 ಪ್ರತಿಶತ ಜನ ದೇಶದಲ್ಲಿ ಮಾನಸಿಕ ಖಾಯಿಲೆಯಿಂದ ಬಳಲುತ್ತಿದ್ದಾರೆ. 15-25 ವಯೋಮಾನದವರಲ್ಲೇ ಈ ವ್ಯಾದಿ ಹೆಚ್ಚು. ಇದ-ರಿಂದ ಆತ್ಮಹತ್ಯೆ ಪ್ರಕರಣಗಳು ಹೆಚ್ಚುತ್ತಿವೆ. ಇದನ್ನು ತಡೆಗಟ್ಟಲು ಟೆಲಿ ಸಹಾಯವಾಣಿ 14416 ಪ್ರಾರಂಭಿಸಿದೆ. ಸಹಾಯವಾಣಿಯು 24 ಗಂಟೆ ಕಾರ್ಯ ನಿರ್ವಹಿಸುತ್ತದೆ ಎಂದು ಹೇಳಿದರು.

ಶ್ರೀಮತಿ ಅಲ್ಲಂ ಸುಮಂಗಳಮ್ಮ ಸ್ಮಾರಕ ಮಹಿಳಾ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ದೂಪಂ ಸತೀಶ್ ಮಾತನಾಡಿ ಮಾನಸಿಕ ಆರೋಗ್ಯ ಹಿಡಿತದಿಂದ ಒತ್ತಡಗಳನ್ನು ನಿವಾರಣೆ ಮಾಡಬೇಕು. ಮಕ್ಕಳಿಗೆ ಮಾನಸಿಕ ಆರೋಗ್ಯದ ಮತ್ತು ಅವುಗಳ ಕುರಿತ ಉದ್ಯೋಗಾವಕಾಶಗಳಿಗೆ ದಾರಿ ಮಾಡಿಕೊಡುವ ಉದ್ದೇಶವಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ, ಶ್ರೀಮತಿ ಅಲ್ಲಂ ಸುಮಂಗಳಮ್ಮ ಸ್ಮಾರಕ ಮಹಿಳಾ ವಿದ್ಯಾಲಯದ ಸಂಯೋಜಕ ಡಾ.ಸೈಯದಾ.ಕೆ.ತನ್ವೀರ್ ಫಾತಿಮ ಸೇರಿದಂತೆ ವಿದ್ಯಾಲಯದ ಬೋಧಕ-ಬೋಧಕೇತರ ಸಿಬ್ಬಂದಿ, ಆರೋಗ್ಯ ಇಲಾಖೆ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಭತ್ತದ ಬೆಳೆಯಲ್ಲಿ ದುಂಡಾಣು ಎಲೆ ಚುಕ್ಕಿ ರೋಗ ನಿರ್ವಹಣೆಗೆ ಮುಂಜಾಗ್ರತಾ ಕ್ರಮವಹಿಸಲು ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.10–ಜಿಲ್ಲೆಯ ವಿವಿಧೆಡೆ ಮುಂಗಾರು ಹಂಗಾಮಿನಲ್ಲಿ ರೈತರು ವಿವಿಧ ಭತ್ತದ ತಳಿಗಳ ಬೆಳೆದ ಬೆಳೆಯಲ್ಲಿ ದುಂಡಾಣು ಎಲೆ ಚುಕ್ಕಿ ರೋಗ ಕಂಡುಬಂದಿದ್ದು, ನಿರ್ವಹಣೆಗೆ ರೈತರು ಸೂಕ್ತ ಮುಂಜಾಗ್ರತಾ ಕ್ರಮವಹಿಸಬೇಕು ಎಂದು ಕೃಷಿ ಇಲಾಖೆಯ ಅಧಿಕಾರಿಗಳು ರೈತರಿಗೆ ಸಲಹೆ ನೀಡಿದ್ದಾರೆ.

ಬುಧವಾರ ಜಂಟಿ ಕೃಷಿ ನಿರ್ದೇಶಕರು, ಸಹಾಯಕ ಕೃಷಿ ನಿರ್ದೇಶಕರು ಹಾಗೂ ಕೃಷಿ ಅಧಿಕಾರಿಗಳು ಮತ್ತು ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳ ತಂಡದೊಂದಿಗೆ ಕಂಪ್ಲಿ ತಾಲೂಕಿನ ಸಣಾಪುರ, ಇಟಗಿ, ಮುದ್ದಾಪುರ ಗ್ರಾಮದ ಭತ್ತ ಕ್ಷೇತ್ರಕ್ಕೆ ಭೇಟಿ ನೀಡಿ ಪರಿಶೀಲಿಸಿ ರೈತರೊಂದಿಗೆ ಚರ್ಚಿಸಿದ್ದಾರೆ.

ಕೆಲವು ಭಾಗಗಳಲ್ಲಿ ತಡವಾಗಿ ನಾಟಿ ಮಾಡಿದ ಭತ್ತ ಬೆಳೆಯಲ್ಲಿ ಪೊಟ್ಯಾಷ್ ಮತ್ತು ಸತುವಿನ ಕೊರತೆ ಕಂಡು ಬಂದಿದ್ದು, ಪ್ರತಿ ಎಕರೆಗೆ ಪೊಟ್ಯಾಷ್ 12.5 ಕೆ.ಜಿ ಮತ್ತು ಸತುವಿನ ಸಲ್ಫೇಟ್ 4.0 ಕೆ.ಜಿ ಗೊಬ್ಬರಗಳನ್ನು ಭೂಮಿಗೆ ಹಾಕುವುದರಿಂದ ಸತುವಿನ ಕೊರತೆ ನೀಗಿಸಬಹುದು.

ಜಿಲ್ಲೆಯ ಸಂಡೂರು ತಾಲ್ಲೂಕಿನ ದರೋಜಿ ಹಾಗೂ ಸುತ್ತಮುತ್ತ ಭಾಗಗಳಲ್ಲಿ ಬೆಳೆಯತೆನೆ ಹೊಡೆಯುವ ಹಂತದಲ್ಲಿ ಇದ್ದು, ದುಂಡಾಣು ಮಚ್ಚೆ ರೋಗ ನಿವಾರಣೆಗಾಗಿ ಕಾರ್ಬನ್‌ಡೈಜಿಂ 1 ಗ್ರಾಂ ಮತ್ತು 0.5 ಗ್ರಾಂ ಸ್ಟೆಪ್ಟೋಸೈಕ್ಲಿನ್ ಪ್ರತಿ 1 ಲೀ. ನೀರಿಗೆ ಸೇರಿಸಿ ಸಿಂಪರಣೆ ಮಾಡಬೇಕು. ತಡವಾಗಿ ನಾಟಿ ಮಾಡಿರುವ ಬೆಳೆಗೆ ತೆನೆ ಹೊಡೆಯುವ ಮೊದಲು ಬೆಳೆಗೆ 2.5 ಗ್ರಾಂ. ತಾಮ್ರದ ಆಕ್ಸಿಕ್ಲೋರೈಡ್ ಮತ್ತು 0.5 ಗ್ರಾಂ. ಸ್ಟೆಪ್ಟೋಸೈಕ್ಲಿನ್ ಪ್ರತಿ 1 ಲೀ. ನೀರಿಗೆ ಬೆರಸಿ ಸಿಂಪರಣೆ ಮಾಡಬೇಕು ಎಂದು ಹೇಳಿದ್ದಾರೆ.

ಸಿಂಪರಣೆ ಆದ 2 ದಿನ ನಂತರ ಬೆಳೆಗೆ ಲಘು ಪೋಷಕಾಂಶಗಳಿಗೆ ಸಿಂಪರಣೆ ಮಾಡಿದಲ್ಲಿ ಬೆಳೆಯ ಬೆಳವಣಿಗೆ ಜೊತೆಗೆ ರೋಗ ನಿರೋಧಕಶಕ್ತಿಯನ್ನು ಹೆಚ್ಚಿಸುತ್ತದೆ. ರೋಗ ತೀವ್ರತೆಯಲ್ಲಿ 10 ದಿನಗಳ ಅಂತರದಲ್ಲಿ ಕನಿಷ್ಠ 2 ಸಲ ಸಿಂಪರಣೆ ಮಾಡುವುದು ಸೂಕ್ತ ಎಂದು ರೈತರಿಗೆ ಮಾಹಿತಿ ನೀಡಿದ್ದಾರೆ.

ಶೂ ಎಸೆತ ಪ್ರಕರಣ:ಸುಧಾಕರ್ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಸುಪ್ರೀಂಕೋರ್ಟ್ ಮುಖ್ಯನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರತ್ತ ವಕೀಲರೊಬ್ಬರು ಶೂ ಎಸೆಯಲು ಯತ್ನಿಸಿದ್ದನ್ನು ಪ್ರಿಯಾಂಕ್ ಖರ್ಗೆ ಅಭಿಮಾನಿಗಳ ಸಂಘ ಕಲ್ಬುರ್ಗಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುಧಾಕರ್ ಭಾಸ್ಕರ್ ರವರು ತೀವ್ರವಾಗಿ ಖಂಡಿಸಿದ್ದಾರೆ. ವಕೀಲನೊಬ್ಬ ಸುಪ್ರೀಂಕೋರ್ಟ್‌ನಲ್ಲೆ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರತ್ತ ಶೂ ಎಸೆದ ಕೃತ್ಯ ಇಡೀ ನ್ಯಾಯಾಂಗ ವ್ಯವಸ್ಥೆಗೆ ಕಪ್ಪು ಚುಕ್ಕೆ ತಂದಿದೆ. ಶೂ ಎಸೆದು ಸನಾತನ ಧರ್ಮ ಬೆಂಬಲಿಸುವ ಘೋಷಣೆ ಕೂಗಲಾಗಿದೆ. ಈ ಕೃತ್ಯಕ್ಕೆ ಕಾರಣರಾದ ವ್ಯಕ್ತಿ ಮತ್ತು ಆತನಿಗೆ ಕುಮ್ಮಕ್ಕು ನೀಡಿದ ಸಂಘಟನೆಗಳ ಮೇಲೆ ಕಠಿಣ ಕಾನೂನಿನ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದ್ದಾರೆ.

ಅ.12 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.10–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣ ಕೇಂದ್ರದಿಂದ ಬ್ಯಾಂಕ್–1 ರ ಫೀಡರ್‌ನಿಂದ ವಿದ್ಯುತ್ ಸರಬರಾಜಾಗುವ ಎಫ್–72 ರ ತುರ್ತು ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಅ.12 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು: ಕಂಟೋನ್‌ಮೆಂಟ್, ಸೂರ್ಯ ಕಾಲೋನಿ, ತಿಲಕ್ ನಗರ, ಸುಧಾ ಕ್ರಾಸ್, ನಂದಿ ಕಾಲೋನಿ, ಹೆಚ್.ಆರ್.ಜಿ ಕಾಲೋನಿ, ಜಯನಗರ, ರಹಿಮಬಾದ್ ಕಾಲೋನಿ, ನಳಂದ ಕಾಲೇಜ್, ವಿಜಯನಗರ ಕಾಲೋನಿ, ಕೆ.ಹೆಚ್.ಬಿ ಕಾಲೋನಿ, ಜಗನ್ನಾಥ ಮಂದಿರ, ಭಾಸ್ಕರ ನಾಯ್ಡು ಸ್ಟ್ರೀಟ್, ಸೆಂಟ್ ಜೋಸೆಫ್ ಸ್ಕೂಲ್, ಬೆಳಗಲ್ ಕ್ರಾಸ್, ಚಂದ್ರಕಾಲೋನಿ, ಎಂ.ಕೆ ಗಡಂಗ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.10–ನಗರದ ಕೌಲ್‌ಬಜಾರ್‌ನ ವಾರ್ಡ್ ನಂ.28ರ ದಾನಪ್ಪ ಬೀದಿಯ ನಿವಾಸಿ ಎ.ರಾಜೀವ್ ಗಾಂಧಿ ಎನ್ನುವ 48 ವರ್ಷದ ವ್ಯಕ್ತಿಯು 2024 ಏಪ್ರೀಲ್ 10 ರಂದು ಊರಿಗೆ ಹೋಗಿ ಬರುತ್ತೇನೆ ಎಂದು ಹೇಳಿ ಹೋದವ ಮರಳಿ ಬಾರದೇ ಕಾಣೆಯಾಗಿದ್ದು, ಈ ಕುರಿತು ಕೌಲ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ:

ಅಂದಾಜು 5.7 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ದುಂಡು ಮೂಖ, ದೃಡವಾದ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ.

ಮೇಲ್ಕಂಡ ಚಹರೆಗುರುತುಗಳುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್‌ಬಜಾರ್ ಪೊಲೀಸ್ ಠಾಣೆಯ ದೂ.08392-240731,244145, ಪಿಐ ಮೊ.9480803047, ಪಿಎಸ್‌ಐ ಮೊ.94808203085 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಾತ್ಮಗಾಂಧಿ ನರೇಗಾ ಕ್ರಿಯಾಯೋಜನೆ ತಯಾರಿಕಾ ಹಂತ ಯುಕ್ತಧಾರ ತರಬೇತಿ ಕಾರ್ಯಕ್ರಮ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಯಲಬುರ್ಗಾ ಮತ್ತು ಕುಕನೂರ 2026-27 ನೇ ಸಾಲಿನ ಮಹಾತ್ಮಗಾಂಧಿ ನರೇಗಾ ಕ್ರಿಯಾ ಯೋಜನೆ ತಯಾರಿಕೆಯಡಿ ಕಾಮಗಾರಿ ಆಯ್ಕೆಯ ಪೂರ್ವಭಾವಿ ಹಂತದ ಯುಕ್ತಧಾರ ಯಾಪ್ ಬಗ್ಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಅನುಷ್ಠಾನ ಇಲಾಖೆ ಅಧಿಕಾರಿಗಳು, ತಾಂತ್ರಿಕ ಸಹಾಯಕರು, ಕಂಪ್ಯೂಟರ್ ಅಪರೇಟರ್ ರವರಿಗೆ ಮಾಹಿತಿ ನೀಡಲು ಯಲಬುರ್ಗಾ ತಾಲೂಕ ಪಂಚಾಯತ ಸಭಾಂಗಣದಲ್ಲಿ ತರಬೇತಿ ಏರ್ಪಡಿಸಲಾಗಿತ್ತು.

ಯುಕ್ತಧಾರ ತರಬೇತಿಯ ಬಗ್ಗೆ ಕುಕನೂರ ತಾಲೂಕ ಸಹಾಯಕ ನಿರ್ದೇಶಕರಾದ ಶರಣಪ್ಪ ಕೆಳಗಿನಮನಿ ಪ್ರಾಸ್ತಾವಿಕ ವಾಗಿ ಮಾತನಾಡಿ ಭೌತಿಕ ಕ್ರಿಯಾಯೋಜನೆ ಬದಲು ಆನ್ ಲೈನ್ ನಲ್ಲಿ ನಲ್ಲಿ ಕ್ರಿಯಾ ಹಂತವಾಗಿದ್ದು ಇದರಿಂದಾಗಿ ಯಾವ ಸ್ಥಳದಲ್ಲಿ ಎಂಥಹ ಕಾಮಗಾರಿ ತೆಗೆದುಕೊಳ್ಳಬೇಕು ಅದು ಆ ಸ್ಥಳಕ್ಕೆ ಸೂಕ್ತವಾಗಿದೆಯೇ ಎಂದು ತಿರ್ಮಾನಿಸಿ ಅನುಷ್ಠಾನ ಮಾಡುವ ಪ್ರಕ್ರಿಯೆಯಾಗಿದೆ ಎಂದರು.

ನಂತರ ಯಲಬುರ್ಗಾ ತಾಲೂಕ ಪಂಚಾಯತಿಯ ಸಹಾಯಕ ನಿರ್ದೇಶಕರು ಹನಮಂತಗೌಡ ಪೋಲೀಸ್ ಪಾಟೀಲ್ ರವರು ಮಾತನಾಡಿ ಕೇಂದ್ರಗ್ರಾಮೀಣಾಭಿವೃದ್ಧಿ ಮಂತ್ರಾಲಯದಿಂದ ನಿರ್ಮಾಣ ಮಾಡಿರುವ ಹೊಸ ವೈಜ್ಞಾನಿಕ ಮಾದರಿ ಕಾಮಗಾರಿ ಆಯ್ಕೆ ಮಾಡುವ ಒಂದು ಹಂತವಾಗಿದೆ. ಇದರಿಂದಾಗಿ ಯೋಜನೆಯ ಉದ್ದೇಶ ಸಾಕಾರಗೊಳ್ಳುತ್ತದೆ ಎಂದರು.

ತರಬೇತಿಯ ಮಾಸ್ಟರ್ ಟ್ರೇನರ್ ಗಳಾದ ಯಲಬುರ್ಗಾ ತಾಂತ್ರಿಕ ಸಂಯೋಜಕ ಸಂತೋಷ ನಂದಾಪುರ ಪಿಪಿಟಿ ಮೂಲಕ ಸಂಪೂರ್ಣವಾಗಿ ತರಬೇತಿ ನೀಡಿದರು. ಕಾರ್ಯಗಾರದಲ್ಲಿ ವಲಯ ಅರಣ್ಯಾಧಿಕಾರಿಗಳಾದ ಬಸವರಾಜ ಗೋನೇರಿ, ರೇಷ್ಮೇ ವಿಸ್ತೀರ್ಣಾಧಿಕಾರಿಗಳಾದ ಹಸೇನ್ ರವರು, ಯಲಬುರ್ಗಾ ಮತ್ತು ಕುಕನೂರ ತಾಲೂಕಿನ ಗ್ರಾ.ಪಂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಅನುಷ್ಠಾನ ಇಲಾಖೆಯ ಕ್ಷೇತ್ರ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ತಾಲೂಕ ಐಇಸಿ ಸಂಯೋಜಕರು, ತಾಂತ್ರಿಕ ಸಂಯೋಜಕರು ಎಲ್ಲಾ ತಾಂತ್ರಿಕ ಸಹಾಯಕರ

ಸಕ್ಕರೆ ಕಾರ್ಖಾನೆ ಮಾಲಿಕರ ಸ್ಪಷ್ಟನೆ

ರೈತರ ಜೊತೆ ಚರ್ಚಿಸಿದ ಬಳಿಕ ದರ ನಿರ್ಧಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.10–ಪ್ರಸಕ್ತ ಹಂಗಾಮಿಗೆ ಕಾರ್ಖಾನೆ ಪ್ರಾರಂಭಿಸಲು ಕಾಲಾವಕಾಶ ಇರುವ ಹಿನ್ನೆಲೆಯಲ್ಲಿ ರೈತರ ಸಭೆ ಕರೆದು ಕಬ್ಬಿನ ದರದ ಬಗ್ಗೆ ಚರ್ಚಿಸಿ ತೀರ್ಮಾಣ ಕೈಗೊಳ್ಳುವುದಾಗಿ ಸಕ್ಕರೆ ಕಾರ್ಖಾನೆಯವರು ಸ್ಪಷ್ಟಪಡಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು.

ಗುರುವಾರ ರೈತರು ಮತ್ತು ಸಕ್ಕರೆ ಕಾರ್ಖಾನೆ ಮಾಲಿಕರು ಅಥವಾ ವ್ಯವಸ್ಥಾಪಕ ನಿರ್ದೇಶಕರುಗಳ ಜೊತೆ ಪ್ರತ್ಯೇಕವಾಗಿ ಚರ್ಚಿಸಿದ ಅವರು, ಪ್ರಸಕ್ತ ಹಂಗಾಮಿಗೆ ನವೆಂಬರ1ರಿಂದ ಕಾರ್ಖಾನೆ ಪ್ರಾರಂಭಿಸಲು ಸರಕಾರ ತಿಳಿಸಿದ್ದು, ಕಳೆದ ಹಂಗಾಮಿನಲ್ಲಿ ರೈತರಿಗೆ ಪಾವತಿಸಬೇಕಾದ ಹಣ ಬಾಕಿ ಉಳಿಸಿಕೊಂಡಿರುವ ಜಮಖಂಡಿ ಸಕ್ಕರೆ ಕಾರ್ಖಾನೆಯವರು ಬಾಕಿ ಮೊತ್ತವನ್ನು ಕೂಡಲೇ ಪಾವತಿಸುವಂತೆ ತಿಳಿಸಿದರು.

ಕಳೆದ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆ ಮತ್ತು ರೈತರ ನಡುವೆ ಮಾಡಿಕೊಂಡ ಎಫ್. ಆರ್.ಪಿ ಕ್ಕಿಂತ ಹೆಚ್ಚುವರಿ ದರದ ಬಾಕಿ ಮೊತ್ತವನ್ನು ಪಾವತಿಸಿದ ನಂತರವೇ ಪ್ರಸಕ್ತ ಹಂಗಾಮಿನಲ್ಲಿ ಕಾರ್ಖಾನೆ ಪ್ರಾರಂಭಿಸುವಂತೆ ರೈತರು ಬೇಡಿಕೆ ಇಟ್ಟಿದ್ದು, ಬಾಕಿ ಉಳಿಸಿಕೊಂಡ ಕಾರ್ಖಾನೆಗಳು ಕೂಡಲೇ ಪಾವತಿ ಮಾಡಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಕಬ್ಬು ಕಟಾವು ಮತ್ತು ಸಾಗಾಣಿಕಾ ವೆಚ್ಚವನ್ನು ಸರಕಾರದ ಮಾರ್ಗಸೂಚಿಯ ಪ್ರಕಾರ ಪಾವತಿಗೆ ಕ್ರಮಕೈಗೊಳ್ಳಲು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಮಾತನಾಡಿ, ಕಬ್ಬು ಸಾಗಾಣಿಕೆ ಮಾಡುವ ಟ್ಯಾಕ್ಟರಗಳಿಗೆ ರಿಫ್ಲೇಕ್ಟರಗಳನ್ನು ಕಡ್ಡಾಯವಾಗಿ ಅಂಟಿಸಬೇಕು. ಅಲ್ಲದೇ ಟ್ಯಾಕ್ಟರಗಳಲ್ಲಿ ಅಳವಡಿಸಲಾದ ಧ್ವನಿವರ್ಧಕಗಳನ್ನು ಸಹ ತೆಗೆದು ಹಾಕಲು ತಿಳಿಸಿದರು. ಅಲ್ಲದೇ ಅಲ್ಕೋಹಾಲ್ ಚೆಕ್ಕರ್ ಮೀಟರ್ ಅಳವಡಿಸಿ ಡ್ರಿಂಕ್ ಮತ್ತು ಡ್ರೈವರ್‌ಗಳಿದ್ದಲ್ಲಿ ಅವರನ್ನು ಕಪ್ಪು ಪಟ್ಟಿಗೆ ಸೇರಿಸಲು ಸೂಚಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಸಕ್ಕರೆ ಕಾರ್ಖಾನೆಗಳು ಕಡ್ಡಾಯವಾಗಿ ಕರ ಪಾವತಿ ಮಾಡಬೇಕು. ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಕಾರ್ಖಾನೆಯ ಒಳಗೆ ಪ್ರವೇಶಿಸಲು ಅವಕಾಶ ನೀಡದಿರುವ ಬಗ್ಗೆ ಗಮನಕ್ಕೆ ಬಂದಿದ್ದು, ಈ ರೀತಿ ಆಗಬಾರದು. ಈಗಾಗಲೇ ಕೆಲವು ಕಾರ್ಖಾನೆಯವರು ಪಂಚಾಯತಿಗೆ ಕರ ಪಾವತಿ ಮಾಡುತ್ತಿದ್ದು, ಉಳಿದ ಎಲ್ಲ ಸಕ್ಕರೆ ಕಾರ್ಖಾನೆಗಳು ಸಹ ಪ್ರತಿ ವರ್ಷ ಕರ ಪಾವತಿಸಬೇಕು ಎಂದರು.

ರೈತರು ಸಭೆಯಲ್ಲಿ ಸಕ್ಕರೆ ಕಾರ್ಖಾನೆಯವರು ಯಾವ ಯಂತ್ರದಲ್ಲಿ ಕಬ್ಬನ್ನು ತೂಕ ಮಾಡುತ್ತಾರೋ ಅದೇ ಯಂತ್ರದಲ್ಲಿ ಸಕ್ಕರೆಯನ್ನು ಕೂಡಾ ತೂಕ ಮಾಡಿ ಕಳುಹಿಸಬೇಕು. ಕಡ್ಡಾಯವಾಗಿ ಎಲ್ಲ ಕಡೆ ಸಿಸಿ ಕ್ಯಾಮರಾ ಅಳವಡಿಸಿ ಪಾರದರ್ಶಕತೆ ತರಬೇಕು. ಒಂದು ಕಾರ್ಖಾನೆಯಿಂದ ಇನ್ನೊಂದು ಕಾರ್ಖಾನೆಗೆ ಬೇರೆ ಬೇರೆ ದರ ನಿಗಧಿಯಾಗಿದ್ದು, ಒಂದೇ ದರ ನಿಗಧಿ ಮಾಡಬೇಕು ಎಂದು ಹೇಳಿದರು.

ಹಿಂದಿನ ಹಂಗಾಮಿನಲ್ಲಿ ಯಾರು ರೈತರಿಗೆ ಹಣ ಪಾವತಿಸಿರುವದಿಲ್ಲವೋ ಅವರು ಹಣಕ್ಕೆ ಬಡ್ಡಿ ಸಮೇತ ನೀಡುವಂತೆ ರೈತರು ಬೇಡಿಕೆ ಇಟ್ಟರಲ್ಲದೇ, ಕೇಂದ್ರ ಮಂತ್ರಿಗಳು, ರಾಜ್ಯ ಮಂತ್ರಿಗಳು, ಜಿಲ್ಲಾ ಮಂತ್ರಿಗಳು, ಸಕ್ಕರೆ ಆಯುಕ್ತರು ಜಿಲ್ಲೆಗೆ ಆಗಮಿಸಿ ರೈತರ ಮತ್ತು ಕಾರ್ಖಾನೆಯವರ ಬೇಡಿಕೆಗಳನ್ನು ಆಲಿಸಲು ಸಭೆ ಜರುಗಿಸುವ ಅವಶ್ಯಕತೆ ಇದೆ ಎಂದು ರೈತರು ಸಭೆಗೆ ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರಸನ್ನ ದೇಸಾಯಿ, ಮಹಾಂತೇಶ್ವರ ಜಿದ್ದಿ, ಬೆಳಗಾವಿ ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಸಂಪನ್ಮೂಲ ವ್ಯಕ್ತಿ ಸಿ.ಬಿ.ಪಾಟೀಲ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸೇರಿದಂತೆ ರೈತರು ಹಾಗೂ ವಿವಿಧ ಕಾರ್ಖಾನೆಗಳ ಮಾಲಿಕರು, ವ್ಯವಸ್ಥಾಪಕ ನಿರ್ದೇಶಕರು ಉಪಸ್ಥಿತರಿದ್ದರು.

ವಕೀಲ ರಾಕೇಶ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.10–ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳ ಮೇಲೆ ಶೂ ಎಸೆದ ಘಟನೆಯನ್ನು ಖಂಡಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ನಗರದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿತು.

ನವನಗರದ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಜಿಲ್ಲಾಡಳಿತ ಭವನಕ್ಕೆ ತಲುಪಿ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ, ಕೃತ್ಯ ನ್ಯಾಯಾಂಗದ ಗೌರವಕ್ಕೆ ಧಕ್ಕೆ ತರುವುದರ ಜೊತೆಗೆ ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ವಿರುದ್ಧವಾಗಿದೆ. ನ್ಯಾಯಾಂಗದ ಸ್ವತಂತ್ರ್ಯತೆ ಮತ್ತು ಸಂವಿಧಾನದ ಮೌಲ್ಯಗಳನ್ನು ಕಾಪಾಡುವ ನಿಟ್ಟಿನಲ್ಲಿ ಇಂತಹ ಘಟನೆಗಳನ್ನು ಸಮಸ್ತ ಸಮಾಜ ಖಂಡಿಸಬೇಕು ಎಂದು ಹೇಳಿದರು. ಮುಖಂಡರಾದ ಪರಶುರಾಮ ಮಹಾರಾಜನವರ, ನ್ಯಾಯವಾದಿಗಳಾದ ರಮೇಶ ಬದ್ನೂರ, ಚಂದ್ರಶೇಖರ ರಾಠೋಡ ಮಾತನಾಡಿ, ಕೃತ್ಯ ಎಸಗಿರುವ ವಕೀಲ ರಾಕೇಶ ಕಿಶೋರ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಪಕ್ಷದ ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ನಾಗರಾಜ ಹದ್ಲಿ, ಕಾನೂನು ಘಟಕದ ಜಿಲ್ಲಾಧ್ಯಕ್ಷ ಎನ್.ಬಿ.ಗಸ್ತಿ, ಎಸ್ ಸಿ ಘಟಕದ ಜಿಲ್ಲಾಧ್ಯಕ್ಷ ರಾಜು ಮನ್ನಿಕೇರಿ, ಎಸ್.ಟಿ ಘಟಕದ ಜಿಲ್ಲಾಧ್ಯಕ್ಷ ಹನಮಂತ ಡೋಣಿ, ಕೆಎಂಎಫ್ ನಿರ್ದೇಶಕ ಸಿದ್ದಪ್ಪ ಕೋಲಾರ, ಮುಖಂಡರಾದ ಶ್ರೀಧರ ನೀಲನಾಯಕ, ಹಾಜಿಸಾಬ ದಂಡಿನ, ಅಜಯ ಕಪಾಟೆ, ಮಹಿಳಾ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷೆ ಮಂಜುಳಾ ಕಮತಗಿ, ಮಂಜುಳಾ ಭೂಸಾರೆ, ರೇಣುಕಾ ನಾರಾಯಣಕರ, ಶ್ರವಣ ಖಾತೇದಾರ, ವೈ.ವೈ.ತಿಮ್ಮಾಪೂರ, ಅಭಿಷೇಕ ಸನ್ನಪ್ಪನವರ, ಸುನೀಲ ಕಿರಸೂರ, ಮಹ್ಮದ ಖಯೂಮ, ಬಸವರಾಜ ಹೂವಿನಗಳ್ಳಿ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

ಎಕ್ಸಪೋರ್ಟ ಪ್ರಮೋಷನ್ ಯೋಜನೆ ಕುರಿತು ಕಾರ್ಯಗಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.10–ಜಿಲ್ಲೆಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಏರ್ಪಡಿಸಿದ್ದ ಎಕ್ಸಪೋರ್ಟ ಪ್ರಮೋಷನ್ ಮತ್ತು ಫೆಸಿಲಿಟೆಷನ್ ಯೋಜನೆ ಕುರಿತ ಒಂದು ದಿನದ ಕಾರ್ಯಗಾರವನ್ನು ಇಳಕಲ್ ಗ್ರಾನೈಟ್ ಉದ್ದಿಮೆದಾರರ ಸಂಘದ ಅಧ್ಯಕ್ಷ ವೆಂಕಟೇಶ ಗುಡಗುಂಟಿ ಉದ್ಘಾಟಿಸಿ, ಕಾರ್ಯಗಾರದ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.

ಇಳಕಲ್ ನಗರದ ಝಿಫ್ ಹೋಟೆಲ್‌ನಲ್ಲಿ ಗುರುವಾರ ನಡೆದ ಕಾರ್ಯಗಾರ ಕುರಿತು ಪರಿಚಯಾತ್ಮಕ ಮಾತುಗಳನ್ನಾಡಿದ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು, ರಾಂಪ (ಖಂಬಕ) ಯೋಜನೆಯ ಮಹತ್ವ ತಿಳಿಸುತ್ತ, ವರ್ಲ್ಡ ಬ್ಯಾಂಕ್ ಸಹಯೋಗದಲ್ಲಿ ಪ್ರಾಯೋಜಿತ ಕಾರ್ಯಕ್ರಮ ಇದಾಗಿದೆ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ವೇಗವರ್ಧನೆ ಮತ್ತು ಬಲಪಡಿಸಲು 12 ವಿಷಯಗಳಲ್ಲಿ ಗುಣಮಟ್ಟದ ಸಂಪನ್ಮೂಲ ವ್ಯಕ್ತಿಗಳಿಂದ ಕಾರ್ಯಗಾರ ಏರ್ಪಡಿಸಿದ್ದು, ಜಿಲ್ಲೆಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಯೋಜನೆಯ ಸದುಪಯೋಗ ಪಡೆದು ,ತಮ್ಮ ಘಟಕಗಳ ಸಾಮರ್ಥ್ಯ ಹೆಚ್ಚಿಸಿಕೊಳ್ಳುವಂತೆ ಸೂಚಿಸಿದರು.

ಇಳಕಲ್ ಗ್ರಾನೈಟ್ ಉದ್ದಿಮೆದಾರರ ಸಂಘದ ಉಪಾಧ್ಯಕ್ಷ ನೇಮತುಲ್ಲಾ ಚಟ್ನಿಹಾಳ ಮಾತನಾಡಿ, ಗ್ರಾನೈಟ್ ಉದ್ದಿಮೆದಾರರು ಅನೇಕ ಸಮಸ್ಯೆಯಿಂದ ಬಳಲುತ್ತಿದ್ದು, ಇಲಾಖೆಗಳು ಸಮಸ್ಯೆ ಬಗೆಹರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು ಕೋರಿದರು.

ಕಾರ್ಯಕ್ರಮದಲ್ಲಿ ಇಳಕಲ್ ಗ್ರಾನೈಟ್ ಉದ್ದಿಮೆದಾರರ ಸಂಘದ ಕಾರ್ಯದರ್ಶಿ ಬಬ್ಲು ಬಿಳಿಕುದರಿ , ಕೈಮಗ್ಗ ಮತ್ತು ಜವಳಿ ಇಲಾಖೆ ಸಹಾಯಕ ನಿರ್ದೇಶಕ ಸಂತೋಷ ಚಾರಖಾನೆ, ಉಪನಿರ್ದೇಶಕ ಮಂಜುನಾಥ ಹೊಸಮನಿ, ಸಹಾಯಕ ನಿರ್ದೇಶಕರಾದ ರತ್ನಾ ಅಂಗಡಿ, ಅತಿಬ್ ಜಮಾದಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ರೈತರಿಗೆ ತತಕ್ಷಣ ನೆರೆ ಪರಿಹಾರ ನೀಡಿ–ಬಿಜೆಪಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.10–ರೈತರಿಗೆ ತತಕ್ಷಣ ನೆರೆ ಪರಿಹಾರ ಬಿಡುಗಡೆ ಮಾಡಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ ಆಗ್ರಹಿಸಿದ್ದಾರೆ.

ಶುಕ್ರವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಆಡಳಿತ ನಿಷ್ಕ್ರೀಯಗೊಂಡಿದ್ದು, ನೆರೆಯಿಂದ ಬೆಳೆ ಕಳೆದುಕೊಂಡು ಹಾನಿ ಅನುಭವಿಸಿರುವ ರೈತರಿಗೆ ಪರಿಹಾರ ನೀಡುವಲ್ಲಿ ವಿಳಂಬ ತೋರುತ್ತಿದೆ ಎಂದು ಆರೋಪಿಸಿದರು.

ಇತ್ತೀಚೆಗೆ ಮತ್ತೆ ಅತಿವೃಷ್ಟಿಯಿಂದ ಸಾಕಷ್ಟು ಬೆಳೆ ಹಾನಿಗೀಡಾಗಿದ್ದು, ಇದರ ಪರಿಹಾರದ ಬಗ್ಗೆ ಸರ್ಕಾರ ಈಗಾಗಲೇ ಕೆಲವು ಕಾರ್ಖಾನೆಯವರು ಪಂಚಾಯತಿಗೆ ಕರ ಪಾವತಿ ಮಾಡುತ್ತಿದ್ದು, ಉಳಿದ ಎಲ್ಲ ಸಕ್ಕರೆ ಕಾರ್ಖಾನೆಗಳು ಸಹ ಪ್ರತಿ ವರ್ಷ ಕರ ಪಾವತಿಸಬೇಕು ಎಂದರು.

ರೈತರು ಸಭೆಯಲ್ಲಿ ಸಕ್ಕರೆ ಕಾರ್ಖಾನೆಯವರು ಯಾವ ಯಂತ್ರದಲ್ಲಿ ಕಬ್ಬನ್ನು ತೂಕ ಮಾಡುತ್ತಾರೋ ಅದೇ ಯಂತ್ರದಲ್ಲಿ ಸಕ್ಕರೆಯನ್ನು ಕೂಡಾ ತೂಕ ಮಾಡಿ ಕಳುಹಿಸಬೇಕು. ಕಡ್ಡಾಯವಾಗಿ ಎಲ್ಲ ಕಡೆ ಸಿಸಿ ಕ್ಯಾಮರಾ ಅಳವಡಿಸಿ ಪಾರದರ್ಶಕತೆ ತರಬೇಕು. ಒಂದು ಕಾರ್ಖಾನೆಯಿಂದ ಇನ್ನೊಂದು ಕಾರ್ಖಾನೆಗೆ ಬೇರೆ ಬೇರೆ ದರ ನಿಗಧಿಯಾಗಿದ್ದು, ಒಂದೇ ದರ ನಿಗಧಿ ಮಾಡಬೇಕು ಎಂದು ಹೇಳಿದರು.

ಹಿಂದಿನ ಹಂಗಾಮಿನಲ್ಲಿ ಯಾರು ರೈತರಿಗೆ ಹಣ ಪಾವತಿಸಿರುವದಿಲ್ಲವೋ ಅವರು ಹಣಕ್ಕೆ ಬಡ್ಡಿ ಕಿಂಚಿತ್ತೂ ಕಾಳಜಿ ವಹಿಸಿಲ್ಲ. ಸಮಾಜ ಹಾಗೂ ಜಾತಿಗಳನ್ನು ಒಡೆಯುವ ನಿಟ್ಟಿನಲ್ಲಿ ಕಾಂಗ್ರೆಸ್ ಸರ್ಕಾರ ಕೆಸಲ ಮಾಡುತ್ತಿದೆ ಎಂದರು.

ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಪರ ಕೆಲಸಗಳು ನಡೆಯುತ್ತಿಲ್ಲ. ಜಾತಿ ಗಣತಿ ನೆಪದಲ್ಲಿ ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದು, ರೈತರ ಪರ ನಿಲ್ಲದೆ ಕಾಲಹರಣ ಮಾಡುತ್ತಿದೆ, ನೆರೆಯಿಂದ ಬೆಳೆ ಹಾನಿಯಾದ ರೈತರಿಗೆ ಹೆಕ್ಟರಿಗೆ 8500 ರೂ. ಹಾಗೂ ಮನೆ ಬಿದ್ದು ಹೋದರೆ 1.20ಲಕ್ಷ ರೂ. ಪಾತ್ರೆ, ಪಗಡು ಕಳೆದುಕೊಂಡವರಿಗೆ 5 ಸಾವಿರ ರೂ. ಪರಿಹಾರ ಘೋಷಣೆ ಮಾಡಬೇಕು. ಆದರೆ ಇಲ್ಲಿವರೆಗೂ ಅದು ಕಾರ್ಯಗತವಾಗಿಲ್ಲ ಎಂದು ದೂರಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ 2019 ರಲ್ಲಿ ಪ್ರವಾಹ ಬಂದಾಗ ಅಂದಿನ ಮುಖ್ಯಮಂತ್ರಿಯಡಿಯೂರಪ್ಪ ರೈತರ ಸಂಕಷ್ಟಕ್ಕೆ ಕೂಡಲೇ ಸ್ಪಂದಿಸಿ ಯೋಗ್ಯ ಪರಿಹಾರವನ್ನು ನೀಡಿದ್ದರು ಎಂದು ಹೇಳಿದ ಶಾಂತಗೌಡ ಪಾಟೀಲ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಬಿಜೆಪಿ ರೂಪಿಸಿದ್ದ ರೈತರ ಪರ ಕಲ್ಯಾಣ ಯೋಜನೆಗಳನ್ನು ನಿಲ್ಲಿಸಲಾಗಿದೆ ಎಂದು ಹೇಳಿದರು.

ಸತ್ಯನಾರಾಯಣ ಹೇಮಾದ್ರಿ, ಶಿವಾನಂದ ಸುರಪುರ, ಮುತ್ತು ಉಳ್ಳಾಗಡ್ಡಿ ಸುದ್ದಿಗೋಷ್ಠಿಯಲ್ಲಿ ಇದ್ದರು.

ನರ್ಸಿಂಗ್ ವಿದ್ಯಾರ್ಥಿಗಳ ದೀಪದಾನ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.10–ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯಗಳ 2024–25 ನೇ ಸಾಲಿಗೆ ಪ್ರವೇಶ ಪಡೆದ ಪ್ರಥಮ ವರ್ಷದ ನರ್ಸಿಂಗ್ ವಿದ್ಯಾರ್ಥಿಗಳಿಗಾಗಿ ದೀಪ ಬೆಳಗಿಸುವ ಹಾಗೂ ಪ್ರತಿಜ್ಞಾ ವಿಧಿ ಸ್ವೀಕಾರ ಸಮಾರಂಭ ನಿಜಲಿಂಗಪ್ಪ ಮೆಡಿಕಲ್ ಕಾಲೇಜು ಆವರಣದಲ್ಲಿರುವ ಶತಾಬ್ಧಿ ಭವನದಲ್ಲಿ ಜರುಗಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿದ್ದ ಎಸ್. ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಮಾತನಾಡಿ, ಭಾರತದಲ್ಲಿನ ಆರೋಗ್ಯವ್ಯವಸ್ಥೆಯಲ್ಲಿ ಶುಶ್ರೂಷಕರು ಆರೋಗ್ಯ ರಕ್ಷಣಾ ವ್ಯವಸ್ಥೆಯ ಆಧಾರಸ್ಥಂಭವಾಗಿದ್ದು, ಅವರಿಗೆ ನರ್ಸಿಂಗ್ ವೃತ್ತಿಯ ಶಿಸ್ತು, ಬದ್ಧತೆ ಮತ್ತು ಸೇವಾ ಮನೋಭಾವದ ಅಗತ್ಯತೆ ಇದೆ ಎಂದರು.

ನರ್ಸಿಂಗ್ ವೃತ್ತಿಯಲ್ಲಿ ತೊಡಗಿಸಿಕೊಳ್ಳುವವರು ವೃತ್ತಿಯನ್ನು ಪ್ರೀತಿಸುವ ಹಾಗೂ ಹೊಸ ಸಂಗತಿಗಳನ್ನು ಕಲಿಯುವ ಗುಣವುಳ್ಳವರಾಗಿರಬೇಕು. ರೋಗಿಗಳಿಗೆ ಸಮರ್ಪಣಾ ಹಾಗೂ ಕೌಶಲಪೂರ್ಣ ಸೇವೆಯನ್ನು ಒದಗಿಸುವ ಸಂಕಲ್ಪ ತೊಡಬೇಕು ಎಂದು ಡಾ.ಯಳಮಲಿ ಹೇಳಿ, ವಿದ್ಯಾರ್ಥಿಗಳಿಗೆ ಶುಭ ಕೋರಿದರು.

ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಹಾಗೂ ಡಾ. ದಿಲೀಪ್ ನಾಟೇಕರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರಸ್ತುತ ಭಾರತದಲ್ಲಿ 1000 ಜನಸಂಖ್ಯೆಗೆ 1.7 ಶುಶ್ರೂಷಕರಿದ್ದು, ಇನ್ನೂ 20 ಲಕ್ಷ ಶುಶ್ರೂಷಕರ ಕೊರತೆ ಇದೆ. ಶುಶ್ರೂಷಕರೇ ನಮ್ಮೆಲ್ಲರ ಭವಿಷ್ಯ, ಶ್ರದ್ಧೆಯಿಂದ ಹಾಗೂ ಪ್ರಾಮಾಣಿಕತೆಯಿಂದ ನಮ್ಮ ವೃತ್ತಿಯಲ್ಲಿ ಕೆಲಸ ಮಾಡಿದರೆ ಹಣ ಮತ್ತು ಯಶಸ್ಸು ಖಂಡಿತ ದೊರೆಯುತ್ತದೆ ಎಂದು ಹೇಳಿದರು.

ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಉಪ ಅಧೀಕ್ಷಕ ಡಾ.ನಾರಾಯಣ ಮುತಾಲಿಕ್ ಉಪಸ್ಥಿತರಿದ್ದರು. ಪ್ರಾಧ್ಯಾಪಕಿ ಶಾಂಭವಿ ಪ್ರತಿಜ್ಞಾ ವಿಧಿ ಬೋಧಿಸಿದರು. ಡಾ.ಶ್ರೀಹರ್ಷ ಪ್ರತಿಜ್ಞಾ ವಿಧಿ ಸ್ವೀಕಾರ ಮತ್ತು ದೀಪ ಬೆಳಗಿಸುವುದರ ಮಹತ್ವ ವಿವರಿಸಿದರು. ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯೆ ಜಯಶ್ರೀ ಇಟ್ಟಿ ಮಹಾವಿದ್ಯಾಲಯಗಳ ಸಾಧನೆಗಳ ವಾರ್ಷಿಕ ವರದಿ ವಿವರಿಸಿದರು.

ಶಾರದಾಂಬೆ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪ್ರವೀಣ ಎಸ್.ಪಾಟೀಲ ಸ್ವಾಗತಿಸಿದರು. ಪ್ರಾಧ್ಯಾಪಕ ಡಾ.ನಿಂಗನಗೌಡ ಪಾಟೀಲ ವಂದಿಸಿದರು. ಪ್ರಾಧ್ಯಾಪಕ ರೇಣುಕರಾಜ ನಾಗಮ್ಮನವರ ನಿರೂಪಿಸಿದರು.

ಮಧ್ಯಸ್ಥಿಕೆ ಮೂಲಕ 235 ಪ್ರಕರಣಗಳು ಇತ್ಯರ್ಥ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.10–ರಾಷ್ಟ್ರವ್ಯಾಪ್ತಿ ಮಧ್ಯಸ್ಥಿಕೆ ಅಭಿಯಾನದ ಅಂಗವಾಗಿ ಜಿಲ್ಲಾ ನ್ಯಾಯಾಲಯ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಹಮ್ಮಿಕೊಂಡ 90 ದಿನಗಳ ವಿಶೇಷ ಅಭಿಯಾನದಲ್ಲಿ ಒಟ್ಟು 235 ಪ್ರಕರಣಗಳನ್ನು ಮಧ್ಯಸ್ಥಿಕೆಯ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ್ ತಿಳಿಸಿದ್ದಾರೆ. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಮ

ಅ.17ಕ್ಕೆ ಭಾರತದ ಸ್ವದೇಶಿ ನಿರ್ಮಿತ ತೇಜಸ್ ಎಂಕೆ1ಎ ಫೈಟರ್ ಜೆಟ್ ಮೊದಲ ಹಾರಾಟ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಅ.10: ಭಾರತದ ಸ್ವದೇಶಿ ನಿರ್ಮಿತ ತೇಜಸ್ ಎಂಕೆ1ಎ ಫೈಟರ್ ಜೆಟ್ ಅ.17 ರಂದು ಮಹಾರಾಷ್ಟ್ರದ ನಾಸಿಕ್‌ನಲ್ಲಿ ತನ್ನ ಚೊಚ್ಚಲ ಹಾರಾಟ ನಡೆಸಲಿದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಎಚ್‌ಎಎಲ್)ನಲ್ಲಿ ಉದ್ಘಾಟನೆ ಮಾಡಲಿದ್ದಾರೆ. ಜೊತೆಗೆ, ತೇಜಸ್ ಎಂಕೆ1ಎ ಗಾಗಿ ಮೂರನೇ ಉತ್ಪಾದನಾ ಮಾರ್ಗ ಮತ್ತು ಊಖಿಖಿ–40 ವಿಮಾನಕ್ಕಾಗಿ ಎರಡನೇ ಉತ್ಪಾದನಾ ಮಾರ್ಗವನ್ನು ಉದ್ಘಾಟಿಸಲಿದ್ದಾರೆ. ಈ ಸಾಧನೆಯು ಭಾರತದ ರಕ್ಷಣಾ ಉತ್ಪಾದನಾ ವಲಯದಲ್ಲಿ ಸ್ವಾವಲಂಬನೆಯತ್ತ ಮಹತ್ವದ ಹೆಜ್ಜೆಯನ್ನು ಸೂಚಿಸುತ್ತದೆ. 'ಮೇಕ್ ಇನ್ ಇಂಡಿಂ–ಾ' ಉಪಕ್ರಮದ ದೃಷ್ಟಿಕೋನವನ್ನು ಬಲಪಡಿಸುತ್ತದೆ.

ಭಾರತದ ಏರೋಸ್ಪೇಸ್ ಸಾಮರ್ಥ್ಯಗಳಲ್ಲಿ ತೇಜಸ್ ಎಂಕೆ–1ಎ ಒಂದು ಪ್ರಮುಖ ಪ್ರಗತಿಯಾಗಿದೆ. ಈ 4.5–ಪೀಳಿಗೆಯ, ಬಹು–ಪಾತ್ರದ ಯುದ್ಧ ವಿಮಾನವನ್ನು ಭಾರತೀಯ ವಾಯುಪಡೆಯ ಕಾರ್ಯಾಚರಣೆಯನ್ನು ಬಲಪಡಿಸಲು ವಿನ್ಯಾಸಗೊಳಿಸಲಾಗಿದೆ. ಅತ್ಯಾಧುನಿಕ ರಾಡಾರ್ ವ್ಯವಸ್ಥೆಗಳು, ಸುಧಾರಿತ ಏವಿಯಾನಿಕ್ಸ್ ಮತ್ತು ಅತ್ಯಾಧುನಿಕ ಎಲೆಕ್ಟ್ರಾನಿಕ್ ಯುದ್ಧ ಸೂಟ್‌ಗಳನ್ನು ಹೊಂದಿರುವ ತೇಜಸ್ ಎಂಕೆ–1ಎ ವರ್ಧಿತ ನಿಖರತೆ ಮತ್ತು ಮಾರಕತೆಯಿಂದ ಕೂಡಿದೆ. ಮ್ಯಾಕ್ 1.8 ರ ಗರಿಷ್ಠ ವೇಗ ಅಥವಾ ಗಂಟೆಗೆ ಸುಮಾರು 2,200 ಕಿಲೋಮೀಟರ್‌ಗಳೊಂದಿಗೆ, ಇದನ್ನು ಬ್ರಹ್ಮೋಸ್ ಹೊಸ–ಪೀಳಿಗೆಯ ಕ್ರೂಸ್ ಕ್ಷಿಪಣಿಯನ್ನು ಸಾಗಿಸಲು ಅಳವಡಿಸಲಾಗುತ್ತಿದೆ. ಸ್ಥಳೀಯ ನಿರ್ಮಿತ ಲಘು ಯುದ್ಧ ವಿಮಾನದ ಇತ್ತೀಚಿನ ರೂಪಾಂತರವನ್ನು ಆಧುನಿಕ ಯುದ್ಧದ ಬೇಡಿಕೆಗಳನ್ನು ಪೂರೈಸಲು ವಿನ್ಯಾಸಗೊಳಿಸಲಾಗಿದೆ. ಇದು ಉನ್ನತ ಚುರುಕುತನ, ರಹಸ್ಯ ವೈಶಿಷ್ಟ್ಯಗಳು ಮತ್ತು ಬಹುಮುಖ ಕಾರ್ಯಾ

ಚರಣೆಯ ಕಾರ್ಯಕ್ಷಮತೆಯನ್ನು ನೀಡುತ್ತದೆ. ರಕ್ಷಣಾ ತಜ್ಞರು ಇದನ್ನು 'ಆಕಾಶದ ಅರ್ಜುನ' ಎಂದು ಬಣ್ಣಿಸಿದ್ದಾರೆ. ಇದು ಸ್ಥಳೀಯ ರಕ್ಷಣಾ ತಂತ್ರಜ್ಞಾನದಲ್ಲಿ ಭಾರತದ ಬೆಳೆಯುತ್ತಿರುವ ವಿಶ್ವಾಸ ಮತ್ತು ಪ್ರಬುದ್ಧತೆಯನ್ನು ಸಂಕೇತಿಸುತ್ತದೆ.

ಜಿಲ್ಲಾಚುನಾವಣಾಧಿಕಾರಿಯಾಗಿ ಮಲ್ಲಣ್ಣ ನೇಮಕ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು :ಅ.10: ಕರ್ನಾಟಕ ಕಾರ್ಯನಿರತಪತ್ರಕರ್ತರಸಂಘದ 2025–2028 ನೇ ಸಾಲಿನ ರಾಯಚೂರು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಚುನಾವಣಾಧಿಕಾರಿಯಾಗಿ ನಿವೃತ್ತ ಉಪ ತಹಸೀಲ್ದಾರ್ ಮಲ್ಲಣ್ಣ ಅವರನ್ನು ನೇಮಕ ಮಾಡಿ ರಾಜ್ಯ ಮುಖ್ಯ ಚುನಾವಣಾಧಿಕಾರಿ ಎನ್ ರವಿಕುಮಾರ್ ಆದೇಶ ಹೊರಡಿಸಿದ್ದಾರೆ.

ಚುನಾವಣೆ ನಿಯಮನಗಳನ್ವಯ ಮತ್ತು ಸಂಘದ ಬೈಲಾ ಪ್ರಕಾರ ಚುನಾವಣೆ ನಡೆಸಿಕೊಡಲು ಸೂಚಿಸಲಾಗಿದೆ. ಚುನಾವಣೆ ಪ್ರಕ್ರಿಯೆ ಸಂದರ್ಭದಲ್ಲಿ ಬೈಲಾ ನಿಯಮಗಳ ಸಂಬಂಧ ಹೆಚ್ಚಿನ ಮಾಹಿತಿ ಅಗತ್ಯ ಬಿದ್ದರೆ ರಾಜ್ಯ ಚುನಾವಣಾಧಿಕಾರಿಯವರನ್ನು ಸಂಪರ್ಕಿಸಿ ಎಂದು ಆದೇಶ ಪತ್ರದಲ್ಲಿ ರಾಜ್ಯ ಮುಖ್ಯ ಚುನಾವಣಾಧಿಕಾರಿ ಎನ್ ರವಿಕುಮಾರ್ ತಿಳಿಸಿದ್ದಾರೆ.

ಮಲ್ಲಣ್ಣ ಅವರು ಜಿಲ್ಲಾ ಚುನಾವಣಾಧಿಕಾರಿಯಾಗಿ ಸತತ ಎರಡನೇ ಭಾರಿಗೆ ನೇಮಕವಾಗಿದ್ದಾರೆ.

ಪ್ರಕೃತಿ, ಪರಿಸರ ನಾಶವಾದರೆ ಇಡೀ ಮನುಕುಲ ನಾಶ

ಬಳ್ಳಾರಿ, ಅ.10 :ಪ್ರಪಂಚದ ವಿವಿಧೆಡೆ ಇತ್ತೀಚೆಗೆ ಸಂಭವಿಸಿದ ಪ್ರಕೃತಿ ವಿಕೋಪಗಳನ್ನು ಗಮನಿಸಿದರೆ ಮನುಷ್ಯನಿಗೆ ಪರಿಸರ ಅವಶ್ಯಕವಾಗಿದೆ. ಆದರೆ ಪರಿಸರಕ್ಕೆ ಮನುಷ್ಯನ ಅಗತ್ಯವಿಲ್ಲ, ಪ್ರಕೃತಿ ಪರಿಸರ ನಾಶವಾದರೆ ಇಡೀ ಮಾನವಕುಲವೇ ನಾಶವಾಗುತ್ತದೆ. ಪ್ರಕೃತಿ ಪರಿಸರ ಉಳಿದರೆ ಮಾತ್ರ ನಾವು ಮತ್ತು ಮುಂದಿನ ಪೀಳಿಗೆ ಬದುಕಲು ಸಾಧ್ಯ. ನಾವೆಲ್ಲರೂ ಜಾಗರೂಕರಾಗಬೇಕಿದೆ ಎಂದು ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆಯ ಸಚಿವ ಈಶ್ವರ್ ಖಂಡ್ರೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಅರಣ್ಯ ಇಲಾಖೆ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡು 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾ.ಪು) ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಶುಕ್ರವಾರ ಏರ್ಪಡಿಸಿದ್ದ 'ಸುವರ್ಣ ಮಹೋತ್ಸವ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹವಾಮಾನ ವೈಪರೀತ್ಯಗಳಿಂದ ಬರ, ಸುನಾಮಿ, ಅತಿವೃಷ್ಟಿ, ಅನಾವೃಷ್ಟಿಗಳನ್ನು ಕಾಣುತ್ತಿದ್ದೇವೆ. ಜಾಗತಿಕ ತಾಪಮಾನ ಹೆಚ್ಚಾಗುತ್ತಿರುವುದರಿಂದ ಪ್ರಕೃತಿ ವಿಕೋಪಗಳು ಸಂಭವಿಸುತ್ತಿವೆ. ಅದರಲ್ಲಿ ಜಲ ಮಾಲಿನ್ಯ, ವಾಯು ಮಾಲಿನ್ಯ ಮತ್ತು ಶಬ್ದ ಮಾಲಿನ್ಯಗಳಿಂದ ಅನೇಕ ರೀತಿಯ ಹಾನಿಯಾಗುತ್ತಿವೆ ಎಂದು ತಿಳಿಸಿದರು.

ದೇಶದಲ್ಲಿ ಮೊದಲ ಬಾರಿಗೆ ಪರಿಸರ ಸಂರಕ್ಷಣೆಗೆ ಕೆಲಸ ಮಾಡಿದವರು ಮಾಜಿ ಪ್ರಧಾನಿ ಇಂದಿರಾ ಗಾಂಧಿ. ಅವರು ದೇಶದಲ್ಲಿ ಮಾತ್ರವಲ್ಲ ಜಗತ್ತಿನಲ್ಲಿ ಮೊದಲ ಬಾರಿಗೆ ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣದ ಬಗ್ಗೆ ಮಾತನಾಡಿದರು. 1972ರಲ್ಲಿ ವಿಶ್ವಸಂಸ್ಥೆಯ ಸ್ಟಾಕ್‌ಹೋಮ್ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಇಂದಿರಾ ಗಾಂಧಿ ಅವರು ಪರಿಸರವನ್ನು ಉಳಿಸಿಕೊಳ್ಳಬೇಕಾದ ಮಹತ್ವವನ್ನು ಜಗತ್ತಿಗೆ ತಿಳಿಸಿಕೊಟ್ಟರು. ನಂತರ 1974ರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅಧೀನದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಗಳನ್ನು ಸ್ಥಾಪಿಸಿದರು. ಈಗ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ 50 ವರ್ಷ ಪೂರೈಸಿದ್ದು ಇದೀಗ ಸುವರ್ಣ ಮಹೋತ್ಸವ ಆಚರಿಸಿಕೊಳ್ಳುತ್ತಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಪ್ರಕೃತಿ ಪರಿಸರಕ್ಕೆ ವನ್ಯಜೀವಿ ಅವಶ್ಯಕ:

ಏಕಬಳಕೆ ಪ್ಲಾಸ್ಟಿಕ್ ತ್ಯಜಿಸಲು ಮನವಿ:

ಮಣ್ಣಲ್ಲಿ ಮಣ್ಣಾಗದ, ನೀರಲ್ಲಿ ಕರಗದ, ಸುಟ್ಟರೆ ವಿಷಕಾರಿ ಅಂಶವನ್ನು ಗಾಳಿಗೆ ಸೇರಿಸುವ ಏಕ ಬಳಕೆ ಪ್ಲಾಸ್ಟಿಕ್ ಈ ಭೂಗ್ರಹಕ್ಕೆ ಮಾರಕವಾಗಿದ್ದು, ಪ್ರಜ್ಞಾವಂತ ನಾಗರಿಕರು, ಏಕ ಬಳಕೆ ಪ್ಲಾಸ್ಟಿಕ್ ಉತ್ಪನ್ನ ತ್ಯಜಿಸಬೇಕು, ಸಂತೆ, ಮಾರುಕಟ್ಟೆಗೆ ಹೋಗುವಾಗ ಬಟ್ಟೆಯ ಕೈಚೀಲ ತೆಗೆದುಕೊಂಡು ಹೋಗಬೇಕು ಎಂದು ಮನವಿ ಮಾಡಿದರು.

ಬಳ್ಳಾರಿ ಖನಿಜ ಸಂಪತ್ತಿನಿಂದ ಕೂಡಿದ ಪ್ರದೇಶವಾಗಿದ್ದು, ಇಲ್ಲಿ ಪರಿಸರ ಸಂರಕ್ಷಣೆಗೆ ಕೆ.ಎಂ.ಇ.ಆರ್.ಸಿ. ಹಾಗೂ ಡಿಎಂಎಫ್ ನಿಧಿ ಲಭಿಸುತ್ತದೆ. ಇದನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಯೋಜನೆ ರೂಪಿಸಿ ಪ್ರಕೃತಿ ಪರಿಸರ ಉಳಿಸಲು ಪ್ರಾಮಾಣಿಕ ಪ್ರಯತ್ನ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ. ನರೇಂದ್ರ ಸ್ವಾಮಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಗಣಿಗಾರಿಕೆ ಹಾಗು ಕೈಗಾರಿಕೆಗಳಿಂದ ಹಾಳಾಗುತ್ತಿರುವ ಪರಿಸರವನ್ನು ಕಾಪಾಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ. 1997ರಲ್ಲಿ ಶುರುವಾದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಬಳ್ಳಾರಿ ಪ್ರಾದೇಶಿಕ ಕಛೇರಿಯು ಅದಿರು ಗಣಿಗಳಲ್ಲಿ ವಾಯು ಮಾಲಿನ್ಯ ನಿಯಂತ್ರಣ ಉಪಕರಣಗಳನ್ನು ಅಳವಡಿಸುವಂತೆ ಕ್ರಮ ಕೈಗೊಂಡಿದೆ. ಕಾನೂನು ಬಾಹಿರವಾಗಿ ಕಾರ್ಯಚರಣೆ ಮಾಡುತ್ತಿದ್ದ ಅದಿರು ಗಣಿಗಳನ್ನು ಮಂಡಳಿಯು 1981ರ ಜಲ ಮತ್ತು ವಾಯು ನಿಯಂತ್ರಣ ಕಾಯ್ದೆ ಅಡಿ ತಂದು ಅಲ್ಲಿನ ವಾಯು ಗುಣಮಟ್ಟವನ್ನು ನಿಯಂತ್ರಿಸುತ್ತಿದೆ. ಜಿಲ್ಲೆಯ 1,952 ಕಾರ್ಖಾನೆಗಳಿಂದ ಉತ್ಪಾದನೆಯಾಗುವ ತ್ಯಾಜ್ಯ ಮತ್ತು ಹೊಗೆಗಳ ಪರಿಶೀಲಿಸುತ್ತಿದೆ. ಸ್ಥಳೀಯ ಸಂಸ್ಥೆಗಳು ಘನತ್ಯಾಜ್ಯ ನಿರ್ವಹಣೆಗಾಗಿ ಪ್ರತ್ಯೇಕ ಸಂಸ್ಕರಣಾ ಘಟಕವನ್ನು ಅಳವಡಿಸುವಂತೆ ಸೂಚಿಸಿದೆ ಎಂದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಉಪಮೇಯರ್ ಡಿ.ಸುಕುಂ, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸದಸ್ಯ ಕಾರ್ಯದರ್ಶಿ ಎಸ್. ಎಸ್.ಲಿಂಗರಾಜ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ, ಉಪವಿಭಾಗಾಧಿಕಾರಿ ಪಿ.ಪ್ರಮೋದ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಟಿ.ಎಂ.ಸಿದ್ದೇಶ್ವರ ಬಾಬು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಪಾಲಿಕೆ ಸದಸ್ಯರು, ಜಿಲ್ಲೆಯ ವಿವಿಧ ಕೈಗಾರಿಕೆಗಳ ಕೈಗಾರಿಕೋದ್ಯಮಿಗಳು, ಕಾರ್ಮಿಕರು, ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾಯ್ದೆ ಅರಿತುಕೊಂಡು ಮಾಹಿತಿ ನೀಡಿ : ಆಯುಕ್ತರ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 10 : ಕರ್ನಾಟಕ ಮಾಹಿತಿ ಆಯೋಗಕ್ಕೆ ಇಡಿ ರಾಜ್ಯದ ಎಲ್ಲಜಿಲ್ಲೆಗಳಿಂದ ಬಂದ ಮೇಲ್ಮನವಿಗಾಗಿ ದಾಖಲಾದ ಪ್ರಕರಣಗಳಲ್ಲಿ ಯಾದಗಿರಿ ಜಿಲ್ಲೆ 19ನೇ ಸ್ಥಾನದಲ್ಲಿ ಇದ್ದು, ಇದನ್ನು ಸೊನ್ನೆಗೆ ಇಳಿಸುವಂತೆಯೇ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತರಾದ ಬದ್ರುದ್ದೀನ್.ಕೆ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶುಕ್ರವಾರ ರಂದು ಮಾಧ್ಯಮದವರೊಂದಿಗೆ ಸಂವಾದ ನಡೆಸಿದ ಅವರು ಮಾತನಾಡಿದರು. ಹಿಂದುಳಿದ ಕೆಕೆ ಭಾಗದ ಈ ಗಿರಿಜಿಲ್ಲೆಯಲ್ಲಿ ಕೇವಲ 723 ಅರ್ಜಿಗಳು ಸಲ್ಲಿಕೆ ಆಗಿವೆ ಎಂದರೇ ಇಲ್ಲಿನ ಅಧಿಕಾರಿಗಳು ಮಾಹಿತಿ ಹಕ್ಕು ಅಧಿನಿಯಮದಲ್ಲಿ ಸಾರ್ವಜನಿಕರು ಕೇಳಿದ ಮಾಹಿತಿಯನ್ನು ನೀಡುವ ಮೂಲಕ ಇದನ್ನು ಚೆನ್ನಾಗಿ ನಿಭಾಯಿಸಿದ್ದಾರೆಂದು ಹೇಳಿದರು. ಪಂಚಾಯಿತ್ ರಾಜ್ ಮತ್ತು ಗ್ರಾಮೀ ಣಾಭಿವೃದ್ಧಿ ಇಲಾಖೆಗೆ ಸಂಬಂಧಪಟ್ಟಂತೆಯೇ 280 ಅರ್ಜಿಗಳು ಬಂದಿವೆ ಎಂದರೇ ಗ್ರಾಮೀಣ ಭಾಗದಲ್ಲೂ ಸಾರ್ವಜನಿಕರು ಜಾಗೃತರಾಗಿದ್ದಾರೆ ಎಂಬ ಅರ್ಥ ಸೂಚಿಸುತ್ತದ ೨ ಎಂದರು. ಆರ್‌ಟಿಐನಲ್ಲಿ ಏನೇ ಮಾಹಿತಿ ಕೇಳಿದರೂ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ನಿಗದಿತ ಅವಧಿಯಲ್ಲಿ ಸೂಕ್ತ ಉತ್ತರ ನೀಡಲೇಬೇಕು. ಬದಲಿಗೆ ಕೇಳಿದವರು ಬ್ಲಾಕ್ ಮೇಲ್‌ರ ಇದ್ದಾರೆ ಎಂದು ನೀವೇ ಗೆಸ್ ಮಾಡಿ ಹಿಂದಿನ ಬಾಗಿಲಿನಿಂದ ಅವರನ್ನು ಸಂಪರ್ಕಕ್ಕೆ ಹೋಗುವುದು ತಪ್ಪು. ನೀವು ಸರಿಯಿದ್ದರೇ ಯಾವುದೇ ಕಾರಣಕ್ಕೂ ಅಂಜಬೇಡಿ. ಏನುಕೇಳಿದ್ದಾರೋ ಆ ಬಗ್ಗೆ ಮಾಹಿತಿ ನೀಡಿ, ಕೇಳಿದ್ದರಲ್ಲಿ ದೋಷವಿದ್ದರೇ ಹಿಂಬರಹದ ಮೂಲಕ ಉತ್ತರಿಸುವ ಮೂಲಕ ಸಾರ್ವಜನಿಕರು ಆಯೋಗಕ್ಕೆ ಬರುವುದನ್ನು ತಪ್ಪಿಸಿ. ಅರ್ಜಿದಾರರಿಗೆ ಅಧಿಕಾರಿಗಳು ಸತಾಯಿಸುವುದು ಸರಿಯಲ್ಲ, ಈ ಕಾಯ್ದೆ ಬಗ್ಗೆ ಸರಿಯಾಗಿ ಅರ್ಥ ಮಾಡಿಕೊಂಡರೇ ಯಾವುದೇ ತೊಂದರೆಯಾಗುವುದಿಲ್ಲ. ಸರಳ ಮತ್ತು ಗಂಭಿರ ಕಾಯ್ದೆ ಇದಾಗಿದೆ ಎಂಬ ಬಗ್ಗೆ ಅಧಿಕಾರಿಗಳಿಗೆ ಬೆಳಿಗ್ಗೆ ನಡೆದ ಸಭೆಯಲ್ಲಿ ಹೇಳಿದ್ದಾಗಿ ಆಯುಕ್ತ ಬದ್ರುದ್ಧೀನ್.ಕೆ ಅವರು ತಿಳಿಸಿದರು.ಅಧಿಕಾರಿಗಳ ಮತ್ತು ಸಾರ್ವಜನಿಕರ ಒಳಿತಿಗಾಗಿಯೇ ಈ ಕಾಯ್ದೆ ಇದೆ ಎಂಬುವುದನ್ನು ಮನದಟ್ಟು ಮಾಡಿಕೊಂಡು ಕೆಲಸ ಮಾಡಿದರೇ ಒಳ್ಳೆಯದಾಗುತ್ತದೆ. ಒಟ್ಟಾರೆ ಆಡಳಿತ ಪಾರದರ್ಶಕವಾಗಿ ನಡೆಯಲಿ ಎಂಬ ಉದ್ದೇಶ ಆಯೋಗ ಹೊಂದಿದೆ ಎಂದರು ಸಂವಾದದಲ್ಲಿ ಮಾತನಾಡಿದ ಇನ್ನೊರ್ವ ರಾಜ್ಯ ಮಾಹಿತಿ ಆಯುಕ್ತ ಡಾ.ಹರೀಶಕುಮಾರ, ಆಯೋಗ ಈ ಎಂಟು ತಿಂಗಳಲ್ಲಿ ಒಟ್ಟು ಇದ್ದ ಸುಮಾರು 55 ಸಾವಿರ ಮೇಲ್ಮನವಿಗಳಲ್ಲಿ ಸುಮಾರು 15 ಸಾವಿರಷ್ಟು ಅರ್ಜಿಗಳನ್ನು ಇತ್ಯರ್ಥಗೊಳಿಸುವ ಮೂಲಕ ದಾಖಲೆಯ ಕೆಲಸ ಮಾಡಿದೆ. ಇದಕ್ಕೆ ಆಯೋಗದಲ್ಲಿನ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಸಹಕಾರ ಅಮೂಲ್ಯವಾಗಿದೆ ಎಂದರು. 40040 ಪ್ರಕರಣಗಳು ಬಾಕಿ : ಆಯುಕ್ತ ಡಾ.ಹರೀಶಕುಮಾರ ಸಂವಾದದಲ್ಲಿ ಮಾತನಾಡಿ, ಇನ್ನೊರ್ವ ರಾಜ್ಯ ಮಾಹಿತಿ ಆಯುಕ್ತ ಡಾ.ಹರೀಶಕುಮಾರ, ಈಗ ನಿನ್ನೆಯವರೆಗಿನ ಡಾಟಾ ಪ್ರಕಾರ ರಾಜ್ಯದ ಎಲ್ಲ ಆಯೋಗಗಳ ಪೀಠಗಳಲ್ಲಿ 40040 ಅರ್ಜಿಗಳು ಬಾಕಿ ಉಳಿದಿವೆ. ನಿತ್ಯವೂ ಎಲ್ಲಡೆಯಿಂದ ಸುಮಾರು 2500 ಅರ್ಜಿಗಳು ಬರುತ್ತಿವೆ. ಅರ್ಜಿದಾರರನಿಗೆ ಎರಡು ಹಂತಗಳಲ್ಲಿ ಸೂಕ್ತ ಮಾಹಿತಿ ಸಿಗದೇ ಇದ್ದರೇ ಅರ್ಜಿ ಸಲ್ಲಿಸಿದವರು ಆಯೋಗಕ್ಕೂದೂರು ನೀಡಬಹುದು. ಸೂಕ್ತ ಮಾಹಿತಿ ಕೊಡದೇ ಇರುವ ಅಧಿಕಾರಿಗಳಿಂದ 25 ಸಾವಿರ ರೂ.ದಿಂದ 1 ಲಕ್ಷ ರೂ.ಗಳ ದಂಡ ಕೊಡಿಸಿದ ಉದಾಹರಣೆಗಳು ಇವೆ. ವ್ಯವಸ್ಥೆ ಬಗ್ಗೆ ಜನರು ಜಾಗೃತರಾಗಬೇಕು. ಜನರಿಂದಲೇ ಜನಾಂದೋಲನ ಆದಾಗ ಮಾತ್ರ ವ್ಯವಸ್ಥೆ ಸರಿದಾರಿಗೆ ಬರುತ್ತದೆ. ಈ ನಿಟ್ಟಿನಲ್ಲಿ ಕಾಲ, ಕಾಲಕ್ಕೆ ಆಯೋಗವು ಜಿಲ್ಲಾ ಮಟ್ಟದಲ್ಲಿ ಅಧಿಕಾರಿ, ಸಾರ್ವಜನಿಕರೊಂದಿಗೆ ಸಂವಾದಗಳನ್ನು ಏರ್ಪಡಿಸುವ ಮೂಲಕ ಅರಿವು ಮತ್ತು ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದೆ ಎಂದು ಡಾ.ಹರೀಶಕುಮಾರ ಹೇಳಿದರು.

ರಾಜ್ಯದಲ್ಲಿಯೇ ಅತಿ ಹೆಚ್ಚು 9211 ಪ್ರಕರಣಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ದಾಖಲಾಗಿವೆ ಮತ್ತು ಬೆಳಗಾವಿ, ರಾಯಚೂರು, ಬಾಗಲಕೋಟ, ಕೋಲಾರ ಹೀಗೆ ಹೆಚ್ಚು ಪ್ರಕರಣಗಳು ದಾಖಲಾದರೇ ಕೊಡಗು ಅತಿ ಕಡಿಮೆ ಅಂದ–ರೇ ಕೇವಲ 45 ಪ್ರಕರಣಗಳು ದಾಖಲಾಗಿವೆ ಎಂಬ ಮಾಹಿತಿಯನ್ನು ಡಾ.ಹರೀಶಕುಮಾರ ವಿವರಿಸಿದರು.

ಇದೇ ವೇಳೆ ಯಾದಗಿರಿ ಜಿಲ್ಲೆಯಲ್ಲಿಯಾವ, ಯಾವ ಇಲಾಖೆಗೆ ಎಷ್ಟು ಅರ್ಜಿಗಳು ಬಂದಿವೆ ಎಂಬ ಮಾಹಿತಿಯು ವಿವರಿಸಿದರು. ಒಂದು ವಾರದಲ್ಲಿ ನೇಮಕ. ಒಂದು ವಾರದಲ್ಲಿ ಕಲಬುರಗಿಯಲ್ಲಿನ ಕರ್ನಾಟಕ ಮಾಹಿತಿ ಆಯೋಗದ ಪೀಠಕ್ಕೆ ಖಾಯಂ ರಾಜ್ಯ ಆಯುಕ್ತರ ನೇಮಕವಾಗುತ್ತದೆ. ಈ ಕುರಿತಾಗಿ ಎಲ್ಲ ಪ್ರಕ್ರಿಯೆಗಳು ಮುಗಿದಿವೆ. ರಾಜ್ಯ ಮಾಹಿತಿ ಆಯುಕ್ತ ಬದ್ರುದ್ದೀನ್.ಕೆ ಅವರು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಲವ